ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 13 ಸಂಚಿಕೆ : 161
9–12–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 161

## ಬೆಳಗಾವಿ ಅಧಿವೇಶನ: ವಿಧಾಸಭೆ ಕಲಾಪ ಆರಂಭ

### ಸಾಲುಮರದ ತಿಮ್ಮಕ್ಕ ಸೇರಿ ಇತ್ತೀಚಿಗೆ ನಿಧನರಾದ ಗಣ್ಯರಿಗೆ ಸಂತಾಪ

**ಬೆಳಗಾವಿ:** ಕುಂದಾನಗರಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಸೋಮವಾರ ವಿಧಾನ ಮಂಡಲ ಉಭಯ ಸದನಗಳ ಚಳಿಗಾಲದ ಅಧಿವೇಶನ ಆರಂಭವಾಗಿದೆ.



ಇಂದು ವಿಧಾನಸಭೆ ಕಲಾಪ ಆರಂಭವಾಗುತ್ತಿದ್ದಂತೆ 'ವೃಕ್ಷಮಾತೆ' ಸಾಲುಮರದ ತಿಮ್ಮಕ್ಕ, ಮಾಜಿ ಸಚಿವ ಎಚ್.ವೈ. ಮೇಟಿ ಸೇರಿದಂತೆ ಇತ್ತೀಚಿಗೆ ನಿಧನರಾದ ಗಣ್ಯರಿಗೆ ಸಂತಾಪ ಸೂಚಿಸಲಾಯಿತು.

ಉತ್ತರ, ಕಲ್ಯಾಣ ಕರ್ನಾಟಕದ ಸಮಸ್ಯೆಗಳ ಪರಿಹಾರಕ್ಕೆ ಬುಧವಾರ, ಗುರುವಾರ ಮೀಸಲು ಅಧಿವೇಶನದಲ್ಲಿ ಬುಧವಾರ ಮತ್ತು ಗುರುವಾರ ಪೂರ್ತಿ ದಿನದ ಕಲಾಪವನ್ನು ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಚರ್ಚೆಗೆ ಮೀಸಲಿಡಲಾಗುವುದು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಹೇಳಿದ್ದಾರೆ.

ಇಂದು ಸುವರ್ಣಸೌಧದ ಎರಡನೇ ಮಹಡಿಯ ಕೊಠಡಿ ಸಂಖ್ಯೆ 238ರಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಹೊರಟ್ಟಿ, ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಬಗ್ಗೆ 145ನೇ ಅಧಿವೇಶನದಲ್ಲಿ 6 ಗಂಟೆ 35 ನಿಮಿಷ ಚರ್ಚೆಯಾಗಿದ್ದು, 19 ಜನ ಪರಿಷತ್ ಶಾಸಕರು ಮಾತನಾಡಿದ್ದಾರೆ ಎಂದರು.

151ನೇ ಅಧಿವೇಶನದಲ್ಲಿ 1 ಗಂಟೆ 40 ನಿಮಿಷ ಚರ್ಚೆಯಾಗಿದ್ದು, 6 ಜನ ಪರಿಷತ್ ಶಾಸಕರು ಮಾತನಾಡಿದ್ದಾರೆ. 154ನೇ ಅಧಿವೇಶನದಲ್ಲಿ 5 ಗಂಟೆ 12 ನಿಮಿಷ ಚರ್ಚೆಯಾಗಿದ್ದು, 11 ಜನ ಪರಿಷತ್ ಶಾಸಕರು ಮಾತನಾಡಿದ್ದಾರೆ. ಅದೇ ರೀತಿ ಈ ಬಾರಿಯ ಅಧಿವೇಶನದಲ್ಲಿ ಸಹ ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಚರ್ಚೆಗೆ ವಿಶೇಷ ಅವಕಾಶ ಕಲ್ಪಿಸಲಾಗುವುದು ಎಂದು ಹೇಳಿದರು.

## ಕುರ್ಚಿ ಕದನದ ನಡುವೆಯೇ ಸಿಎಂ ಸಿದ್ದುಗೆ ಬಿಗ್ ಶಾಕ್ ; ಸುಪ್ರೀಂ ಕೋರ್ಟ್ ನೋಟಿಸ್!



**ನವದೆಹಲಿ:** ಕಳೆದ 2023 ರ ರಾಜ್ಯ ಚುನಾವಣೆಯಲ್ಲಿ ವರುಣಾ ವಿಧಾನಸಭಾ ಕ್ಷೇತ್ರದಿಂದ ಆಯ್ಕೆಯಾಗಿದ್ದನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಯ ಕುರಿತು ಸುಪ್ರೀಂ ಕೋರ್ಟ್ ಇಂದು ಕರ್ನಾಟಕ ಸಿಎಂ ಸಿದ್ದರಾಮಯ್ಯ ಅವರಿಂದ ಪ್ರತಿಕ್ರಿಯೆ ಕೋರಿದೆ.

ಕೆ.ಶಂಕರ ಎಂಬವರು ಸಲ್ಲಿಸಿದ್ದ ಅರ್ಜಿಯ ಕುರಿತು ಉತ್ತರ ನೀಡುವಂತೆ ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರ ಪೀಠವು ಸಿದ್ದರಾಮಯ್ಯ ಅವರಿಗೆ ನೋಟೀಸ್ ಜಾರಿ ಮಾಡಿದೆ. ವರುಣಾ ವಿಧಾನಸಭಾ ಕ್ಷೇತ್ರದಿಂದ ಸಿದ್ದರಾಮಯ್ಯ ಅವರ ಆಯ್ಕೆಯನ್ನು ಅಸಿಂಧು ಎಂದು ಘೋಷಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದ ಕರ್ನಾಟಕ ಹೈಕೋರ್ಟ್ನ ಏಪ್ರಿಲ್ 22 ರ ಆದೇಶವನ್ನು ಪ್ರಶ್ನಿಸಿ ಶಂಕರ ಅವರು ಸುಪ್ರೀಂ ಕೋರ್ಟ್ಗೆ ಅರ್ಜಿ ಸಲ್ಲಿಸಿದ್ದಾರೆ.

ಜನತಾ ಪ್ರಾತಿನಿಧ್ಯ ಕಾಯ್ದೆ, 1951 ರ ನಿಬಂಧನೆಯ ಅಡಿಯಲ್ಲಿ ಸಿದ್ದರಾಮಯ್ಯ ಭ್ರಷ್ಟಾಚಾರದಲ್ಲಿ ತೊಡಗಿದ್ದಾ-ರೆ ಎಂದು ಅರ್ಜಿದಾರರು ಆರೋಪಿಸಿದ್ದಾರೆ.ಶಂಕರ ಅವರ ಚುನಾವಣಾ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿತ್ತು.

## ಡಿಕೆಶಿ ಅವಕಾಶ ಕೇಳಿದ್ರು, ನಾಯಕತ್ವ ಬದಲಾವಣೆಗೆ ಹೈಕಮಾಂಡ್ ಸಮ್ಮತಿಸಿಲ್ಲ

**ಬೆಳಗಾವಿ :** ಡಿಸಿಎಂ ಡಿಕೆ ಶಿವಕುಮಾರ್ ಅವರು ಅವಕಾಶ ಕೊಡಿ ಎಂದು ಕೇಳಿದ್ದರು. ಆದರೆ, ನಾಯಕತ್ವ ಬದಲಾವಣೆ ಪರಿಸ್ಥಿತಿ ಇಲ್ಲ ಎಂದು ಪಕ್ಷದ ಹೈಕಮಾಂಡ್ ಹೇಳಿದೆ ಎಂದು ಸಿಎಂ ಸಿದ್ದರಾಮಯ್ಯ ಅವರ ಪುತ್ರ, ಕಾಂಗ್ರೆಸ್ ಎಂಎಲ್‌ಸಿ ಯತೀಂದ್ರ ಸಿದ್ದರಾಮಯ್ಯ ಹೇಳಿದ್ದಾರೆ. ಬೆಳಗಾವಿಯಲ್ಲಿ ಸೋಮವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲಿ ಅಧಿಕಾರಕ್ಕಾಗಿ ಯಾವುದೇ ಕಿತ್ತಾಟ ನಡೆದಿಲ್ಲ. ಇದೆಲ್ಲ ಪ್ರತಿಪಕ್ಷದವರ ಸೃಷ್ಟಿ ಎಂದರು.



ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆ ಪರಿಸ್ಥಿತಿ ಇಲ್ಲ ಎಂದು ಹೈಕಮಾಂಡ್ ಹೇಳಿದೆ. ನಮ್ಮಲ್ಲಿ ಯಾವುದೇ ಕಿತ್ತಾಟ ಇಲ್ಲ. ಆ ರೀತಿಯ ವದಂತಿಯನ್ನು ಪ್ರತಿಪಕ್ಷದವರು ಹುಟ್ಟು ಹಾಕಿದ್ದಾರೆ. ಅಧಿಕಾರಕ್ಕೆ ಬಂದಾಗಿನಿಂದ ಸಿಎಂ ಬದಲಾಗುತ್ತಾರೆಂದು ಹೇಳುತ್ತಿದ್ದಾರೆ. ಆದರೆ, ಸಿಎಂ ಬದಲಾಗುತ್ತಾರೆ ಎಂಬ ಕನಸು ಕಾಣಬೇಕಷ್ಟೇ ಎಂದು ಯತೀಂದ್ರ ಹೇಳಿದ್ದಾರೆ. ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ 5 ವರ್ಷ ಪೂರೈಸುತ್ತಾರೆ ಎಂಬ ನಂಬಿಕೆ ವೈಯಕ್ತಿಕವಾಗಿ ನನಗಿದೆ. ದೆಹಲಿಯಲ್ಲಿಯೂ ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ. ಸಿಎಂ ಸಿದ್ದರಾಮಯ್ಯರನ್ನು ಹೈಕಮಾಂಡ್ ನಾಯಕರು ಕರೆದಿಲ್ಲ ಎಂದು ಯತೀಂದ್ರ ಸ್ಪಷ್ಟಪಡಿಸಿದ್ದಾರೆ.

**ಕುತೂಹಲ ಮೂಡಿಸಿದ ಯತೀಂದ್ರ ಹೇಳಿಕೆ**

ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆ ಚರ್ಚೆ ಜೋರಾದ ಬೆನ್ನಲ್ಲೇ ಹೈಕಮಾಂಡ್ ಸೂಚನೆ ಮೇರೆಗೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಎರಡೆರಡು 'ಬ್ರೇಕ್‌ಫಾಸ್ಟ್ ಮೀಟಿಂಗ್' ನಡೆಸಿ ಒಗ್ಗಟ್ಟು ಪ್ರದರ್ಶಿಸಿದ್ದರು. ಅದಾದ ನಂತರ, ನಾಯಕತ್ವ ಬದಲಾವಣೆ ವಿಚಾರ ಏನಿದ್ದರೂ ಹೈಕಮಾಂಡ್‌ಗೆ ಬಿಟ್ಟಿದ್ದೇವೆ ಎಂದಿದ್ದರು. ಇಷ್ಟಾದ ನಂತರ ಇದೀಗ, ಸಿದ್ದರಾಮಯ್ಯ 5 ವರ್ಷ ಮುಂದುವರಿಯಲಿದ್ದಾರೆ ಎಂದು ಯತೀಂದ್ರ ಬಹಿರಂಗ ಹೇಳಿಕೆ ನೀಡಿರುವುದು ಕುತೂಹಲಕ್ಕೆ ಕಾರಣವಾಗಿದೆ.

ಮತ್ತೊಂದೆಡೆ, ಕರ್ನಾಟಕ ಕಾಂಗ್ರೆಸ್ ನಾಯಕತ್ವ ಬದಲಾವಣೆ ವಿಚಾರವಾಗಿ ಕೆಲವು ದಿನಗಳ ಹಿಂದಷ್ಟೇ ಕಾಂಗ್ರೆಸ್ ವರಿಷ್ಠೆ ಸೋನಿಯಾ ಗಾಂಧಿ ನಿವಾಸದಲ್ಲಿ ಹೈಕಮಾಂಡ್ ನಾಯಕರು ಮಾತುಕತೆ ನಡೆಸಿದ್ದರು.

## ಭ್ರಷ್ಟಾಚಾರ ಸಾಬೀತಾದರೆ ಒಂದು ಕ್ಷಣ ಸಭಾಪತಿಯಾಗಿ ಉಳಿಯಲ್ಲ

### ಅವಿಶ್ವಾಸ ನಿರ್ಣಯ ಮಂಡನೆ ಸದನಕ್ಕೆ ಬಿಟ್ಟಿದ್ದು: ಹೊರಟ್ಟಿ



**ಬೆಂಗಳೂರು:** ನನ್ನ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆ ಸದನಕ್ಕೆ ಬಿಟ್ಟಿದ್ದು ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸ್ಪಷ್ಟಪಡಿಸಿದರು. ಬೆಳಗಾವಿ ಸುವರ್ಣ ಸೌಧದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, "ಬಹುಮತ ಇದೆಯೋ ಇಲ್ಲವೋ ಸರ್ಕಾರಕ್ಕೆ ಬಿಟ್ಟ ವಿಚಾರ, ಸದನದ ತೀರ್ಮಾನ ಅಂತಿಮವಾಗಿದೆ. ಚರ್ಚೆಗೆ ಬಂದರೆ ನಿಯಮದ ಪ್ರಕಾರ ಹೋಗ್ತೇನೆ. ಆದರೆ ವಿಧಾನಪರಿಷತ್ ನಲ್ಲಿ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆ ಮಾಡಿದ ಇತಿಹಾಸ ಇಲ್ಲ" ಎಂದರು.

ಕಳೆದ ಅಧಿವೇಶನದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ಸಿಟಿ ರವಿ ನಡುವಿನ ಜಟಾಪಟಿ ವಿಚಾರವಾಗಿ ಮಾತನಾಡಿ, "ಈ ಘಟನೆ ನಡೆದ ಸಂದರ್ಭದಲ್ಲಿ ಪರಿಷತ್ ಇಬ್ಬರು ಕಾರ್ಯದರ್ಶಿ ಜೊತೆಗೆ ಚರ್ಚೆ ಮಾಡಲಾಗಿದೆ. ಅಲ್ಲದೆ 18–1–25 ಕ್ಕೆ ಈ ವಿಚಾರವನ್ನು

ನೀತಿ ನಿರೂಪಣಾ ಸಮಿತಿಗೆ ಕೊಡಲಾಗಿದೆ. ನೀತಿ ನಿರೂಪಣಾ ಸಮಿತಿ ಎರಡು ಬಾರಿ ಸಭೆ ನಡೆಸಿ ಚರ್ಚೆ ಮಾಡಿದ್ದಾರೆ. ಇಬ್ಬರ ಜೊತೆಗೆ ಮಾತುಕತೆ ನಡೆಸಿದ್ದಾರೆ" ಎಂದರು.

ಘಟನೆಗೆ ಸಂಬಂಧಿಸಿದಂತೆ ಯಾವುದೇ ನಿರ್ಲಕ್ಷ್ಯ ಮಾಡಿಲ್ಲ. ನಮ್ಮ ಕಡೆಯಿಂದ ಏನಾಗಬೇಕೋ ಅದನ್ನು ಮಾಡಿದ್ದೇವೆ. ಸಮಿತಿ ವರದಿ ಬಂದ ಬಳಿಕ ಕ್ರಮ ಕೈಗೊಳ್ಳುತ್ತೇನೆ. ಈ ವಿಚಾರವಾಗಿ ನಾನು ಜವಾಬ್ದಾರಿಯಿಂದ ನಮ್ಮ ಕೆಲಸ ನಿರ್ವಹಣೆ ಮಾಡಿದ್ದೇವೆ" ಎಂದು ಸಮರ್ಥಿಸಿಕೊಂಡರು.

ಸಿಬ್ಬಂದಿ ನೇಮಕಾತಿಯಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪಕ್ಕೆ, "ಒಂದೇ ಒಂದು ಪೈಸೆ ಭ್ರಷ್ಟಾಚಾರ ಆಗಿದೆ ಎಂದು ಸಾಬೀತಾದರೆ ಒಂದು ಕ್ಷಣ ಈ ಸ್ಥಾನದಲ್ಲಿ ಇರಲ್ಲ. ಅವ್ಯವಹಾರದಲ್ಲಿ ಭಾಗಿಯಾದವರ ವಿರುದ್ಧ. ಕ್ರಮ ಆಗಿದೆ. 30 ಹುದ್ದೆಗಳನ್ನು ಕೆಇಎ ಮೂಲಕ ನೇಮಕಾತಿ ಮಾಡಲಾಗಿದೆ. ಏನಾದ್ರೂ ಅವ್ಯವಹಾರ ಆದರೆ ಕಾನೂನು ಪ್ರಕಾರ ಕ್ರಮ ಆಗಲಿ. ಕೆಇಎ ಮೂಲಕ ನೇಮಕಾತಿ ಆಗಿದೆ, ನಮ್ಮ ಪಾತ್ರ ಇಲ್ಲ. ಶಾಸಕರು ಆಪಾದನೆ ಮಾಡಬೇಕಾದರೆ ಯೋಚನೆ ಮಾಡಬೇಕು" ಎಂದರು.

ಉತ್ತರ ಕರ್ನಾಟಕ ಭಾಗದ ಚರ್ಚೆಗೆ ಆದ್ಯತೆ

ಈ ಬಾರಿ ಸದನದಲ್ಲಿ ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕದ ಬಗ್ಗೆ ಚರ್ಚೆಗೆ ಆದ್ಯತೆ ನೀಡಲಾಗುವುದು. ಕಳೆದ ಅಧಿವೇಶನದಲ್ಲಿ 6.35 ನಿಮಿಷ ಉತ್ತರ ಕರ್ನಾಟಕ ಚರ್ಚೆ ಆಗಿದೆ.

## ಒಂದೇ ಮಗು ಇದ್ದರೂ ಸರ್ಕಾರಿ ಶಾಲೆ ಮುಚ್ಚೋಲ್ಲ; ಮಧು ಬಂಗಾರಪ್ಪ

**ಬೆಂಗಳೂರು :** ರಾಜ್ಯದಲ್ಲಿ ಸರ್ಕಾರಿ ಶಾಲೆಗಳಲ್ಲಿ ಒಂದೇ ಒಂದು ಮಗುವಿದ್ದರೂ ಕೂಡ ಯಾವುದೇ ಕಾರಣಕ್ಕೂ ಕನ್ನಡ ಮಾಧ್ಯಮ ಶಾಲೆಗಳನ್ನು ಮುಚ್ಚುವುದಿಲ್ಲ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ವಿಧಾನಪರಿಷತ್‌ನಲ್ಲಿ ಸ್ಪಷ್ಟಪಡಿಸಿದರು.



ಸದಸ್ಯ ಚಿದಾನಂದ ಎಂ.ಗೌಡ ಹಾಗೂ ಉಮಾಶ್ರೀ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಕಡಿಮೆ ವಿದ್ಯಾರ್ಥಿಗಳ ಸಂಖ್ಯೆಯಿರುವ ಶಾಲೆಗಳನ್ನು ಸರ್ಕಾರ ಪಕ್ಕದ ಶಾಲೆಗಳಿಗೆ ವಿಲೀನಗೊಳಿಸುತ್ತದೆ ಇಲ್ಲವೇ ಶಾಲೆಗಳನ್ನು ಮುಚ್ಚಲಾಗುತ್ತದೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಅಪಪ್ರಚಾರ ನಡೆಸಲಾಗುತ್ತದೆ. ಇದಕ್ಕೆ ಮಾಧ್ಯಮಗಳು ಕೂಡ ಪುಷ್ಟಿ ನೀಡುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಾವು ಸರ್ಕಾರಿ ಶಾಲೆಗಳನ್ನು ಎಲ್ಲಿಯೂ ಮುಚ್ಚುತ್ತೇವೆ ಎಂದು ಇಲ್ಲವೇ ವಿಲೀನ ಮಾಡುತ್ತೇವೆ ಎಂದು ಹೇಳಿಲ್ಲ. ಅಗತ್ಯಬಿದ್ದರೆ ಸರ್ಕಾರಿ ಶಾಲೆಗಳ ಸಂಖ್ಯೆಯನ್ನು ಹೆಚ್ಚಳ ಮಾಡುತ್ತೇವೆ. ಈ ಬಗ್ಗೆ ಎದ್ದಿರುವ ಗೊಂದಲಗಳು ಕೇವಲ ಊಹಾಪೋಹ ಎಂದು ಸ್ಪಷ್ಟಪಡಿಸಿದರು.

ಕೆಲವು ಕಡೆ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಇದೆ. ಆದರೂ ಆ ಶಾಲೆಗಳಿಗೆ ನಾವು ಸಮವಸ್ತ್ರ, ಪಠ್ಯಪುಸ್ತಕ, ಮಧ್ಯಾಹ್ನದ ಬಿಸಿಯೂಟ ಕೊಡುತ್ತಿದ್ದೇವೆ. ಇದನ್ನು ಎಲ್ಲಿಯಾದರೂ ನಿಲ್ಲಿಸಿದೆಯೇ? ಎಂದು ವಿರೋಧಪಕ್ಷದ ಸದಸ್ಯರನ್ನು ಪ್ರಶ್ನೆ ಮಾಡಿದರು.

ನಮ್ಮ ರಕ್ತದ ಕಣಕಣದಲ್ಲೂ ಕನ್ನಡ ಇದೆ. ಕನ್ನಡದ ಬಗ್ಗೆ ನಮಗೆ ಬದ್ಧತೆ ಇದೆ. ಕಾಳಜಿಯೂ ಇದೆ. ಹಿಂದಿನ ಸರ್ಕಾರಗಳು ಸರ್ಕಾರಿ ಶಾಲೆಗಳನ್ನು ಯಾವ ದುಸ್ಥಿತಿಗೆ ತಂದಿದ್ದವು ಎಂದು ಹೇಳಲು ಹೋದರೆ ಬೇರೆ ಕತೆಯಾಗುತ್ತದೆ. ಅನುದಾನಿತ ಶಾಲೆಗಳಲ್ಲಿ ಅಗತ್ಯವಿರುವ ಸಿಬ್ಬಂದಿಗಳನ್ನು ನೇಮಕ ಮಾಡಿದ ಮೊಟ್ಟ ಮೊದಲ ಸರ್ಕಾರ ಎಂದು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಎಂದಾಗ ಆಡಳಿತ ಪಕ್ಷದ ಸದಸ್ಯರು ಚಪ್ಪಾಳೆ ತಟ್ಟಿ ಸ್ವಾಗತಿಸಿದರು.

## ದೇಶಾದ್ಯಂತ 4500 ಇಂಡಿಗೋ ವಿಮಾನ ಯಾನ ರದ್ದು

### ತಪ್ಪದ ಪ್ರಯಾಣಿಕರ ಪರದಾಟ

**ನವದೆಹಲಿ:** ಕಳೆದ ಒಂದು ವಾರದಲ್ಲಿ 4,500 ಕ್ಕೂ ಹೆಚ್ಚು ಇಂಡಿಗೋ ವಿಮಾನ ಯಾನಗಳನ್ನು ರದ್ದುಗೊಳಿಸಲಾಗಿದೆ. ಇಂದು ಕೂಡ ವಿಮಾನಯಾನಗಳು ರದ್ದುಗೊಂಡಿದ್ದು, ದೇಶಾದ್ಯಂತ ವಿಮಾನಗಳ ವಿಳಂಬ, ಗೊಂದಲ ಮತ್ತು ವಿಮಾನ ನಿಲ್ದಾಣದ ಜನದಟ್ಟಣೆ ಮುಂದುವರೆದಿದೆ.




ಇಂಡಿಗೋ ಬಿಕ್ಕಟ್ಟು: ದೆಹಲಿ, ಚೆನ್ನೈ ಮತ್ತು ಬೆಂಗಳೂರಿನಿಂದ ಇಂದು ಈಗಾಗಲೇ 300 ಕ್ಕೂ ಹೆಚ್ಚು ವಿಮಾನ ರದ್ದತಿ ವರದಿಯಾಗಿದೆ.ಇಂಡಿಗೋ ವಿಮಾನ ರದ್ದತಿ ಕುರಿತು ಲೈವ್ ನವೀಕರಣಗಳನ್ನು ಇಲ್ಲಿ ಟ್ರ್ಯಾಕ್ ಮಾಡಿ ವಿಮಾನ ರದ್ದತಿಗಳ ಕಾಲಾವಕಾಶವು ಇಂಡಿಗೋ ಬಿಕ್ಕಟ್ಟು ವೇಗವಾಗಿ ಹೆಚ್ಚುತ್ತಿರುವುದನ್ನು ತೋರಿಸುತ್ತಿದೆ.

ಮುಂಬೈ, ಬೆಂಗಳೂರು, ಹೈದರಾಬಾದ್ ಮತ್ತು ಕೋಲ್ಕತ್ತಾಗಳು ಅತಿದೊಡ್ಡ ಕಾರ್ಯಾಚರಣೆಯ ಹಿನ್ನಡೆಯನ್ನು ಕಾಣುತ್ತಿವೆ. ಬೆಂಗಳೂರು: 65 ಆಗಮನ ಮತ್ತು 62 ನಿರ್ಗಮನಗಳು ರದ್ದಾಗಿವೆ. ದೆಹಲಿ: 134 ರದ್ದತಿಗಳು, ಚೆನ್ನೈ 77 ರದ್ದತಿಯಾಗಿವೆ ಹೀಗಾಗಿ ರದ್ದಾದ ವಿಮಾನಗಳು ಟರ್ಮಿನಲ್‌ಗಳಿಂದ ತುಂಬಿ ಹೋಗಿವೆ, ಏಕೆಂದರೆ ಪ್ರಯಾಣಿಕರು ತಮ್ಮ ಲಗೇಜ್‌ಗಳನ್ನು ಮರು ಬುಕ್ ಮಾಡಲು ಅಥವಾ ಹುಡುಕಲು ಪರದಾಡುತ್ತಿದ್ದಾರೆ.

ದೆಹಲಿಯ ಇಂಡಿಗೋದ ಅತಿದೊಡ್ಡ ಕೇಂದ್ರವಾದ ಟರ್ಮಿನಲ್ 1 ರಲ್ಲಿ, ಆಗಮನ ಪ್ರದೇಶದಲ್ಲಿ ಹಕ್ಕುದಾರರಿಲ್ಲದ ಸಾಮಾನುಗಳು ಸಾಲುಗಟ್ಟಿ ನಿಂತಿದ್ದು, ಜನರು ಸೂಟ್‌ಕೇಸ್‌ಗಳ ಸಾಲುಗಳನ್ನು ಹುಡುಕಾಡಲು ಹೆಣಗಾಡುತ್ತಿದ್ದಾರೆ.

ಇಂಡಿಗೋ ಹೇಗೆ ಬಯಲಾಯಿತು? ಇಂಡಿಗೋ ಬಿಕ್ಕಟ್ಟು ಏಕಕಾಲದಲ್ಲಿ ಹಲವಾರು ವೈಫಲ್ಯಗಳ ಪರಿಣಾಮವಾಗಿದೆ:ನಿರಂತರ ಪೈಲಟ್ ಕೊರತೆ, ಏರ್‌ಬಸ್ 320 ಸಾಫ್?ಟವೇರ್ ಸಲಹೆಯಿಂದ ಉಂಟಾದ ವಿಳಂಬಗಳು, ಕಟ್ಟುನಿಟ್ಟಾದ ವಿಮಾನ ಕರ್ತವ್ಯ ಸಮಯ ಮಿತಿಗಳ ಹಠಾತ್ ಜಾರಿ, ಅಕ್ಟೋಬರ್ 26 ರಿಂದ ವಿಮಾನಯಾನ ಸಂಸ್ಥೆಯ ಆಕ್ರಮಣಕಾರಿ ಚಳಿಗಾಲದ ವೇಳಾಪಟ್ಟಿ ವಿಸ್ತರಣೆ, ರಾತ್ರಿ ಕಾರ್ಯಾಚರಣೆಗಳನ್ನು ಮಿತಿಗೊಳಿಸಲು ಮತ್ತು ಸಿಬ್ಬಂದಿಗೆ ದೀರ್ಘ ವಿಶ್ರಾಂತಿಯನ್ನು ಖಚಿತಪಡಿಸಿಕೊಳ್ಳಲು ವಿನ್ಯಾಸಗೊಳಿಸಲಾದ ಹೊಸ ಆಯಾಸ ನಿಯಮಗಳು, ಮಧ್ಯರಾತ್ರಿಯ ನಂತರ ವಿಳಂಬವಾದ ವಾರಾಂತ್ಯದ ವಿಮಾನಗಳ ನಂತರ ನೂರಾರು ಪೈಲಟ್‌ಗಳನ್ನು ನಿಷ್ಕ್ರಿಯಗೊಳಿಸುವಂತೆ ಮಾಡಿವೆ.

## ಬೆಳಗಾವಿಯಲ್ಲಿ ನಾಡದ್ರೋಹಿ ಘೋಷಣೆ ಕೂಗಿದ ಎಂಇಎಸ್ ಮುಖಂಡರು ಪೊಲೀಸ್ ವಶಕ್ಕೆ




**ಬೆಳಗಾವಿ, 8:** ವಿಧಾನಸಭೆ ಚಳಿಗಾಲದ ಅಧಿವೇಶನ ಸಮಯದಲ್ಲಿ ಮಹಾರಾಷ್ಟ್ರದ ಶಿವಸೇನೆ ಹಾಗೂ ಎಂಇಎಸ್ ಕಾರ್ಯಕರ್ತರು ಪುನಃ ಪುಂಡಾಟಿಕೆಗೆ ಮುಂದಾಗಿದ್ದು ಗಡಿಭಾಗದಲ್ಲಿ ಉದ್ವಿಗ್ನತೆ ಹೆಚ್ಚಿಸಿದೆ. ಕೊಲ್ಲಾಪುರದಲ್ಲಿ ಶಿವಸೇನೆ ಪುಂಡರು ರಸ್ತೆಗಿಳಿದು ಕರ್ನಾಟಕ ಸಾರಿಗೆ ಬಸ್ಸುಗಳನ್ನು ತಡೆದು ಪ್ರತಿಭಟನೆ ನಡೆಸಿದ್ದಾರೆ. ಕೊಲ್ಲಾಪುರ ಸೆಂಟ್ರಲ್ ಬಸ್ ಸ್ಟ್ಯಾಂಡ್‌ನಲ್ಲಿ ಶಿವಸೇನೆ ಕಾರ್ಯಕರ್ತರು ಉದ್ಧಟತನಕ್ಕೆ ತೊಡಗಿದ್ದು, ಠಾಕ್ರೆ ಬಣದ ಶಿವಸೇನೆ ಜಿಲ್ಲಾಧ್ಯಕ್ಷ ವಿಜಯ ದೇವಣೆ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆದಿದೆ.

ಈ ನಡುವೆ ಬೆಳಗಾವಿಯಲ್ಲಿ ಎಂಇಎಸ್ ಮಹಾಮೇಳಕ್ಕೆ ಸಂಬಂಧಿಸಿದ ಉದ್ವಿಗ್ನತೆ ಹೆಚ್ಚಿದ್ದು, ಎಂಇಎಸ್ ಮುಖಂಡ ಮಾಳೋಜಿ ಅಷ್ಟೇಕರ್ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ವ್ಯಾಕ್ಸಿಡಿಪೋದ ಮೈದಾನಕ್ಕೆ ಆಗಮಿಸುತ್ತಿದ್ದಂತೆಯೇ ಮಾಜಿ ಮೇಯರ್ ಅಷ್ಟೇಕರ್ ಅವರನ್ನು ವಶಕ್ಕೆ ಪಡೆಯಲಾಗಿದೆ.

## ಸಚಿವ ಕೃಷ್ಣಬೈರೇಗೌಡ ಅಧಿಕಾರಿಗಳಿಗೆ ಚುರುಕು ಮುಟ್ಟಿಸಿ ಇಲಾಖೆ ಕೆಲಸಕ್ಕೆ ಮತ್ತಷ್ಟು ಬಲಗೊಳಿಸಿದ್ದಾರೆ : ಶಾಸಕ ಡಿ.ಜಿ.ಶಾಂತನಗೌಡ



**ಹೊನ್ನಾಳಿ :** ಕಂದಾಯ ಸಚಿವ ಕೃಷ್ಣಬೈರೆಗೌಡ ತಮ್ಮ ಇಲಾಖೆಯಲ್ಲಿ ಕ್ರಾಂತಿಯನ್ನೇ ಮಾಡಿ ರೈತರಿಗೆ ಆಗುತ್ತಿದ್ದ ಹಲವಾರು ತೊಂದರೆಗಳನ್ನು ನಿವಾರಿಸಿ ಕಂದಾಯ ಇಲಾಖೆ ಅಧಿಕಾರಿಗಳಿಗೆ ಚುರುಕು ಮುಟ್ಟಿಸಿ ಇಲಾಖೆಯ ಕೆಲಸಕ್ಕೆ ಮತ್ತಷ್ಟು ವೇಗ ನೀಡಿದ್ದಾರೆ ಎಂದು ಶಾಸಕ ಡಿ.ಜಿ.ಶಾಂತನಗೌಡ ಹೇಳಿದರು.

ಹೊನ್ನಾಳಿ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಕಂದಾಯ ಹಾಗೂ ಅರಣ್ಯ ಅಧಿಕಾರಿಗಳ ಜಂಟಿ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ನೀವು ಸಹ ಹೊನ್ನಾಳಿ ಹಾಗೂ ನ್ಯಾಮತಿ ತಾಲೂಕಿನಲ್ಲಿ ಸಾರ್ವಜನಿಕರು ಹಾಗೂ ರೈತರನ್ನು ಅಲೆದಾಡಿಸುವ ವಿಷಯ ಗೊತ್ತಾದರೆ ಅಂತಹ ಅಧಿಕಾರಿಗಳು ಹಾಗೂ ಸಿಬ್ಬಂಧಿಗಳ ವಿರುದ್ದ ಕ್ರಮಕ್ಕೆ ಶಿಫಾರಸ್ಸು ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ನಮ್ಮ ಸರಕಾರ ಬಂದಾಗಿನಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ರೈತರ, ಸಾರ್ವಜನಿಕರು, ವಿಧ್ಯಾರ್ಥಿಗಳು ಸೇರಿದಂತೆ ಎಲ್ಲರಿಗೂ ಸರಕಾರದ ಯಾವುದೇ ಸೌಲಭ್ಯಗಳಿರಲ್ಲಿ ಅವುಗಳನ್ನು ತಕ್ಷಣ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ನಮ್ಮ ಸರಕಾರ ನೋಡಿಕೊಂಡಿದೆ ಎಂದು ಹೇಳಿದರು.

ಕಂದಾಯ ಇಲಾಖೆಯಲ್ಲಿ ದರಖಾಸ್ತುಪೋಡಿ, ಪೌತಿಖಾತೆ, ಕಂದಾಯಗ್ರಾಮ, 94ಸಿ, ಫಾರಂ ನಂ 50 ಹಾಗೂ 53 ಅಡಿಯಲ್ಲಿ ಬರುವ ಬಗರ್‌ಹುಕುಂ ಅರ್ಜಿಗಳ ವಿಲೇವಾರಿ ಮಾಡಿ. ಯಾವುದೇ ರೈತ ಕಂದಾಯ ಇಲಾಖೆ ಸೇರಿದಂತೆ ಯಾವುದೇ ಸರಕಾರಿ ಕಚೇರಿಗಳಿಗೆ ಅಲೆಯದಂತೆ ನಮ್ಮ ಸರಕಾರ ಮಾಡಿದೆ ಎಂದರು.

## ಪರಪ್ಪನ ಅಗ್ರಹಾರ: ಸಹ ಕೈದಿಗೆ ನಟ ದರ್ಶನ್ ಕಿರುಕುಳ, ಸೆಲ್ ಬಳಿ ಕಟ್ಟೆಚ್ಚರ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲುಪಾಲಾಗಿರುವ ನಟ ದರ್ಶನ್ ಜೈಲಿನಲ್ಲೂ ಯಡವಟ್ಟು ಮಾಡಿಕೊಂಡಿದ್ದು, ಸಹ ಕೈದಿಗೆ ಥಳಿಸಿದ್ದಾರೆ ಎಂದು ವರದಿಯಾಗಿದೆ.



ಸುದ್ದಿಮಾಧ್ಯಮವೊಂದು ಈ ಕುರಿತು ವರದಿ ಮಾಡಿದ್ದು, ಜಾಮೀನು ರದ್ದಾಗಿ ಪರಪ್ಪನ ಅಗ್ರಹಾರ ಜೈಲಿಗೆ ಮರಳಿರುವ ನಟ ದರ್ಶನ್ ಸಹ ಕೈದಿಗಳಿಗೆ ಮಾನಸಿಕ ಹಾಗೂ ದೈಹಿಕ ಕಿರುಕುಳ ನೀಡುತ್ತಿರುವುದು ಬೆಳಕಿಗೆ ಬಂದಿದ್ದು, ದೊಡ್ಡ ಜಗಳಗಳು ನಡೆದಿವೆ ಎಂದು ವರದಿ ಮಾಡಿದೆ.

ಜೈಲಿನಲ್ಲಿ ನಡೆಯುತ್ತಿದ್ದ ಅಕ್ರಮಗಳು ಕುರಿತು ಮಾಧ್ಯಮಗಳು ಸುದ್ದಿ ಮಾಡುತ್ತಲೇ ಅಧಿಕಾರಿಗಳು ಎಚ್ಚೆತ್ತುಕೊಂಡು ಅಕ್ರಮಗಳಿಗೆ ಬ್ರೇಕ್ ಹಾಕಿದ್ದಾರೆ. ಈಗ ಬೆಂಗಳೂರಿನ ಪರಪ್ಪನ ಅಗ್ರಹಾರದಲ್ಲಿ ನಿಯಮಗಳು ಕಠಿಣವಾಗಿದ್ದು, ಈ ನಿಯಮಗಳಿಂದ ನಟ ದರ್ಶನ್ ತತ್ತರಿಸಿಹೋಗಿದ್ದಾರಂತೆ. ಮಾನಸಿಕ ಒತ್ತಡಕ್ಕೆ ಒಳಗಾಗಿ ನಟ ದರ್ಶನ್ ಸಹ ಕೈದಿಗಳಿಗೆ ಅವರು ಕಿರುಕುಳ ನೀಡುತ್ತಿರುವ ಆರೋಪ ಕೇಳಿ ಬಂದಿದೆ.

**ತೀವ್ರನಿಗಾದಲ್ಲಿ ದರ್ಶನ್, ಕಠಿಣ ನಿಯಮ** :ದರ್ಶನ್ ಈ ಬಾರಿ ಜೈಲು ಸೇರಿದಾಗಿನಿಂದಲೂ ಕಠಿಣ ನಿಯಮ ಜಾರಿಯಲ್ಲಿದೆ. ಅಲ್ಲದೆ, ಇತ್ತೀಚೆಗೆ ಜೈಲಿನ ಪಾರ್ಟಿ ವಿಡಿಯೋ ವೈರಲ್ ಆಗುತ್ತಿದ್ದಂತೆ ಎಲ್ಲವೂ ಬದಲಾಗಿದೆ. ಐಪಿಎಸ್ ಅಧಿಕಾರಿ ಅಂಶು ಕುಮಾರ್ ಜೈಲಿನ ಮುಖ್ಯ ಸೂಪರಿಂಟೆಂಡೆಂಟ್ ಆಗಿ ನೇಮಕಗೊಂಡಿದ್ದು, ಜೈಲಿನಲ್ಲಿ ಅತಿ ಕಠಿಣ ರೂಲ್ಸ್ ಜಾರಿಗೆ ತಂದಿದ್ದಾರೆ. ದರ್ಶನ್ ಅವರು ಸಾಲಿನಲ್ಲಿ ನಿಂತು ತಾವೇ ಊಟ ತೆಗೆದುಕೊಂಡು ಬರಬೇಕಿದೆ. ಒಳಗಿನ ಶೌಚಾಲಯ ಕೂಡ ತಾವೇ ಕ್ಲೀನ್ ಮಾಡಬೇಕಿದೆ. ಈ ನಿಯಮಗಳಿಂದ ದರ್ಶನ್ ತತ್ತರಿಸಿ ಹೋಗಿದ್ದಾರೆ.

## ರಾಶಿ ಭವಿಷ್ಯ

### ಮೇಷ ರಾಶಿ

ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ಆದರೆ ವಿಪರೀತವಾಗಿ ತಿನ್ನುವುದು ನಿಮ್ಮ ಮರುದಿನದ ಮುಂಜಾನೆಗೆ ಅಸಮಾಧಾನವುಂಟುಮಾಡಬಹುದು. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು. ಇದಕ್ಕಾಗಿ ನೀವು ನಿಮ್ಮ ಯಾವುದೇ ವಿಶ್ವಾಸಾರ್ಹರಿಂದ ಸಲಹೆಯನ್ನು ತೆಗೆದುಕೊಳ್ಳಬೇಕು. ಮಕ್ಕಳು ಅವರ ವೃತ್ತಿಯನ್ನು ಯೋಜಿಸುವುದಕ್ಕಿಂತ ಹೆಚ್ಚಾಗಿ ಹೊರಾಂಗಣ ಚಟುವಟಿಕೆಗಳಲ್ಲೇ ಸಮಯ ಕಳೆಯುವುದರಿಂದ ಅವರು ನಿರಾಸೆ ಉಂಟುಮಾಡಬಹುದು.

### ವೃಷಭ ರಾಶಿ

ಇದು ಹೃದಯ ರೋಗಿಗಳಿಗೆ ಕಾಫಿ ಬಿಡಲು ಸರಿಯಾದ ಸಮಯ. ಯಾವುದೇ ಮುಂದುವರಿದ ಬಳಕೆ ನಿಮ್ಮ ಹೃದಯದ ಮೇಲೆ ಅನವಶ್ಯಕ ಒತ್ತಡ ತರುತ್ತದೆ. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ – ಯಾವುದೇಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ. ಇತರರಲ್ಲಿ ಅನಗತ್ಯವಾಗಿ ದೋಷಗಳನ್ನು ಹುಡುಕುವ ನಿಮ್ಮ ಬುದ್ಧಿಗೆ ಸಂಬಂಧಿಕರಿಂದ ಟೀಕೆ ಎದುರಾಗಬಹುದು.

### ಮಿಥುನ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ಹಳೆಯ ಸಂಬಂಧಿಗಳು ಅವಿವೇಕದ ಬೇಡಿಕೆಗಳನ್ನು ಮಾಡುವ ಸಾಧ್ಯತೆಯಿದೆ.

### ಕರ್ಕ ರಾಶಿ

ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ. ಕುಟುಂಬದ ಸದಸ್ಯರೊಂದಿಗೆ ಸಾಮಾಜಿಕ ಕೂಟ ಎಲ್ಲರನ್ನೂ ಒಳ್ಳೆಯ ಚಿತ್ತದಲ್ಲಿಡುತ್ತದೆ. ಒಬ್ಬ ಆಸಕ್ತಿದಾಯಕ ವ್ಯಕ್ತಿಯನ್ನು ಭೇಟಿ ಮಾಡುವ ಸಾಧ್ಯತೆಗಳಿವೆ. ನಿಮ್ಮ ಸಮಯ ಮತ್ತು ಶಕ್ತಿಯನ್ನು ಇತರರಿಗೆ ಸಹಾಯ ಮಾಡಲು ಸಮರ್ಪಿಸಿ – ಆದರೆ ನಿಮಗೆ ಸಂಬಂಧಿಸಿರದ ವಿಷಯಗಳಲ್ಲಿ ತೊಡಗಿಸಿಕೊಳ್ಳಬೇಡಿ.

### ಸಿಂಹ ರಾಶಿ

ಆರೋಗ್ಯ ಚೆನ್ನಾಗಿರುತ್ತದೆ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ಮಕ್ಕಳಿಗೆ ಅವರ ಮನೆಗೆಲಸ ಪೂರ್ಣಗೊಳಿಸಲು ಸಹಾಯ ಮಾಡುವ ಸಮಯ. ಸಂಜೆಗೆ ಏನಾದರೂ ವಿಶೇಷವಾದದ್ದನ್ನು ಯೋಜಿಸಿ ಮತ್ತು ಅದನ್ನು ಸಾಧ್ಯವಾದಷ್ಟು ಪ್ರೇಮಮಯವಾಗಿಸಲು ಪ್ರಯತ್ನಿಸಿ. ನಿಮ್ಮ ಸಮಯದ ಮೌಲ್ಯವನ್ನು ಅರ್ಥಮಾಡಿಕೊಳ್ಳಿ,

### ಕನ್ಯಾ ರಾಶಿ

ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ಒಂದು ಧಾರ್ಮಿಕ ಸ್ಥಳಕ್ಕೆ ಭೇಟಿ ಅಥವಾ ಒಂದು ಸಂತನಂಥ ವ್ಯಕ್ತಿ ಸಾಂತ್ವನ ಮತ್ತು ಮನಸ್ಸಿನ ಶಾಂತಿ ತರುತ್ತಾರೆ. ನಿಮ್ಮ ಮನದನ್ನೆಯ ವಿಚಿತ್ರ ನಡವಳಿಕೆ ನಿಮ್ಮ ಮನಸ್ಥಿತಿಗೆ ಅಸಮಾಧಾನ ತರಬಹುದು. ತೆರಿಗೆ ಮತ್ತು ವಿಮೆ ವಿಷಯಗಳ ಬಗ್ಗೆ ಗಮನ ನೀಡುವ ಅಗತ್ಯವಿದೆ.

### ತುಲಾ ರಾಶಿ

ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಸರೋವರದಲ್ಲಿನ ಸೊಗಸಾದ ಮೀನನ್ನು ಸಂಧಿಸುವ ಅವಕಾಶಗಳು ಸಾಧ್ಯತೆಗಳು ಇಂದು ಹೆಚ್ಚಿವೆ.

### ವೃಶ್ಚಿಕ ರಾಶಿ

ನಿರಾಶಾದಾಯಕ ಮನೋಭಾವವು ಕೇವಲ ನಿಮ್ಮ ಅವಕಾಶಗಳನ್ನು ಸೀಮಿತಗೊಳಿಸುವುದಷ್ಟೇ ಅಲ್ಲದೇ ದೇಹದ ಸಾಮರಸ್ಯವನ್ನೂ ಭಂಗಪಡಿಸುವುದರಿಂದ ಅವುಗಳನ್ನು ತಡೆಯಬೇಕು. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು. ಮೊಜಮ್ಮಕ್ಕಳು ಅಪಾರ ಸಂತೊಷದ ಮೂಲವಾಗುತ್ತಾರೆ. ಇಂದು ಪ್ರೇಮ ಜೀವನದ ವಿವಾದಾತ್ಮಕವಾಗಿರಬಹುದು.

### ಧನು ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು ಅಥವಾ ಹೊಸ ಯೋಜನೆಗಳಿಗೆ ಕೆಲಸ ಮಾಡಲು ಹಣ ಕೇಳಬಹುದು. ಒತ್ತಡದ ಅವಧಿಯಿದ್ದರೂ ಕುಟುಂಬದ ಬೆಂಬಲ ನಿಮಗೆ ಸಹಾಯ ಮಾಡುತ್ತದೆ. ನಿಮ್ಮ ಪ್ರೀತಿಪಾತ್ರರ ನಿಷ್ಠೆಯನ್ನು ಅನುಮಾನಿಸಬೇಡಿ.

### ಮಕರ ರಾಶಿ

ನೀವು ಮನಸ್ಸಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ, ಜಾಣತನ ಮತ್ತು ಸಭ್ಯತೆಯನ್ನು ಬಳಸಬೇಕಾಗುತ್ತದೆ. ಇಂದಿನ ದಿನ ಯಾರಿಗೂ ಸಾಲ ನೀಡಬೇಡಿ ಮತ್ತು ಕೊಡುವುದು ಅಗತ್ಯವಾಗಿದ್ದರೆ ಕೊಡುವವರಿಂದ ಅವರು ಯಾವಾಗ ಹಣವನ್ನು ಮರುಪಾವತಿ ಮಾಡುತ್ತಾರೆಂದು ಬರವಣಿಗೆಯಲ್ಲಿ ತೆಗೆದುಕೊಳ್ಳಿ ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಜಡಗಿಸಿಕೊಳ್ಳಲು ಒಳ್ಳೆಯ ಸಮಯ. ಪ್ರೀತಿ ನಿಮ್ಮ ಪ್ರೀತಿಪಾತ್ರರೊಡನೆ ಹಂಚಿಕೊಳ್ಳಬೇಕಾದ ಭಾವನೆ.

### ಕುಂಭ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ಸಂಗಾತಿ ಧೂಮಪಾನ ಬಿಡುವಂತೆ ನಿಮ್ಮನ್ನು ಉತ್ತೇಜಿಸುತ್ತಾರೆ. ಇತರ ಕೆಟ್ಟ ಪರಿಣಾಮಗಳನ್ನು ತೊಡೆದುಹಾಕಲೂ ಇದು ಸರಿಯಾದ ಸಮಯ. ಕಬ್ಬಿಣ ಬಿಸಿಯಿದ್ದಾಗಲೇ ನಾವು ಬಡಿಯಬೇಕೆಂದು ನೆನಪಿಡಿ.

### ಮೀನ ರಾಶಿ

ನಿಮ್ಮ ಅನಿರೀಕ್ಷಿತ ಸ್ವಭಾವ ನಿಮ್ಮ ವೈವಾಹಿಕ ಸಂಬಂಧವನ್ನು ಹಾಳು ಮಾಡಲು ಬಿಡಬೇಡಿ. ಇದನ್ನು ತಡೆಯುವುದನ್ನು ಖಚಿತಪಡಿಸಿಕೊಳ್ಳಿ, ಇಲ್ಲದಿದ್ದಲ್ಲಿ ನೀವು ನಂತರ ವಿಷಾದಪಡಬಹುದು.

ನೀವು ಜನರು ನಿಮ್ಮಿಂದ ಏನು ಬಯಸುತ್ತಾರೆಂದು ನಿಖರವಾಗಿ ತಿಳಿದಿರುವಂತೆ ತೋರುತ್ತದೆ –ಆದರೆ ಇಂದು ನಿಮ್ಮ ಖರ್ಚುಗಳಲ್ಲಿ ತುಂಬಾ ಉದಾರಿಯಾಗದಿರಲು ಪ್ರಯತ್ನಿಸಿ. ಕೌಟುಂಬಿಕ ಒತ್ತಡ ನಿಮ್ಮ ಗಮನ ಬೇರೆಡೆಗೆ ಸೆಳೆಯದಿರಲಿ.

# ವಸಾಹತು ಶಾಹಿ ವಿಸ್ತರಣಾ ತಂತ್ರಗಳನ್ನರಿಯಲು ಭಾರತೀಯರು ವಿಫಲ

**ಗದಗ:** ಬಹುತ್ವ ರಾಜಕೀಯ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಹೊಂದಿರುವ ಭಾರತಕ್ಕೆ ವ್ಯಾಪಾರಕ್ಕಾಗಿ ಆಗಮಿಸಿದ ವಸಾಹತುಶಾಹಿಗಳಲ್ಲಿ ಬ್ರಿಟಿಷರು ತಮ್ಮ ಪ್ರಾಬಲ್ಯ ಸಾಧಿಸಲು 'ಒಡೆದು ಆಳುವ' ನೀತಿಯನ್ನು ಅನುಸರಿಸಿ ಯಶಸ್ವಿಯಾಗಿ ಬಹುಕಾಲದವರೆಗೆ ಭಾರತವನ್ನಾಳಿದರೆಂದು ಮುಳಗುಂದದ ಆರ್.ಎನ್. ದೇಶಪಾಂಡೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಪ್ರಾಧ್ಯಾಪಕ ಪ್ರೊ. ಕೆ.ಎಂ. ಶಿರೂರ ಹೇಳಿದರು. ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗವು ಐಕ್ಯುಎಸಿ ಅಡಿಯಲ್ಲಿ ಆಯೋಜಿಸಿದ್ದ




'ಭಾರತದಲ್ಲಿ ವಸಾಹತುಶಾಹಿ ವಿಸರಣೆಗೆ ನಡೆದ ಯುದ್ಧಗಳು' ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡುತ್ತ, ವಸಾಹತುಶಾಹಿಗಳು ಭಾರತದಲ್ಲಿ ರಾಜಕೀಯ ಮತ್ತು ಆರ್ಥಿಕವಾಗಿ ಪ್ರಭುತ್ವ ಸಂಪಾದಿಸಲು ಭಾರತೀಯ ಅರಸರ ದೌರ್ಬಲ್ಯಗಳು ಮತ್ತು ಸಾಮಾಜಿಕ ವ್ಯವಸ್ಥೆಯ ಭಿನ್ನಾಭಿಪ್ರಾಯಗಳನ್ನು ಅಸ್ತ್ರಗಳನ್ನಾಗಿ ಬಳಸಿಕೊಂಡರು. ಅವರ ತಂತ್ರಗಳನ್ನು ಅರಿಯಲು ಭಾರತೀಯ ಅರಸರು ವಿಫಲರಾದರೆಂದು ಹೇಳಿದರು.

ಇತಿಹಾಸ ವಿಭಾಗದ ಮುಖ್ಯಸ್ಥ ಪ್ರೊ. ಅಪ್ಪಣ್ಣ ಹಂಜೆ ಪ್ರಾಸ್ತಾವಿಕವಾಗಿ ಮಾತನಾಡುತ್ತ, ಭಾರತಕ್ಕೆ ವ್ಯಾಪಾರಕ್ಕಾಗಿ ಆಗಮಿಸಿದ ವಸಾಹತುಶಾಹಿಗಳಲ್ಲಿ ಬ್ರಿಟಿಷರು ವ್ಯಾಪಾರದಲ್ಲಿ ತಮ್ಮೊಂದಿಗೆ ಪೈಪೋಟಿ ನಡೆಸಿದ್ದ ಪೋರ್ಚುಗೀಸರು, ಡಚ್ಚರು, ಡೇನರು, ಫ್ರೇಂಚರನ್ನು ರಾಜಕೀಯ ತಂತ್ರಗಳಿಂದ ಹೊರಹಾಕಿ ಸ್ಥಳೀಯ ಅರಸರನ್ನು ಯುದ್ಧಗಳಲ್ಲಿ ಸೋಲಿಸಿ ಭಾರತವನ್ನು ತಮ್ಮ ನಿಯಂತ್ರಣಕ್ಕೆ ತೆಗೆದುಕೊಳ್ಳಲು ಕೈಗೊಂಡ ತಂತ್ರಗಳು ಭಾರತೀಯರ ಏಕತೆಯನ್ನು ನಾಶಪಡಿಸಿದವು ಎಂದು ಹೇಳಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಐಕ್ಯುಎಸಿ ಸಂಚಾಲಕ ಡಾ. ಜಿತೇಂದ್ರ ಜಹಗೀರದಾರ ವಿದ್ಯಾರ್ಥಿಗಳು ಇತಿಹಾಸವನ್ನು ಕೇವಲ ಪರೀಕ್ಷೆಗೆ ಓದದೆ ಸಮಕಾಲೀನ ಮೌಲ್ಯಗಳನ್ನು ಅರಿಯಲು ಓದಬೇಕೆಂದು ಹೇಳುತ್ತ, ಇತಿಹಾಸವು ಭವಿಷ್ಯತ್ತನ್ನು ಸಮರ್ಪಕವಾಗಿ ರೂಪಿಸಿಕೊಳ್ಳಲು ಹೆದ್ದಾರಿಯಾಗಿದೆ ಎಂದು ಹೇಳಿದರು. ಇತಿಹಾಸ ವಿಭಾಗದ ಪ್ರಾಧ್ಯಾಪಕ ಪ್ರೊ. ಬಸವಂತಪ್ಪ ದೊಡ್ಡಮನಿ ಕಾರ್ಯಕ್ರಮ ನಡೆಸಿಕೊಟ್ಟರು. ಇತಿಹಾಸ ವಿಭಾಗದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಎಸ್.ಎಸ್.ಎಲ್.ಸಿ. ಶಿಕ್ಷಣ ಕ್ಷೇತ್ರ ಮಕ್ಕಳ ಜೀವನದ ಒಂದು ತಿರುವು– ಪ್ರಶಾಂತ್ ಕೆ.ಎಸ್.

**ದಾವಣಗೆರೆ:** ವಿದ್ಯಾರ್ಥಿ, ವಿದ್ಯಾರ್ಥಿನಿಯರು ಮೊಬೈಲ್ ಬಿಟ್ಟು ಶಿಕ್ಷಣದ ಕಡೆ ಹೆಚ್ಚು ಗಮನ ಹರಿಸಬೇಕಾಗಿದೆ ಎಸ್.ಎಸ್.ಎಲ್.ಸಿ. ಶಿಕ್ಷಣ ಕ್ಷೇತ್ರ ಮಕ್ಕಳ ಜೀವನದ ಒಂದು ತಿರುವು ಮಕ್ಕಳು ಮುಂದಿನ ಜೀವನದ ಬಗ್ಗೆ ಈಗಲೇ ಮಾನಸಿಕವಾಗಿ ಬದ್ಧತೆಯಿಂದ, ಕರ್ತವ್ಯನಿಷ್ಠೆಯಿಂದ, ಸಮಯಪ್ರಜ್ಞೆಯೊಂದಿಗೆ ತೊಡಗಿಸಿಕೊಂಡರೆ ಬದುಕು ಸಾರ್ಥಕತೆ ಆಗುತ್ತದೆ. ಉತ್ತಮ ಫಲಿತಾಂಶದೊಂದಿಗೆ ಹೆತ್ತ ತಂದೆ–ತಾಯಿಗಳಿಗೆ ವ್ಯಾಸಂಗ ಮಾಡಿದ ವಿದ್ಯಾಸಂಸ್ಥೆಗೆ ಹುಟ್ಟಿದ ಊರಿಗೆ ಒಳ್ಳೆಯ ಹೆಸರು ತರಬೇಕಾಗಿದೆ ಎಂದು ದಾವಣಗೆರೆ ಪೊಲೀಸ್ ನಿರೀಕ್ಷಕರಾದ ಪ್ರಶಾಂತ್ ಕೆ.ಎಸ್. ತಮ್ಮ ಮನದಾಳದ ಮಾತು ಹಂಚಿಕೊಂಡರು.

ದಾವಣಗೆರೆ ಜಿಲ್ಲಾ ಪೊಲೀಸ್ ಇಲಾಖೆ ಮತ್ತು ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ಪಿ.ಜೆ. ಬಡಾವಣೆಯ ಪೊಲೀಸ್ ಸಮುದಾಯ ಭವನದಲ್ಲಿ ಎಸ್.ಎಸ್.ಎಲ್.ಸಿ. ಮಕ್ಕಳಿಗೆ ಪರೀಕ್ಷಾ ಪೂರ್ವಭಾವಿ ತಯಾರಿ ಉಚಿತ ಕಾರ್ಯಾಗಾರವನ್ನು ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಪೊಲೀಸ್



ಅಧಿಕಾರಿ ರವೀಂದ್ರ ಕಾಳಭೈರವ ಮಾತನಾಡಿ, ಮಕ್ಕಳು ಪರೀಕ್ಷೆಗೆ ಅಷ್ಟೇ ಸೀಮಿತವಾಗದೆ ಮುಂದಿನ ಸಾಧನೆಗಳಿಗೆ ಜಾಗೃತೆಯೊಂದಿಗೆ ಹೆತ್ತ ತಂದೆ–ತಾಯಿಗಳ ಕನಸು ನನಸು ಮಾಡಬೇಕಾಗಿದೆ ಎಂದರು.

ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈಯವರು ಪರೀಕ್ಷೆ ಎದುರಿಸುವ ಧೈರ್ಯ ತುಂಬಿ ಶಿಕ್ಷಣದ ಬಗ್ಗೆ ಮಾರ್ಗದರ್ಶನ ನೀಡಿ, ತಂದೆ–ತಾಯಿಗಳ ಪೊಲೀಸ್ ಅಧಿಕಾರಿಗಳ ಅನುಮತಿ ಪಡೆದು ಉತ್ತಮ ಫಲಿತಾಂಶಕ್ಕೆ ಪ್ರತಿಜ್ಞಾವಿಧಿ ಬೋಧಿಸಿದರು.

ಕಲಾಕುಂಚ ಮಹಿಳಾ ವಿಭಾಗದ ಸಂಸ್ಥಾಪಕರಾದ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿ, ಪೊಲೀಸ್ ಅಧಿಕಾರಿ ವೇದಮೂರ್ತಿ ವೇದಿಕೆಯಲ್ಲಿ ಗೌರವ ಉಪಸ್ಥಿತರಿದ್ದರು. ಪೊಲೀಸ್ ಅಧಿಕಾರಿ ಎಸ್.ವಿ.ಅಣ್ಣಿಗೇರಿಯವರ ಪ್ರಾರ್ಥನೆಯೊಂದಗೆ ಪ್ರಾರಂಭವಾದ ಸಮಾರಂಭಕ್ಕೆ ಕಲಾಕುಂಚದ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ಸ್ವಾಗತಿಸಿ, ನಿರೂಪಣೆ ಮಾಡಿ, ಕೊನೆಯಲ್ಲಿ ವಂದಿಸಿದರು.

# ಲೋಕಾಯುಕ್ತ ಜನ ಸಂಪರ್ಕ ಸಭೆ

**ಗದಗ:** ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೋಲಿಸ್ ಅಧಿಕಾರಿಗಳಿಂದ ದಿನಾಂಕ:10–12–2025 ರಂದು ಬೆಳಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ಜಿಲ್ಲೆಯ ಗಜೇಂದ್ರಗಡದ ಪುರಸಭೆಯಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ ಮತ್ತು ಸಾರ್ವಜನಿಕರ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಲೋಕಾಯುಕ್ತ ಪೋಲಿಸ್ ಉಪಾಧೀಕ್ಷಕ ವಿಜಯ ಬಿರಾದಾರ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಶ್ರೀ ವೀರಭದ್ರೇಶ್ವರ ಸ್ವಾಮಿಯ ಕಾರ್ತಿಕೋತ್ಸವ

**ದಾವಣಗೆರೆ:** ಇಲ್ಲಿನ ಹಳೆಪೇಟೆಯಲ್ಲಿರುವ ಶ್ರೀ ವೀರಭದ್ರೇಶ್ವರ ಸ್ವಾಮಿಯ ಕಡೆ ಕಾರ್ತಿಕೋತ್ಸವ ಡಿ. 9ರ ರಾತ್ರಿ 9 ಗಂಟೆಗೆ ದೇವಸ್ಥಾನದ ಆವರಣದಲ್ಲಿ ನಡೆಯಲಿದೆ.

ದೀಪೋತ್ಸವಕ್ಕೂ ಮುನ್ನ ಸಂಜೆ 7 ಗಂಟೆಗೆ ಶ್ರೀ ವೀರಭದ್ರೇಶ್ವರ ಸ್ವಾಮಿಯ ಉತ್ಸವವು ದೇವಸ್ಥಾನದಿಂದ ಹೊರಟು ಎಸ್‌ಕೆಪಿ ರಸ್ತೆ, ಪಾತಾಳ ಲಿಂಗೇಶ್ವರ ಸ್ವಾಮಿ ದೇವಸ್ಥಾನ, ಕಾಯಿಪೇಟೆ, ಬೆಳ್ಳುಳ್ಳಿ ಗಲ್ಲಿ, ವಿಜಯಲಕ್ಷ್ಮಿ ರಸ್ತೆ, ಚೌಕಿಪೇಟೆ, ಮಹಾರಾಜಪೇಟೆ, ಕಾಳಿಕಾದೇವಿ ರಸ್ತೆ, ಆನೆಕೊಂಡ ರಸ್ತೆ, ಹಳೆಪೇಟೆ ಮುಖಾಂತರ ದೇವಸ್ಥಾನಕ್ಕೆ ತಲುಪಲಿದೆ. ನಂತರ ದೇವಸ್ಥಾನದ ಮುಂಭಾಗದ ಆಭರಣದಲ್ಲಿ ಕಾರ್ತಿಕ ದೀಪೋತ್ಸವ ಇರಲಿದೆ ಎಂದು ಶ್ರೀ ವೀರಭದ್ರೇಶ್ವರ ಸ್ವಾಮಿ ದೇವಸ್ಥಾನ ಸಮಿತಿ ತಿಳಿಸಿದೆ.

# ಡಿ. ಬಾಸ್ ಸಂಘದ ಅಧ್ಯಕ್ಷರಾಗಿ ಯುವರಾಜ ಮುಟಗಾರ



**ಗದಗ :** ಅಖಿಲ ಕರ್ನಾಟಕ ದರ್ಶನ ತೂಗದೀಪ ಅಭಿಮಾನಿಗಳ ಸಂಘದ ನೂತನ ಅಧ್ಯಕ್ಷರಾಗಿ ನಗರದ ಯುವರಾಜ ಮುಟಗಾರ ಆಯ್ಕೆಯಾದ ಹಿನ್ನಲೆಯಲ್ಲಿ ಮತ್ತು ದರ್ಶನ ಅವರ ನೂತನ ಚಿತ್ರ ಡೆವಿಲ್ ಚಲನಚಿತ್ರ ಯಶಸ್ವಿಯಾಗಲಿ ಎಂದು ಹಾರೈಸಿ ನಗರದ ವಿರೇಶ್ವರ ಪುಣ್ಯಾಶ್ರಮದಲ್ಲಿ ವಿಶೇಷ ಪೂಜೆ ಮಾಡಲಾಯಿತು.

ಈ ಸಂದರ್ಭದಲ್ಲಿ ದರ್ಶನ ಅವರ ಅಭಿಮಾನಿಗಳು ಉಪಸ್ಥಿತರಿದ್ದರು.

# ಉದ್ಯಮಿಗಳಿಗೆ ಒಂದು ದಿನದ ಅರಿವು ಕಾರ್ಯಕ್ರಮ

**ಚಿಕ್ಕಮಗಳೂರು:** ಜಿಲ್ಲಾ ಕೈಗಾರಿಕಾ ಕೇಂದ್ರ, ಬೆಂಗಳೂರಿನ ಟೆಕ್ಸಾಕ್‌ನ ಸಂಯುಕ್ತಾಶ್ರಯದಲ್ಲಿ ಎಂಎಸ್‌ಎಂಇಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಹಾಗೂ ವೇಗಗೊಳಿಸುವ ಯೋಜನೆಯಡಿಯಲ್ಲಿ (ಬಿಜಿನೆಸ್ ಡೆವೆಲಪ್‌ಮೆಂಟ್ ಸರ್ವಿಸ್ ಪ್ರೊವೈಡಸ್) ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಡಿಸೆಂಬರ್ 10 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಪವಿತ್ರವನ ಸಗನೀಪುರ ರಸ್ತೆಯ ಯೂನಿಯನ್ ಗ್ರಾಮೀಣ ಸ್ವಉದ್ಯೋಗ ತರಬೇತಿ ಸಂಸ್ಥೆ(ಆರ್‌ಸೆಟಿ)ಯಲ್ಲಿ ಆಯೋಜಿಸಲಾಗಿದೆ.ಜಿಲ್ಲೆಯ ಉದ್ದಿಮೆದಾರರು ಭಾಗವಹಿಸಿ ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಕೈಗಾರಿಕಾ ಕೇಂದ್ರ(ದೂರವಾಣಿ ಸಂಖ್ಯೆ:08262–295821)ವನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ಆವರಗೆರೆ ವೃತ್ತದಲ್ಲಿ ಅಂಬೇಡಕರ್ ಪರಿನಿಬ್ಬಾಣ ದಿನಾಚರಣೆ

**ದಾವಣಗೆರೆ:** ನಗರದ ಆವರಗೆರೆ ವೃತ್ತದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ 69ನೇ ಪರಿನಿರ್ವಾಣ ದಿನಾಚರಣೆ ಆಚರಿಸಲಾಯಿತು.

ಇದೇ ವೇಳೆ ಕರ್ನಾಟಕ ದಲಿತ ಸಂಘರ್ಷ (ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ) ಸಮಿತಿ ಜಿಲ್ಲಾ ಸಂಚಾಲಕ ಡಿ. ಹನುಮಂತಪ್ಪ ಮಾತನಾಡಿ, ಈ ದೇಶ ಕಂಡ ಮಹಾನಾಯಕ ಬಾಬಾ ಸಾಹೇಬರು ಇಲ್ಲಿ ಜನಿಸದೆ ಹೋಗಿದ್ದರೆ ನಮ್ಮ ದೇಶ ಇನ್ನೂ ಹಿಂದಳಿಯುತ್ತಿತ್ತು. ಅಂಬೇಡ್ಕರರು ಬಡವರ, ದಲಿತರ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಹಾಗೂ ಮಹಿಳೆಯರ ಕ್ಷೇಮಾಭಿವೃದ್ಧಿಗಾಗಿ ತಮ್ಮ ಜೀವವನ್ನೇ ಪಣವಾಗಿಟ್ಟ ಮಹಾನೀಯರು ಎಂದು ಶ್ಲಾಘಿಸಿದರು.

ಅಂಬೇಡ್ಕರ್ ಅವರು ಮೇಲ್ವರ್ಗದವರಿಗೆ ಮಾತ್ರವಿದ್ದ ಮತದಾನದ ಹಕ್ಕನ್ನು ದೇಶದಲ್ಲಿ ಹುಟ್ಟಿರುವ 18 ವರ್ಷದ ಮೇಲ್ಪಟ್ಟ



ಎಲ್ಲರಿಗೂ ಆ ಹಕ್ಕನ್ನು ಕೊಡಿಸುವ ಮೂಲಕ ಪ್ರಜಾಪ್ರಭುತ್ವವನ್ನು ಸ್ಥಾಪಿಸಲು ಅನುವು ಮಾಡಿಕೊಟ್ಟರು. ಒಡೆದು ಹೋದ ದೇಶವನ್ನು ಎಲ್ಲಾ ರಾಜ್ಯಗಳನ್ನು ಒಗ್ಗೂಡಿಸುವ ಮೂಲಕ ಏಕತೆಯನ್ನು ನಿರ್ಮಿಸಿದರು. ದೇಶದ ಏಕತೆಗಾಗಿ ಅಭಿವೃದ್ಧಿಗಾಗಿ ಶ್ರಮಿಸಿದರು ಎಂದು ಕೊಂಡಾಡಿದರು.

ಕಾರ್ಯಕ್ರಮದಲ್ಲಿ ಎಂ. ಚಂದ್ರಪ್ಪ, ಗಿರೀಶ್, ಆರ್. ಗುರುಮೂರ್ತಿ, ಸಿ. ಗಣೇಶ್, ಯು. ಕಾಳಪ್ಪ, ತಿಪ್ಪೇಶಾಚಾರ್, ಆಕಾಶ್, ಪಿ. ತರುಣ, ಎಂ. ಸಿದ್ದೇಶ್, ಎ. ದುರ್ಗೇಶ್, ಪಿ. ನಂದೀಶ್, ಅಭಿ, ಶಿವು ಮತ್ತಿತರರಿದ್ದರು.

# ಡಾ. ಬಿ.ಆರ್ ಅಂಬೇಡ್ಕರ್ ಅವರ ದಾರಿಯಲ್ಲಿ ಸಾಗೋಣ : ಶ್ರೇಯಸ್ ಎಂ ಪಟೇಲ್

**ಹಾಸನ :** ಭಾರತ ದೇಶದಲ್ಲಿ ಎಲ್ಲರೂ ಸ್ವತಂತ್ರವಾಗಿ ಬದುಕುತ್ತಿದ್ದೇವೆ ಎಂದರೆ ಅದಕ್ಕೆ ಕಾರಣ ಡಾ. ಬಿ.ಆರ್ ಅಂಬೇಡ್ಕರ್. ಇಂದು ಎಲ್ಲರೂ ಅವರು ಹಾಕಿ ಕೊಟ್ಟಿರುವ ದಾರಿಯಲ್ಲಿ ಸಾಗೋಣ ಎಂದು ಸಂಸದರಾದ ಶ್ರೇಯಸ್ ಎಂ ಪಟೇಲ್ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತದವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿಂದು ಏರ್ಪಡಿಸಲಾಗಿದ್ದ ಡಾ.ಬಿ.ಆರ್ ಅಂಬೇಡ್ಕರ್ ರವರ 69ನೇ ಪರಿ ನಿರ್ವಾಣ ದಿನದಕಾರ್ಯಕ್ರಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ರವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಮಾತನಾಡಿದ ಅವರು ಸಂವಿಧಾನ ಶಿಲ್ಪಿ ಭಾರತರತ್ನ ಡಾ. ಬಿ.ಆರ್ ಅಂಬೇಡ್ಕರ್ ಅವರ ಬಗೆಗೆ ಏನು ಹೇಳಿ ಬಣ್ಣಿಸಿದರು ಕಡಿಮೆಯೇ, ವರ್ಷದ 365 ದಿನವು ಅಂಬೇಡ್ಕರ್ ಬಗೆಗೆ ನಾವು ತಿಳಿದುಕೊಂಡರು ಸಾಲದು ಹಾಗಾಗಿ ಸಂವಿಧಾನದ ಕುರಿತು ಎಲ್ಲರಿಗೂ ತಿಳಿ ಹೇಳಬೇಕು ಎಂದರಲ್ಲದೆ, ಇಂತಹ ಅಂಬೇಡ್ಕರ್ ರವರು ಮತ್ತೆ ಮತ್ತೆ ಜನಿಸಿ ಬರಲಿ ಎಂದರು.

ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಮಾತನಾಡಿ ಇಂದು 69ನೇ ಪರಿ ನಿರ್ವಾಣ ದಿನವನ್ನು ಆಚರಿಸುತ್ತಿದ್ದೇವೆ. ಇದು ನಮ್ಮೆಲ್ಲರ ಸುದೈವ, ಈ ದಿನ ಬಹಳ ದುಃಖಕರವಾಗಿದೆ. ಅಂಬೇಡ್ಕರ್ ಅವರು ಇನ್ನೂ ಸ್ವಲ್ಪ ದಿನಗಳು ನಮ್ಮೊಟ್ಟಿಗೆ ಇರಬೇಕಾಗಿತ್ತು. ನಮ್ಮ ದೇಶಕ್ಕೆ,



ಜನತೆಗೆ ಅವರ ಅವಶ್ಯಕತೆ ಬಹಳ ಇತ್ತು. ಅವರು ಜಗತ್ತಿಗೆ, ದೇಶಕ್ಕೆ ನೀಡಿರುವ ಕೊಡುಗೆಗಳನ್ನು ನಾವು ಇಂದು ನೆನಪು ಮಾಡಿಕೊಳ್ಳುತ್ತಿದ್ದೇವೆ ಎಂದರು.

ಅಂಬೇಡ್ಕರ್ ಅವರು ಸಂವಿಧಾನದ ಜೀವಾಳ ಎಂದೇ ಹೇಳಬಹುದು. ಎಲ್ಲರು ಇಂದು ಸಮಾನತೆಯಿಂದ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದೇವೆ ಎಂದರೆ ಅದು ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ನೀಡಿರುವ ಸಮಾನತೆಯಿಂದಾಗಿದೆ. ಇಂದು ಎಲ್ಲರೂ ಅವರಿಗೆ ಗೌರವವನ್ನು ನೀಡುವ ಮೂಲಕ ಪರಿನಿರ್ವಾಣ ದಿನವನ್ನು ಆಚರಿಸೋಣ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಬಿ.ಆರ್ ಪೂರ್ಣಿಮಾ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ದೂದ್ ಫೀರ್, ಸಮುದಾಯದ ಮುಖಂಡರು ಮತ್ತಿತರರು ಭಾಗಿಯಾಗಿದ್ದರು.

# ನನ್ನವರಿಂದಲೇ ನಾನು ಟೀಕೆಗೆ ಗುರಿಯಾಗಿದ್ದೆ

**ಮುಂಬೈ:** ಪರಿಶಿಷ್ಟ ಜಾತಿಯವರ ಮೀಸಲಾತಿಗೂ ತೆನೆಪದರ ಅನ್ವಯವಾಗಬೇಕು ಎಂದು ಒಂದು ತೀರ್ಪಿನಲ್ಲಿ ಹೇಳಿದಕ್ಕೆ ತಮ್ಮ ಸಮುದಾಯವರಿಂದಲೇ ಟೀಕೆಗಳನ್ನು ಎದುರಿಸಬೇಕಾಯಿತು ಎಂದು ಭಾರತದ ಮಾಜಿ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಹೇಳಿದ್ದಾರೆ.ಡಾ.ಬಿ.ಆರ್.ಅಂಬೇಡ್ಕರ್ ಅವರ ದೃಷ್ಟಿಕೋನದಲ್ಲಿ ಹಿಂದುಳಿದವರಿಗೆ ಬೈಸಿಕಲ್ ಒಂದನ್ನು ಕೊಡುವಂಥದ್ದು ಸದೃಢ ಕ್ರಮವಾಗಿತ್ತು.

## ನಿಧನ ಸುದ್ದಿಗಳು

### ನಾಗನೂರು ದೊಡ್ಡಕಲ್ಲಪ್ಪರ ಚನ್ನಬಸಮ್ಮ ನಿಧನ

**ದಾವಣಗೆರೆ :** ತಾಲ್ಲೂಕು ನಾಗನೂರು ಗ್ರಾಮದ ದೊಡ್ಡಕಲ್ಲಪ್ಪರ ದಿ. ಮಹೇಶ್ವರಪ್ಪನವರ ಪತ್ನಿ ಶ್ರೀಮತಿ ಚನ್ನಬಸಮ್ಮ (74) ಅವರು ದಿನಾಂಕ : 07.12.2025ರ ಭಾನುವಾರ ಸಂಜೆ 5 ಗಂಟೆಗೆ ನಿಧನರಾದರು. ಮೂವರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ : 08.12.2025ರ ಸೋಮವಾರ ಸ್ವಗ್ರಾಮ ನಾಗನೂರಿನ ಮೃತರ ಜಮೀನಿನಲ್ಲಿ ನೆರವೇರಿಸಲಾಯಿತು.

### ನಾಗನೂರು ಗ್ರಾಮದ ಸಿದ್ದನೂರು ಕಲ್ಲಪ್ಪ ನಿಧನ

**ದಾವಣಗೆರೆ:** ತಾಲ್ಲೂಕು ನಾಗನೂರು ಗ್ರಾಮದ ವಾಸಿ ಸಿದ್ದನೂರು ಹನುಮಂತಪ್ಪನವರ ಸಹೋದರ ಎಸ್. ಕಲ್ಲಪ್ಪ (66) ಅವರು ದಿನಾಂಕ: 07.12.2025ರ ಭಾನುವಾರ ಸಂಜೆ 5.50ಕ್ಕೆ ನಿಧನರಾದರು. ಪತ್ನಿ, ಇಬ್ಬರು ಪುತ್ರಿಯರು, ಓರ್ವ ಪುತ್ರ, ಸೊಸೆ, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ : 08.12.2025ರ ಸೋಮವಾರ ಮಧ್ಯಾಹ್ನ 1 ಗಂಟೆಗೆ ನಾಗನೂರು ಗ್ರಾಮದ ಮೃತರ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

### ರಾಮನಗೌಡ್ರು ವಿರೂಪಾಕ್ಷಪ್ಪ ನಿಧನ

**ದಾವಣಗೆರೆ :** ಸಿಟಿ, ತರಳಬಾಳು ಬಡಾವಣೆ 14ನೇ ಕ್ರಾಸ್ ವಾಸಿ, ದಾವಣಗೆರೆ ತಾಲ್ಲೂಕುಕಕ್ಕರಗೊಳ್ಳದರಾಮನಗೌಡ್ರು ವಿರೂಪಾಕ್ಷಪ್ಪ ಅವರು, ದಿನಾಂಕ 7.12.2025ರ


ಭಾನುವಾರ ಬೆಳಿಗ್ಗೆ 5.24ಕ್ಕೆ ನಿಧನರಾದರು. ಮೃತರಿಗೆ 68 ವರ್ಷ ವಯಸ್ಸಾಗಿತ್ತು.ಇಬ್ಬರು ಪುತ್ರರು, ಓರ್ವ ಪುತ್ರಿ, ಸೊಸೆ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 7.12.2025ರ ಭಾನುವಾರ ಸಂಜೆ ಮೃತರ ಸ್ವಗ್ರಾಮ ಕಕ್ಕರಗೊಳ್ಳದಲ್ಲಿ ನೆರವೇರಿತು.

### ಕುಪ್ಪಣ್ಣ ನಿಧನ

**ನ್ಯಾಮತಿ:** ಮೀನುಗಾರರ ಸಂಘದ ಮಾಜಿ ಅಧ್ಯಕ್ಷ, ತಾಲ್ಲೂಕಿನ ಸವಳಂಗ ಗ್ರಾಮದ ಕುಪ್ಪಣ್ಣ (64) ಹೃದಯಾಘಾತದಿಂದ ಶನಿವಾರ ನಿಧನರಾದರು.ಇವರಿಗೆ ಪತ್ನಿ, ಮೂವರು ಪುತ್ರರು ಇದ್ದಾರೆ.

ಮೃತರ ಅಪೇಕ್ಷೆಯಂತೆ ಅವರ ನೇತ್ರಗಳನ್ನು ಶಿವಮೊಗ್ಗದ ಶಂಕರ ಕಣ್ಣಿನ ಆಸ್ಪತ್ರೆಗೆ ದಾನ ಮಾಡಲಾಯಿತು. ಅಂತ್ಯಕ್ರಿಯೆ ಸ್ವಗ್ರಾಮದಲ್ಲಿ ಭಾನುವಾರ ನಡೆಯಿತು.

# ಜಾಗತಿಕ ವ್ಯಾಪಾರ ಸಾಮರ್ಥ್ಯದ 200 ಕಂಪನಿಗಳ ಪೈಕಿ ಕಲ್ಚರಲಿಟಿಕ್ಸ್ ಮಹಿಳೋದ್ಯಮಕ್ಕೆ ಸ್ಥಾನ




**ಚಿಕ್ಕಮಗಳೂರು:** ಸಂಸ್ಥೆಗಳು ಸಂಸ್ಕೃತಿಯನ್ನು ಅಳೆಯುವ ಮತ್ತು ನಿರ್ವಹಿಸುವ ವಿಧಾನವನ್ನು ಪರಿವರ್ತಿಸುತ್ತಿರುವ ಪ್ರವರ್ತಕ ಎಐ ಚಾಲಿತ ಕಲ್ಚರಲಿಟಿಕ್ಸ್ ಕಂಪನಿಯನ್ನು ಫೋಬ್ಸ್ ಇಂಡಿಯಾ ಮತ್ತು ಡಿ ಗ್ಲೋಬಲಿಸ್ಟ್ ತಮ್ಮ 2025 ರ ಜಾಗತಿಕ ವ್ಯಾಪಾರ ಸಾಮರ್ಥ್ಯ ಹೊಂದಿರುವ 200 ಆಯ್ದ ಕಂಪನಿಗಳಲ್ಲಿ ಒಂದಾಗಿ ಆಯ್ಕೆ ಮಾಡಿವೆ.

ಅಪಾರ ಗೌರವವನ್ನು ಹೊಂದಿರುವ ಸಮೂಹವು 1,000 ಕ್ಕೂ ಹೆಚ್ಚು ಸಂಸ್ಥಾಪಕರನ್ನು ಪ್ರತಿನಿಧಿಸುತ್ತದೆ. ಇದರಲ್ಲಿ ಭಾರತದ ಶೇಕಡ 20 ರಷ್ಟು ಯುನಿಕಾರ್ನ್ ನಾಯಕರು ಸೇರಿದ್ದಾರೆ ಮತ್ತು ಒಟ್ಟಾರೆಯಾಗಿ 19 ಶತಕೋಟಿ ಡಾಲರ್‌ಗಳ ಬಂಡವಾಳ ಸಂಗ್ರಹಿಸಿ 30 ಕ್ಕೂ ಹೆಚ್ಚು ದೇಶಗಳಿಗೆ ವಿಸ್ತರಿಸಿರುವ ಅನ್ವೇಷಣೆ ಆಧರಿತ ಕಂಪನಿಗಳನ್ನು ಪ್ರತಿನಿಧಿಸುತ್ತದೆ. ಈ ಆಯ್ಕೆಯಿಂದಾಗಿ, ಜಾಗತಿಕವಾಗಿ ವಿಸ್ತರಿಸಲು ಮತ್ತು ಮುಂದಿನ ದಶಕದ ಸಾಂಸ್ಥಿಕ ತಂತ್ರದ ಮೇಲೆ ಪ್ರಭಾವ ಬೀರಲು ಸಿದ್ಧವಾಗಿರುವ ಗಣ್ಯ ಉದ್ಯಮಗಳ ಗುಂಪಿನಲ್ಲಿ ಕಲ್ಚರಲಿಟಿಕ್ಸ್ ಒಂದಾಗಿದೆ ಎಂದು ಸಂಸ್ಥಾಪಕರು ಮತ್ತು ಸಿಇಒ ಯಶಸ್ವಿನಿ ರಾಮಸ್ವಾಮಿ ಹಾಗೂ ಸಹ–ಸಂಸ್ಥಾಪಕಿ ಸ್ಮಿತಾ ತರೂರ್ ಪ್ರಕಟಣೆಯಲ್ಲಿ ಹೇಳಿದ್ದಾರೆ.

ಹೈಬ್ರಿಡ್ ಕೆಲಸ, ಸಾಂಸ್ಕೃತಿಕ ವಿಘಟನೆ, ಗಡಿಯಾಚೆಗಿನ ಎಮ್&ಎ, ಇಎನ್‌ಜಿ ಹೊಣೆಗಾರಿಕೆಯಂತಹ ಅಪಾರ ಸಂಕೀರ್ಣತೆಯನ್ನು ಸಿಇಒಗಳು ನಿರ್ವಹಿಸುತ್ತಿದ್ದು, ಸಂಸ್ಕೃತಿಯನ್ನು ಪರಿಮಾಣಾತ್ಮಕ, ಭವಿಷ್ಯಸೂಚಕ ಔದ್ಯಮಿಕ ಸ್ವತ್ತು ಎಂಬುದಾಗಿ ಕಲ್ಚರಲಿಟಿಕ್ಸ್ ಮರು ವ್ಯಾಖ್ಯಾನಿಸುತ್ತಿದೆ. ವರ್ತನೆಯ ವಿಜ್ಞಾನ ಮತ್ತು ಜವಾಬ್ದಾರಿಯುತ ಎಐ ಆಧರಿತವಾದ, ಇದರ ಸ್ವಾಮ್ಯದ ಕಲ್ಚರ್ ಕೊಹೆರೆನ್ಸ್ ಕೋಶಂಟ್ ಮತ್ತು ಬಹು–ಭಾಷಾ ಅನಾಲಿಟಿಕ್ಸ್ ಎಂಜಿನ್ ನಾಯಕರಿಗೆ ಸಾಂಸ್ಥಿಕ ಜೋಡಣೆ, ನಾಯಕತ್ವದ ಸುಸಂಬದ್ಧತೆ, ಅಪಾಯದ ಮಾದರಿಗಳು ಮತ್ತು ರೂಪಾಂತರ ಸನ್ನದ್ಧತೆಯ ಬಗ್ಗೆ ಅಭೂತಪೂರ್ವ ಗೋಚರತೆಯನ್ನು ನೀಡುತ್ತದೆ. ಕಲ್ಚರಲಿಟಿನ ಗ್ರಾಹಕರು ಎಂ&ಎ ಏಕೀಕರಣ, ಖಾಸಗಿ ಇಕ್ವಿಟಿ ಮೌಲ್ಯ ಸೃಷ್ಟಿ, ನಾಯಕತ್ವದ ಪುನರ್ರಚನೆ, ಜಾಗತಿಕ ವಿಸ್ತರಣೆ ಮತ್ತು ಇಎನ್‌ಜಿ ವರದಿಗಾಗಿ ಸಿದ್ಧರಾಗುತ್ತಿರುವ ಸಂಸ್ಥೆಗಳನ್ನು ಒಳಗೊಂಡಿರುತ್ತಾರೆ, ಇಲ್ಲಿ ಸಂಸ್ಕೃತಿಯು ಒಂದು ಕಾರ್ಯತಂತ್ರದ ವಿಭಿನ್ನ ಅಂಶ ಮತ್ತು ಅಪಾಯದ ವೇರಿಯಬಲ್ ಆಗಿ ಮಾರ್ಪಟ್ಟಿದೆ ಎಂದು ಹೇಳಿದ್ದಾರೆ.

# ಹೊಸ ವರ್ಷಾಚರಣೆ ವೇಳೆ ಸುರಕ್ಷತೆಗೆ ಪೊಲೀಸರ ಸಿದ್ಧತೆ

**ಬೆಂಗಳೂರು:** ಹೊಸವರ್ಷ ಸಂಭ್ರಮಾಚರಣೆ ವೇಳೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸಲು ನಗರ ಪೊಲೀಸರು ಪೂರ್ವ ತಯಾರಿ ಆರಂಭಿಸಿದ್ದಾರೆ. 2026 ಹೊಸ ವರ್ಷದ ಸಂಭ್ರಮಾಚರಣೆ ವೇಳೆ ಜನಸಂದಣಿ ಇರುವ ಸ್ಥಳಗಳಲ್ಲಿ ಹೆಚ್ಚಿನ ಭದ್ರತೆ ಕೈಗೊಳ್ಳಲಾಗುತ್ತಿದೆ .


ಇಂತಹ ಸ್ಥಳಗಳನ್ನು ಗುರುತಿಸಲಾಗಿದ್ದು ಅಲ್ಲಿ ಬಾಂಬ್ ಪತ್ತೆ ಮತ್ತು ನಿಷ್ಕ್ರಿಯ ದಳದ ಸಿಬ್ಬಂದಿಗೆ ನಿಯೋಜಿಸಲು ವಿಶೇಷ ತರಬೇತಿ ನೀಡಲಾಗುತ್ತಿದೆ.ನುಮಾನಾಸ್ಪದ ವಸ್ತು ಕಂಡು ಬಂದ್ರೆ ಕೈಗೊಳ್ಳಬೇಕಾದ ಕ್ರಮ ಇನ್ನು ಸ್ಫೋಟದ ವಸ್ತುವಾಗಿದ್ದರೆ, ಜನರು ಗೊಂದಲಕ್ಕಿಡಾಗದೆ ಅವರನ್ನು ಸುಕ್ಷಿತ ಸ್ಥಳಕ್ಕೆ ಕಳುಹಿಸುವುದು ಸೇರಿ ಸ್ಫೋಟಕ ನಿಷ್ಕ್ರಿಯದ ಬಗ್ಗೆ ಸಿಬ್ಬಂದಿಗೆ ಪೂರ್ವ ತರಬೇತಿ ನೀಡಲಾಗುತ್ತಿದೆ.

ಇದಲ್ಲದೆ ಜನರಿಗೆ ತೊಂದರೆ ಉಂಟಾಗದಂತೆ ಅಗತ್ಯ ಸಂಚಾರಿ ಮಾರ್ಗ ಬದಲಾವಣೆ ಸೇರಿ ಮಹಿಳೆಯರ ಸುರಕ್ಷತೆಗೆ ಸಿಸಿ ಕ್ಯಾಮರ ಹಾಗು ವಿಶೇಷ ಪಡೆಗಳನ್ನು ನಿಯೋಜಿಸಲಾಗುತ್ತಿದೆ.

# ನೆಹರು ಹೆಸರಿಗೆ ಮಸಿ ಬಳಿಯುವ ಪ್ರಯತ್ನ ಮುಂದುವರೆದಿದೆ : ಸೋನಿಯಾ ಗಾಂಧಿ

**ನವದೆಹಲಿ:** ಜವಾಹರಲಾಲ್ ನೆಹರು ಅವರನ್ನು ನಿಂದಿಸುವ ಯೋಜನೆಯೇ ಇಂದಿನ ಆಡಳಿತ ವ್ಯವಸ್ಥೆಯ ಪ್ರಮುಖ ಗುರಿಯಾಗಿದೆ ಎಂದು ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಹೇಳಿದ್ದಾರೆ. ದೇಶದ ಇತಿಹಾಸದಿಂದ ಮೊದಲ ಪ್ರಧಾನಿಯನ್ನು ಅಳಿಸಿಹಾಕಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿ ಬಿಜೆಪಿಯನ್ನು ಅವರು ಟೀಕಿಸಿದ್ದಾರೆ.

ನೆಹರು ಸೆಂಟರ್ ಇಂಡಿಯಾವನ್ನು ಉದ್ಘಾಟಿಸಲು ನಿನ್ನೆ ಜವಾಹರ್ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನೆಹರು ಅವರನ್ನು ಅವಹೇಳನ ಮಾಡುವ, ವಿರೂಪಗೊಳಿಸುವ, ಕೀಳಾಗಿ ಕಾಣುವ ಮತ್ತು ಮಾನಹಾನಿ ಮಾಡುವ ವ್ಯವಸ್ಥಿತ ಪ್ರಯತ್ನವನ್ನು ಆರೋಪಿಸಿದ್ದಾರೆ.



ಇದರ ಏಕೈಕ ಉದ್ದೇಶವೆಂದರೆ ಅವರನ್ನು ವ್ಯಕ್ತಿತ್ವವಾಗಿ ಕುಗ್ಗಿಸುವುದು ಮಾತ್ರವಲ್ಲದೆ, ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಅವರ ಸಾರ್ವತ್ರಿಕವಾಗಿ ಗುರುತಿಸಲ್ಪಟ್ಟ ಪಾತ್ರ ಮತ್ತು ಅಭೂತಪೂರ್ವ ಸಮಸ್ಯೆಗಳಿಂದ ಸವಾಲು ಹಾಕಲ್ಪಟ್ಟ ಸ್ವತಂತ್ರ ರಾಷ್ಟ್ರದ ನಾಯಕರಾಗಿ ಅವರ ಆರಂಭಿಕ ದಶಕಗಳು, ಆದರೆ ಇತಿಹಾಸವನ್ನು ಪುನಃ ಬರೆಯುವ ಕಚ್ಚಾ ಮತ್ತು ಸ್ವಾರ್ಥಪರ ಪ್ರಯತ್ನದಲ್ಲಿ ಅವರ ಬಹುಮುಖಿ ಪರಂಪರೆಯನ್ನು ಕೆಡವುವುದು ಎಂದು ಅವರು ಹೇಳಿದರು. ಅಂತಹ ಪ್ರಯತ್ನಗಳನ್ನು ಸಂಪೂರ್ಣವಾಗಿ ಸ್ವಿಕಾರಾರ್ಹವಲ್ಲ ಎಂದು ಕರೆದರು:.

ನೆಹರೂ ಅವರು ಲಕ್ಷಾಂತರ ಭಾರತೀಯ ನಾಗರಿಕರಿಗೆ ಬೆಳಕಿನ ದೀಪವಾಗಿ ಸೇವೆ ಸಲ್ಲಿಸುತ್ತಿದ್ದಾರೆ ಮತ್ತು ಅಂತಹ ಸ್ಮಾರಕ ವ್ಯಕ್ತಿಯ ಜೀವನ ಮತ್ತು ಕೆಲಸವನ್ನು ವಿಶ್ಲೇಷಿಸುವುದು ಮತ್ತು ಟೀಕಿಸುವುದು ಅನಿವಾರ್ಯವಾಗಿದೆ ಎಂದು ಗಾಂಧಿ ಹೇಳಿದರು ಮತ್ತು ಅದು ನಿಜಕ್ಕೂ ಹಾಗೆಯೇ ಇರಬೇಕು ಎಂದು ಹೇಳಿದರು.

# ಸಹಾಯ ಧನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಧರ್ತಿ ಅಭಾ ಜನ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನದಡಿ ಮೀನುಮಾರಾಟಗಾರರಿಂದ ಸಹಾಯಧನ ಯೋಜನೆಗೆ ಅರ್ಜಿ ಆಹ್ವಾನಿಸಲಾಗಿದೆ.

ಮಲ್ಲಪುರ, ಗಿರಿಯಾಪುರ, ಕಾಟೇನಹಳ್ಳಿ, ಚಿಕ್ಕತೊಗಲೇರಿ, ಹಿರೇ ತೊಗಲೇರಿ, ಕರಿಲಕ್ಕನಹಳ್ಳಿ ಮತ್ತು ಕೋಡಿಹಳ್ಳಿ ಈ ಗ್ರಾಮಗಳಲ್ಲಿನ ಪರಿಶಿಷ್ಟ ಪಂಗಡದ ಮೀನುಗಾರರು ಅರ್ಜಿಯನ್ನು ಡಿಸೆಂಬರ್ 20 ರೊಳಗಾಗಿ ಕಚೇರಿಗೆ ಸಲ್ಲಿಸಬೇಕೆಂದು ಎಂದು ಮೀನುಗಾರಿಕೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ಗದಗ :** 2025–26 ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಮತ್ಸ ಸಂಪದ ಯೋಜನೆಯಡಿ ಧರ್ತಿ ಆಭಾ ಜನ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನ ಕಾರ್ಯಕ್ರಮದಡಿ ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿದ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ಅಸೂಟಿ ಗ್ರಾಮ ಪಂಚಾಯತ ವ್ಯಾಪ್ತಿಯ ಮೇಲ್ಮಟ ಲಕ್ಷ್ಮೇಶ್ವರ ತಾಲ್ಲೂಕಿನ ಗೋವನಾಳ ಗ್ರಾಮದ ಪಂಚಾಯತ ವ್ಯಾಪ್ತಿಯ ವಡೇಯರ ಮಲ್ಲಾಪೂರ, ಶಿರಹಟ್ಟಿ ತಾಲ್ಲೂಕಿನ ಮಾಚೇನಗಳ್ಳಿ ಗ್ರಾಮ ಪಂಚಾಯತ ವ್ಯಾಪ್ತಿಯ ಭಾವನೂರ ಹಾಗೂ ಮುಂಡರಗಿ ತಾಲ್ಲೂಕಿನ ಹಾರೋಗೇರಿ ಗ್ರಾಮ ಪಂಚಾಯತ ವ್ಯಾಪ್ತಿಯ ಕೇಲೂರ ಗ್ರಾಮದ ಮೀನುಗಾರರಿಗೆ ಮಾತ್ರ ಅನ್ವಯಿಸುವಂತೆ ಮೀನು ಮಾರಾಟಕ್ಕಾಗಿ ಐಸ್ ಬಾಕ್ಸ್ ನೊಂದಿಗೆ ದ್ವಿಚಕ್ರ ವಾಹನ ಖರೀದಿಗೆ ಸಹಾಯಧನ ನೀಡಲು ಗದಗ ಜಿಲ್ಲೆಗೆ ದ್ವಿಚಕ್ರ ವಾಹನ 01 ಗುರಿ ನಿಗದಿಪಡಿಸಿದೆ.ಅರ್ಜಿಯನ್ನು ಡಿಸೆಂಬರ್ 20 ರೊಳಗಾಗಿ ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು ಕಛೇರಿಯಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ರೋಣ ತಾಲ್ಲೂಕಿನ ಮೀನುಗಾರರು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಗದಗ ಮೊ.ಸಂ. (8095792530) ಹಾಗೂ ಲಕ್ಷ್ಮೇಶ್ವರ, ಶಿರಹಟ್ಟಿ ಹಾಗೂ ಮುಂಡರಗಿ ತಾಲ್ಲೂಕಿನ ಮೀನುಗಾರರು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮುಂಡರಗಿ ರವರನ್ನು (8095792530) ಸಂಪರ್ಕಿಸಬಹುದಾಗಿದೆ.

# ಆಕ್ಷೇಪಣೆ ಸಲಹೆ–ಸೂಚನೆ ಇದ್ದಲ್ಲಿ ವರದಿ ಸಲ್ಲಿಸಲು ಸೂಚನೆ

**ಹಾಸನ :** ಹಾಸನ ಮಹಾನಗರಪಾಲಿಕೆ ವ್ಯಾಪ್ತಿಯ ಎನ್. ಆರ್.ವೃತ್ತದಲ್ಲಿ ಮೈಸೂರು ಮಹಾರಾಜರಾದ ದಿವಂಗತ ಶ್ರೀ.ನರಸಿಂಹರಾಜ ಒಡೆಯರ್ ರವರ ಪುತ್ಥಳಿಯನ್ನು ಪ್ರತಿಷ್ಠಾಪಿಸಲು ದಿನಾಂಕ:07–02–2025 ರಂದು ಹಾಸನ ಮಹಾನಗರ ಪಾಲಿಕೆ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಲಾಗಿರುತ್ತದೆ. ಅದರಂತೆ ಸದರಿ ವಿಷಯದ ಬಗ್ಗೆ ಸಾರ್ವಜನಿಕರಿಂದ ಯಾವುದಾದರೂ ಆಕ್ಷೇಪಣೆ/ಸಲಹೆ/ಸೂಚನೆಗಳು ಇದ್ದಲ್ಲಿ 30 ದಿನಗಳೊಳಗಾಗಿ ಈ ಕಚೇರಿಗೆ ವರದಿ ಸಲ್ಲಿಸಲು ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

# ಬೀದಿ ನಾಯಿಗಳ ಉಪಟಳ ತಡೆಯಲು ಕ್ರಮ

**ಚಿಕ್ಕಬಳ್ಳಾಪುರ:** ಚಿಂತಾಮಣಿ ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರಿಗೆ ತಿಳಿಸುವುದೇನೆಂದರೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ 5/2025 ರಲ್ಲಿ ನೀಡಿರುವ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೊಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ನಗರಸಭೆಯ ಪೌರಾಯುಕ್ತರಿಗೆ ತಿಳಿಸುವುದು. ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸುವುದು. ನಗರ ಸ್ಥಳೀಯ ಸಂಸ್ಥೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಬಂಧಿಸುವುದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡುವುದು ಹಾಗೂ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡುವುದು. ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನಃ ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದು.

# ಇತ್ತೀಚೆಗೆ ಅಗಲಿದ ಗಣ್ಯರಿಗೆ ವಿಧಾನಪರಿಷತ್‌ನಲ್ಲಿ ಶ್ರದ್ಧಾಂಜಲಿ

**ಬೆಳಗಾವಿ:** ಇತ್ತೀಚೆಗೆ ಅಗಲಿದ ಶಾಸಕ ಎಚ್. ವೈ.ಮೇಟಿ, ಖ್ಯಾತ ಪರಿಸರ ಪ್ರೇಮಿ ಸಾಲುಮರದ ತಿಮಕ್ಕ, ಚಿತ್ರನಟರಾದ ಧರ್ಮೇಂದ್ರ, ಉಮೇಶ್, ವಿಧಾನಪರಿಷತ್‌ನ ಮಾಜಿ ಸದಸ್ಯ ಕೆ.ನರಹರಿ ಸೇರಿದಂತೆ ಹಲವು ಗಣ್ಯರಿಗೆ ವಿಧಾನಪರಿಷತ್‌ನಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ದಿನದ ಕಲಾಪ ಆರಂಭವಾಗುತ್ತಿದ್ದಂತೆ ಸಭಾಪತಿ ಬಸವರಾಜ ಹೊರಟ್ಟಿಯವರು ಅಗಲಿದ ಗಣ್ಯರಿಗೆ ಗೌರವ ಸೂಚಿಸುವ ಸಂತಾಪ ನಿರ್ಣಯವನ್ನು ಮಂಡಿಸಿದರು. ಸಂತಾಪ ನಿರ್ಣಯದ ಮೇಲೆ ಆಡಳಿತ ಪಕ್ಷದ ನಾಯಕ ಎನ್.ಎಸ್.ಬೋಸರಾಜ್, ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಹಲವರು ಮಾತನಾಡಿ, ಸಂತಾಪ ನಿರ್ಣಯದ ಮೇಲೆ ಮಾತನಾಡಿದ ಹೊರಟ್ಟಿಯವರು ಅಗಲಿದ ಗಣ್ಯರ ಸೇವೆಯನ್ನು ಸರಿಸಿದರು.

ಪದ್ಮಶ್ರೀ ಹಾಗೂ ನಾಡೋಜ ಪ್ರಶಸ್ತಿ ಪುರಸ್ಕೃತೆ ಶತಾಯುಷಿ ಸಾಲುಮರದ ತಿಮಕ್ಕ ಅವರು ರಸ್ತೆಬದಿ ಆಲದ ಮರಗಳನ್ನು ಬೆಳೆಸಿ ಅವುಗಳನ್ನು ಮಕ್ಕಳಂತೆ ಸಾಕಿ ಪೋಷಣೆ ಮಾಡಿ ಸುಮಾರು 4000ಕ್ಕಿಂತಲೂ ಹೆಚ್ಚಿನ ಮರಗಳನ್ನು ಬೆಳೆಸುವ ಮೂಲಕ ಸಾಲುಮರದ ತಿಮಕ್ಕ ಎಂದೇ ಖ್ಯಾತಿಯಾಗಿದ್ದರು.

ಇವರ ಸ್ಫೂರ್ತಿಯನ್ನು ಮನಗಂಡು ತಿಮಕ್ಕ ಮಾತು 284 ಮಕ್ಕಳು ಸಾಕ್ಷ್ಯ ಚಿತ್ರವನ್ನು ನಿರ್ಮಿಸಲಾಗಿತ್ತು. ಇದು 2000ನೇ ಇಸವಿಯ ಅಂತಾರಾಷ್ಟ್ರಿಯ ಚಲನಚಿತ್ರೋತ್ಸವದಲ್ಲೂ ಪ್ರದರ್ಶನಗೊಂಡಿತ್ತು ಎಂದು ಸರಿಸಿದರು.

ಶಿಕ್ಷಣವನ್ನೂ ಪಡೆಯದಿದ್ದ ಅವರು ಪರಿಸರ ಸಂರಕ್ಷಣೆಗೆ ನೀಡಿರುವ ಸೇವೆಯನ್ನು ಪರಿಗಣಿಸಿ ಅವರಿಗೆ ಪದಶ್ರೀ ಪ್ರಶಸ್ತಿ ನೀಡಲಾಗಿತ್ತು. ಕರ್ನಾಟಕದ ಕೇಂದ್ರಿಯ ವಿಶ್ವವಿದ್ಯಾಲಯವು 2024 ಗೌರವ ಡಾಕ್ಟರೇಟ್, ಇಂದಿರಾ ಪ್ರಿಯದರ್ಶಿನಿ, ವೃಕ್ಷಮಿತ್ರ, ಕಲ್ಪವಲ್ಲಿ, ಮಹಿಳಾ ರತ್ನ, ಕನ್ನಡ ರಾಜ್ಯೋತ್ಸವ ಸೇರಿದಂತೆ ಹಲವಾರು ಪ್ರಶಸ್ತಿಗಳು ಬಂದಿದ್ದವು ಎಂದು ನೆನಪಿಸಿಕೊಂಡರು.

ಸಂತಾಪ ನಿರ್ಣಯದ ಮೇಲೆ ಮಾತನಾಡಿದ ಸಭಾನಾಯಕ ಬೋಸ್‌ರಾಜ್ ಅವರು, ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾಗಿದ್ದ ಎಚ್.ವೈ.ಮೇಟಿ ಅವರು ಮಂಡಳ ಪಂಚಾಯ್ತಿ ಅಧ್ಯಕ್ಷರಾಗಿ ತಮ ರಾಜಕೀಯ ಜೀವನವನ್ನು ಪ್ರಾರಂಭಿಸಿದರು. ಪಿಎಲ್‌ಡಿ ಬ್ಯಾಂಕ್, ಎಪಿಎಂಸಿ ಅಧ್ಯಕ್ಷರಾಗಿ ವಿವಿಧ ಹಂತಗಳಲ್ಲಿ ಬೆಳೆದು, ನಂತರ ಶಾಸಕರಾಗಿ, ಸಂಸದರಾಗಿ, ಸಚಿವರಾಗಿ ಕೆಲಸ ಮಾಡಿದ್ದರು ಎಂದು ನೆನಪಿಸಿಕೊಂಡರು.

# ರಾಜ್ಯ ಕಾನೂನು ವಿಶ್ವವಿದ್ಯಾಲಯಕ್ಕೆ ಅಂಬೇಡ್ಕರ್ ಹೆಸರು ಮರುನಾಮಕರಣ ಮಾಡಿ

**ದಾವಣಗೆರೆ:** ಕಾನೂನು ಪದವಿ ಪೂರ್ಣಗೊಳಿಸಿ ಹೊಸದಾಗಿ ವಕೀಲ ವೃತ್ತಿ ಆರಂಭಿಸುವ ಯುವ ವಕೀಲರಿಗೆ ಸರ್ಕಾರ ಸೌಲಭ್ಯ ಕಲ್ಪಿಸಬೇಕು ಎಂದು ಯುವ ವಕೀಲರ ಸಂಘ ಆಗ್ರಹಿಸಿದೆ.

ಸುದ್ದಿಗೋಷ್ಠಿಯಲ್ಲಿ ಸಂಘದ ಟಿ.ಕಿರಣ್ ಕುಮಾರ್ ಮಾತನಾಡಿ, ಗ್ರಾಮೀಣ ಭಾಗದ ಎಲ್ಲಾ ವರ್ಗ, ಜಾತಿಯ ನವ ವಕೀಲರಿಗೆ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಕಾನೂನು ಅಭ್ಯಾಸ ಮಾಡಲು ಅನುಕೂಲವಾಗುವಂತೆ ಎರಡು ವರ್ಷಗಳ ಅವಧಿಗೆ ಕೆಎಸ್ಸಾರ್ಟಿಸಿ ಉಚಿತ ಬಸ್ ಪಾಸ್ ನೀಡಬೇಕು. ಪ್ರೋತ್ಸಾಹಧನ ಪಾವತಿಗೆ ವಿಳಂಬ ಮಾಡದೇ, ಕಾಲಕಾಲಕ್ಕೆ ನೇರವಾಗಿ ಅವರವರ ಖಾತೆಗಳಿಗೆ ಜಮಾಗೊಳಿಸಲು ಕ್ರಮ ಕೈಗೊಳ್ಳಬೇಕು. ರಾಜ್ಯದ ಎಲ್ಲಾ ನ್ಯಾಯಾಲಯಗಳಲ್ಲಿ ಯುವ ವಕೀಲರ ಭವನ ನಿರ್ಮಿಸಬೇಕು. ಕಾಲಕಾಲಕ್ಕೆ ನೇರವಾಗಿ ಅವರವರ ಖಾತೆಗಳಿಗೆ ಜಮಾಗೊಳಿಸಲು ಕ್ರಮ ಕೈಗೊಳ್ಳಬೇಕು. ರಾಜ್ಯದ ಎಲ್ಲಾ ನ್ಯಾಯಾಲಯಗಳಲ್ಲಿ ಯುವ ವಕೀಲರ ಭವನ ನಿರ್ಮಿಸಬೇಕು. ಸರ್ಕಾರಿ ನೌಕರರಿಗೆ ನೀಡುತ್ತಿರುವ ಕೆಲವು ಸವಲತ್ತುಗಳನ್ನು ಯುವ ವಕೀಲರಿಗೆ ನೀಡಬೇಕು ಎಂದು ಮನವಿ ಮಾಡಿದರು.



ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯಕ್ಕೆ ಮರುನಾಮಕರಣ ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆ. ಒಂದು ವೇಳೆ ವಿಶ್ವವಿದ್ಯಾಲಯಕ್ಕೆ ವ'ಂರ'ಂನಾವ'ಂಕ'ರ'ಣ ವ'ಾಡ'ಂವ'ುದಾದ'ರ' ಡಾ.ಬಿ.ಆರ್.ಅಂಬೇಡ್ಕರ್ ಹೆಸರನ್ನು ಪರಿಗಣಿಸಬೇಕು. ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯಕ್ಕೆ ಡಾ.ಬಿ.ಆರ್. ಅಂಬೇಡ್ಕರ್ ಕಾನೂನು ವಿಶ್ವವಿದ್ಯಾಲಯ ಎಂಬುದಾಗಿ ಮರುನಾಮಕರಣ ಮಾಡಬೇಕು ಎಂದು ಅವರು ವಿನಂತಿಸಿದರು.

ಸಂಘದ ಕೆ.ಎ.ಗುರುರಾಜ್ ಅರಸೀಕೆರೆ, ಅಶೋಕ ಅರಸೀಕೆರೆ, ಬಿ.ಎನ್.ನಾಗಸ್ಮಿತ, ತೋರಣ ಕುಮಾರ, ಬಿ.ಹರೀಶ, ಎಸ್.ಶ್ರೀನಿವಾಸ ಸುದ್ದಿಗೋಷ್ಠಿಯಲ್ಲಿದ್ದರು.

# ಚೀಲೂರಿನ ನ್ಯಾಷನಲ್ ಇಂಗ್ಲೀಷ್ ಸ್ಕೂಲ್‌ನಲ್ಲಿ ಶಾಲಾ ವಾರ್ಷಿಕೋತ್ಸವ

**ನ್ಯಾಮತಿ :** ನ್ಯಾಮತಿ ತಾಲೂಕಿನ ಚೀಲೂರಿನ ನ್ಯಾಷನಲ್ ಇಂಗ್ಲೀಷ್ ಸ್ಕೂಲ್‌ನಲ್ಲಿ ಶಾಲಾ ವಾರ್ಷಿಕೋತ್ಸವದ ಎನ್ ಇ ಎಸ್ ಹಬ್ಬದಲ್ಲಿ 2024–25 ನೇ ಸಾಲಿನಲ್ಲಿ 10 ನೇ ತರಗತಿಯ ಪರೀಕ್ಷೇಯಲ್ಲಿ ಅಧಿಕ ಅಂಕಗಳಿಸಿದ 16 ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಶಿಕ್ಷಣ ಸಮಿತಿಯ ಕಾರ್ಯದರ್ಶಿ ನಾಗರಾಜ್ ಎಸ್ ಎನ್ , ನಿರ್ದೇಶಕ ಶಿವಕುಮಾರ , ಕರ್ನಾಟಕ ರಾಜ್ಯ ಸರಕಾರಿ ಪ್ರೌಢಶಾಲಾ ಶಿಕ್ಷಕರ ಸಂಘ ಅಧ್ಯಕ್ಷ ಸಿದ್ದಬಸಪ್ಪ ಬಿ , ಪ್ರಾಂಶುಪಾಲ ಆದರ್ಶ ಜಿ ಸಿ, ಕನ್ನಡ ಮಾಧ್ಯಮ ಶಾಲೆಯ ಮುಖ್ಯ ಶಿಕ್ಷಕಿ ಪೂರ್ಣಿಮಾ , ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೂಪ ಕೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.




# ಕೊಬ್ಬರಿ ಶೇಖರಣಾ ಘಟಕ ನಿರ್ಮಾಣಕ್ಕೆ ಆರ್ಥಿಕ ಸಹಾಯ ಲಭ್ಯ

**ಹಾಸನ :** ಕನಿಷ್ಠ 2.5 ಎಕರೆ ತೆಂಗಿನ ತೋಟ ಹೊಂದಿರುವ ರೈತರಿಗೆ ಕೊಬ್ಬರಿ ಸಂಸ್ಕರಣಾ/ಶೇಖರಣಾ ಘಟಕ (ಪ್ರಾಥಮಿಕ ಸಂಸ್ಕರಣಾ ಘಟಕ) ನಿರ್ಮಾಣಕ್ಕೆ ತೆಂಗು ಅಭಿವೃದ್ಧಿ ಮಂಡಳಿಯಿಂದ ಆರ್ಥಿಕ ಸಹಾಯ ಲಭ್ಯವಿದ್ದು, ಆಸಕ್ತಿ ಹೊಂದಿರುವವರು ಈ ಯೋಜನೆಯ ಸದುಪಯೋಗಪಡಿಸಿಕೊಳ್ಳಬೇಕಾಗಿ ಕೋರಲಾಗಿದೆ. ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ ಡಿಸೆಂಬರ್ 15 ಆಗಿದ್ದು, ಅರ್ಜಿಗಳನ್ನು ಉಪ ನಿರ್ದೇಶಕರು (ಮಾರ್ಕೆಟಿಂಗ್), ಪ್ರಾದೇಶಿಕ ಕಚೇರಿ, ತೆಂಗು ಅಭಿವೃದ್ಧಿ ಮಂಡಳಿ, ಕೆರಾ ಭವನ, ರಾಯಲ್ ಮೀನಾಕ್ಷಿ ಮಾಲ್ ಎದುರು, ಬನ್ನೇರುಘಟ್ಟ ರಸ್ತೆ, ಹುಳಿಮಾವು, ಬೆಂಗಳೂರು 560076. ದೂರವಾಣಿ–080–26593750 ವಿಳಾಸಕ್ಕೆ ಕಳುಹಿಸಬೇಕಾಗಿ ತಿಳಿಸಲಾಗಿದೆ.

# ಹಿಂದುಳಿದ ವರ್ಗಕ್ಕೂ ರಾಜಕೀಯ ಶಕ್ತಿ ಸಿಗಲಿ

## ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ರಾಜ್ಯ ಚುನಾವಣಾ ಆಯೋಗದ ನಿವೃತ್ತ ಆಯುಕ್ತ ಪಿ.ಎನ್. ಶ್ರೀನಿವಾಸಾಚಾರಿ ಅಭಿಮತ

**ದಾವಣಗೆರೆ:** 'ಹಿಂದುಳಿದ ವರ್ಗಗಳಿಗೆ ರಾಜಕೀಯ ಶಕ್ತಿ ಬರುವವರೆಗೂ ಬೇರೊಬ್ಬರ ಅಡಿಯಾಳಾಗಿ ಇರಬೇ–ಕಾಗುತ್ತದೆ. ಕೆಲವೇ ಸಮುದಾಯಗಳಿಗೆ ರಾಜಕೀಯ ಅಧಿಕಾರ ಸೀಮಿತವಾಗಿದ್ದು, ಎಲ್ಲರಿಗೂ ರಾಜಕೀಯ ಸಮಾನತೆ ಎಂದು ರಾಜ್ಯ ದೊರೆಯಬೇಕು' ಚುನಾವಣಾ ಆಯೋಗದ ನಿವೃತ್ತ ಆಯುಕ್ತ ಪಿ.ಎನ್. ಶ್ರೀನಿವಾಸಾಚಾರಿ ಅಭಿಪ್ರಾಯಪಟ್ಟರು.

ಇಲ್ಲಿನ ಗುರುಭವನದಲ್ಲಿ ವಿರಾಟ್ ವಿಶ್ವ ಗ್ಲೋಬಲ್ ಫೌಂಡೇಷನ್ ವತಿಯಿಂದ ಜಿಲ್ಲಾ ವಿಶ್ವಕರ್ಮ ಸಮಾಜ ಹಾಗೂ ಜಿಲ್ಲಾ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಭಾನುವಾರ ನಡೆದ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

'ಎಲ್ಲಾ ರಾಜಕೀಯ ಪಕ್ಷಗಳು ಗೆಲ್ಲುವ ಅಭ್ಯರ್ಥಿಗಳಿಗೆ ಮಾತ್ರ ಟಿಕೆಟ್ ನೀಡುತ್ತಿವೆ. ಜಾತಿ ಮತ್ತು ಹಣ ಬಲ ಎರಡೂ ರಾಜಕೀಯದ ಭಾಗವಾಗಿವೆ. ಇದುವರೆಗೂ ವಿಧಾನಸಭೆ ಪ್ರವೇಶಿಸದ

ಸಣ್ಣ, ಶೋಷಿತ ಸಮುದಾಯಗಳಿಗೆ ಅವಕಾಶ ನೀಡಬೇಕು. ಸೋತರೂ ಚಿಂತೆಯಿಲ್ಲ. ಅವರಿಗೆ ಟಿಕೆಟ್ ನೀಡುವ ಮೂಲಕ ರಾಜಕೀಯ ಸಮಾನತೆಯನ್ನು ಸಾರಬೇಕು' ಎಂದರು.

'ದೇಶದಲ್ಲಿ ಸಂವಿಧಾನ ಜಾರಿಯಾಗಿ ಹಲವು ದಶಕಗಳು ಗತಿಸಿದರೂ, ಇದುವರೆಗೆ ಹಿಂದುಳಿದ 90ಕ್ಕೂ ಹೆಚ್ಚು ಸಮುದಾಯಗಳಿಗೆ ರಾಜಕೀಯ ಪ್ರಾತಿನಿಧ್ಯ ದೊರೆತಿಲ್ಲ. ಸಂಸತ್ತು ಮತ್ತುವಿಧಾನಸಭೆ ಕೆಲವೇ ಸಮುದಾಯಗಳ ಆಸ್ತಿಯಾಗಿ ಉಳಿದುಕೊಂಡಿರುವುದು ಸರಿಯಲ್ಲ' ಎಂದು ಅಸಮಾಧಾನ ವ್ಯಕ್ತ–ಪಡಿಸಿದರು.

'ಹಿಂದೆ ಜನಬಲದಿಂದ ನಡೆಯುತ್ತಿದ್ದ ಚುನಾವಣೆಗಳು ಈಗ ಪ್ರತಿಯೊಬ್ಬರಿಗೂ ಸಂವಿಧಾನದ ಜಾತಿ, ಹಣ ಬಲದಿಂದ ನಡೆಯುತ್ತಿವೆ. ಆಶಯದಂತೆ ರಾಜಕೀಯ, ಆರ್ಥಿಕ, ಸಾಮಾಜಿಕ ಸಮಾನತೆ ಬೇಕು. ಆದರೆ, ಹಿಂದುಳಿದ ಸಮಾಜದಲ್ಲಿ ಇದುವರೆಗೂ ಎಷ್ಟು ಜನರಿಗೆ ರಾಜಕೀಯ ಪ್ರಾತಿನಿಧ್ಯ ದೊರೆತಿದೆ' ಸಣ್ಣ, ಶೋಷಿತ ಸಮುದಾಯಗಳಿಗೆ ಅವಕಾಶ ನೀಡಬೇಕು.

ಸೋತರೂ ಚಿಂತೆಯಿಲ್ಲ. ಅವರಿಗೆ ಟಿಕೆಟ್ ನೀಡುವಎಂದು ಪ್ರಶ್ನಿಸಿದರು.

'ಅರಸು ಅವಧಿಯಿಂದು ವಿಶ್ವಕರ್ಮ ಇದುವರೆಗೂ ಸಮುದಾಯದಲ್ಲಿ ಕೇವಲ ಒಬ್ಬರು ಶಾಸ–ರಾಷ್ಟೀಯ ಪಕ್ಷಗಳು ಟಿಕೆಟ್ ನೀಡುತ್ತಿಲ್ಲ. ಕರಾಗಿದ್ದಾರೆ. ನಂತರ ಯಾರೊಬ್ಬರಿಗೂ ಎಲ್ಲರಿಗೂ ರಾಜಕೀಯ ಸಮಾನತೆ ಇಚ್ಛಾಶಕ್ತಿ ಯಾವ ದೊರೆಯಬೇಕು. ಆದರೆ, ಪರಿಹಾರ ಸೂಚಿಸುವ ಇವರಿಗೆಲ್ಲಾ ಸ್ವಲ್ಪವಾದರೂ ಅಂತರಾತ್ಮ ಆತ್ಮಸಾಕ್ಷಿ ಇದೆಯಾ ಎಂದು ಬೇಸರಿಸಿದರು ವಿರಾಟ್ ವಿಶ್ವ ಗ್ಲೋಬಲ್ ಪಕ್ಷಗಳ ನಾಯಕರಲ್ಲೂ ವಿಶ್ವ ಗ್ಲೋಬಲ್ ಅಧ್ಯಕ್ಷತೆ ವಹಿಸಿದ್ದರು. ವಾಣಿಜ್ಯ ತೆರಿಗೆ ಫೌಂಡೇಷನ್ ಅಧ್ಯಕ್ಷ ಎ.ರಾಜೇಶ್ ಇಲಾಖೆಯ ಸಹಾಯಕ ಆಯುಕ್ತ ಸ್ವಾವಿಕವಾಗಿ ಮಾತನಾಡಿದರು. ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ

ಅಧ್ಯಕ್ಷ ಸುಜ್ಞಾನಮೂರ್ತಿ, ಹರಪನಹಳ್ಳಿ ತಹಶೀಲ್ದಾರ್ ಗಿರೀಶ್ ಬಾಬು, ವಿಶ್ವಕರ್ಮ ಸಮಾಜದ ಜಿಲ್ಲಾ ಪ್ರಮುಖರಾದ ಶ್ರೀಧರ್ ಸುಗಟೂರು, ಘಟಕದ ಅಧ್ಯಕ್ಷ ನಾಗೇಂದ್ರಾಚಾರ್, ಮಂಡಲೂರು, ಉಷಾ ಭಾಸ್ಕರ್, ತಿಲಕ್ ರಾಜಗುರು, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಪರಮೇಶ್ವರಾಚಾರ್, ಲೋಕಾಚಾರ್ ಅಚ್ಯುತಾನಂದ ಸ್ವಾಗತಿಸಿದರು.

### ಮುಖ್ಯಾಂಶಗಳು

- ಎಸ್.ಎಸ್.ಎಲ್.ಸಿ ದ್ವಿತಿಯ ಪಿಯುಸಿ ಸಾಧಕರಿಗೆ ಸನ್ಮಾನ
- ಚಿತ್ರದುರ್ಗ, ಶಿವಮೊಗ್ಗ, ಬಳ್ಳಾರಿ ಜಿಲ್ಲೆಗಳ ವಿದ್ಯಾರ್ಥಿಗಳು ಭಾಗಿ
- ವಿಶ್ವಕರ್ಮ ಸಮುದಾಯದ ಹಲವು ಗಣ್ಯರು ಭಾಗಿ

**ವಿದ್ಯಾರ್ಥಿಗಳು ಮೊಬೈಲ್ ಹಾಗೂ ಟಿ.ವಿ ಗೀಳಿಗೆ ಬಲಿಯಾಗದೇ ವಿದ್ಯಾಭ್ಯಾಸದತ್ತ ಹೆಚ್ಚಿನ ಒಲವು ತೋರಬೇಕು. ಶೈಕ್ಷಣಿಕವಾಗಿ ಸಾಧನೆ ತೋರಿದರೆ ಬೇರೆಲ್ಲವೂ ನಿಮ್ಮನ್ನು ಹುಡುಕಿಕೊಂಡು ಬರಲಿವೆ**

ಪಿ.ಎನ್. ಶ್ರೀನಿವಾಸಾಚಾರಿ, ರಾಜ್ಯ ಚುನಾವಣಾ ಆಯೋಗದ ನಿವೃತ್ತ ಆಯುಕ್ತ

# ಎಂ. ಹೈದರಲಿಗೆ ಪಿಹೆಚ್‌ಡಿ ಪ್ರದಾನ

**ದಾವಣಗೆರೆ:** ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕಿನ ಭಾನುವಳ್ಳಿಯ ಎಂ. ಹೈದರಲಿ ಇವರು ರಾಜ್ಯಶಾಸ್ತ್ರ ವಿಷಯದಲ್ಲಿ ಮಂಡಿಸಿದ ಸಂಶೋಧನಾ ಮಹಾಪ್ರಬಂಧಕ್ಕೆ ದಾವಣಗೆರೆ ವಿಶ್ವವಿದ್ಯಾನಿಲಯವು ಪಿಹೆಚ್.ಡಿ. ಪ್ರದಾನ ಮಾಡಿದೆ.

ಹೈದರಲಿ ರಾಜ್ಯಶಾಸ್ತ್ರ ರಾಜಕೀಯ ವಿಷಯದಲ್ಲಿ 'ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಅಲ್ಪಸಂಖ್ಯಾತರ ಭಾಗವಹಿಸುವಿಕೆ (ವಿಶೇಷವಾಗಿ ಮುಸ್ಲಿಂ ಸಮುದಾಯಕ್ಕೆ ಸಂಬಂಧಿಸಿದಂತೆ) ಎಂಬ ವಿಷಯದ ಮೇಲೆ ಸಂಶೋಧನೆ ನಡೆಸಿ ಸ್ನಾತಕೋತ್ತರ ರಾಜ್ಯಶಾಸ್ತ್ರ ವಿಭಾಗಕ್ಕೆ ಸಲ್ಲಿಸಿದ ಮಹಾಪ್ರಬಂಧಕ್ಕೆ ಪಿ.ಹೆಚ್.ಡಿ. ದೊರೆತಿದ್ದು, ದಾವಣಗೆರೆ ವಿಶ್ವವಿದ್ಯಾನಿಲಯದ ರಾಜ್ಯಶಾಸ್ತ್ರ ವಿಷಯದ ಪ್ರಾಧ್ಯಾಪಕರು, ಅಧ್ಯಕ್ಷರು ಹಾಗೂ ರಾಷ್ಟ್ರೀಯ ಸೇವಾ ಯೋಜನೆಯ ಸಂಯೋಜನಾಧಿಕಾರಿ ಡಾ. ಅಶೋಕಕುಮಾರ್ ವೀ. ಪಾಳೇದ ಇವರ ಮಾರ್ಗದರ್ಶನದಲ್ಲಿ ಮಹಾಪ್ರಬಂಧ ಮಂಡಿಸಿದ್ದರು.

# ಹಳೆಯ ರೇಷ್ಮೆ ಬಟ್ಟೆಗಳ ಖರೀದಿ

**ದಾವಣಗೆರೆ:** ನಗರದ ಪಿ.ಜೆ. ಬಡಾವಣೆಯ ಎ.ವಿ.ಕೆ. ಕಾಲೇಜು ರಸ್ತೆಯ ರಂಗಮಹಲ್ ಪಕ್ಕದಲ್ಲಿರುವ ಕಾಂಚೀಪುರಂ ರೇಷ್ಮೆ ಸೆಂಟರ್‌ನಲ್ಲಿ ಹಳೆಯ ರೇಷ್ಮೆ ಜರಿ ಸೀರೆಗಳು, ಪಂಚೆ, ರೇಷ್ಮೆ ಬಟ್ಟೆಗಳನ್ನು ಉತ್ತಮ ಬೆಲೆಗೆ ಕೊಂಡುಕೊಳ್ಳಲಾಗುತ್ತಿದೆ.

ಕಾಂಚೀಪುರಂ, ಬನಾರಸ್, ರೇಷ್ಮೆ ಪಂಚೆಗಳು, ರೇಷ್ಮೆ ಲಂಗ, ಸೀರೆ, ಮೈಸೂರು ಸಿಲ್ಕ್, ರೇಷ್ಮೆ ಮತ್ತು ಜರಿ ಇರುವ ಸೀರೆಗಳು ಯಾವುದೇ ರೀತಿಯಲ್ಲಿದ್ದರೂ

ಜಿ ಕಾಂಚೀಪುರಂ ರೇಷ್ಮೆಅವುಗಳಿಗೆ ಕಾಂಚೀಪುರಂ ಬಾಬು ಶಾಪ್ ಸೊಸೈಟಿಯಲ್ಲಿ ಕೊಡುವ ಬೆಲೆಯನ್ನು ತಕ್ಷಣ ಕೊಡಲಾಗುತ್ತದೆ.

ಈ ಕೊಡುಗೆಯು ಡಿ. 1ರಿಂದ 9ರ ವರೆಗೆ 9 ದಿನ ಮಾತ್ರ ಸೆಂಟರ್‌ನಲ್ಲಿ ಇರಲಿದೆ. ಪೇಪರ್ ಮತ್ತು ಜರಿ ಇರುವ ರೇಷ್ಮೆ ಸೀರೆಯನ್ನು ತಂದವರಿಗೆ ಗೋಲ್ ಪ್ಲೇಟ್ ಬಳೆಯನ್ನು ಉಚಿತವಾಗಿ ನೀಡಲಾಗುವುದು. ಹಳೆಯ ಬೆಳ್ಳಿ ವಸ್ತುಗಳು ಯಾವ ಸ್ಥಿತಿಯಲ್ಲಿದ್ದರೂ ಖರೀದಿಸಲಾಗುವುದು.

ಹರಿದ ರೂಪಾಯಿ ನೋಟುಗಳು ಹಾಗೂ 2,000 ರೂ. ಮುಖಬೆಲೆಯ ನೋಟುಗಳನ್ನು ತೆಗೆದುಕೊಳ್ಳಲಾಗುತ್ತದೆ.

ಇದು ಎಕ್ಸ್‌ಚೇಂಜ್ ಆಫರ್ ಅಲ್ಲ. ಈ ಕೊಡುಗೆಯು ಸೀಮಿತ ಅವಧಿಗೆ ಲಭ್ಯವಿದ್ದು ಪ್ರತಿ ದಿನ ಬೆಳಗ್ಗೆ 10 ರಿಂದ ರಾತ್ರಿ 8 ಗಂಟೆ ವರೆಗೂ ಮಳಿಗೆ ತೆರದಿರುತ್ತದೆ. ಭಾನುವಾರವೂ ಕಾರ್ಯ ನಿರ್ವಹಿಸುತ್ತದೆ.

# ಶ್ರೀ ಶಕ್ತಿ ಫೌಂಡೇಶನ್ ಉದ್ಘಾಟನೆ

## ಅಟೋ ಚಾಲಕರ ಹೊಸ ಪ್ರಯತ್ನಕ್ಕೆ ಎಲ್ಲರ ಸಹಕಾರ ಇರಲಿ




ಗದಗ : ಸಮಾನಮನಸ್ಕ ಅಟೋ ಚಾಲಕರು ಒಗ್ಗೂಡಿ ಶ್ರೀಶಕ್ತಿ ಫೌಂಡೇಶನ್ ಮೂಲಕ ವಿಶೇಷ ಯೋಜನೆಗಳನ್ನು ಹಮ್ಮಿಕೊಂಡು ಸಮಾಜಸೇವೆಗೆ ಮುಂದಾಗಿರುವುದು ಹೆಮ್ಮೆಯ ವಿಷಯ ಎಂದು ಪಶುಪಾಲನಾ ಇಲಾಖೆಯ ಸಹಾಯಕ ನಿರ್ದೇಶಕ ಹನಮಂತಪ್ಪ ಹೊನ್ನಿನಾಯ್ಕರ ಅವರು ಹೇಳಿದರು.

ನಗರದ ನಟರಂಗ ಕಲ್ಚರಲ್ ಅಕಾಡೆಮಿ ಹಾಗೂ ಟ್ರಸ್ಟ್ ಕೇಂದ್ರದಲ್ಲಿ ಶ್ರೀಶಕ್ತಿ ಫೌಂಡೇಶನ್‌ನನ್ನು ಉದ್ಘಾಟಿಸಿ ಮಾತನಾಡಿ, ಅಟೋಚಾಲಕರಾಗಿ ಕುಟುಂಬ ನಿರ್ವಹಣೆಯೊಂದಿಗೆ ಸಂಘಟನೆಯನ್ನು ಕಟ್ಟಿ ಸಮಾಜಕ್ಕಾಗಿ ಏನಾದರೂ ಮಾಡಬೇಕು ಎನ್ನುವ ತುಡಿತದಲ್ಲಿ ಸೇವೆ ಸಲ್ಲಿಸುತ್ತಿರುವುದು ಸಾಮಾನ್ಯ ವಿಷಯವಲ್ಲ ಸಾಕಷ್ಟು ಶ್ರೀಮಂತರು ನಮ್ಮ ಮಧ್ಯವಿದ್ದರೂ ಅವರಿಗೆ ಬಾರದ ಯೋಚನೆ ಮತ್ತು ಯೋಜನೆ ಅಟೋ ಚಾಲಕರು ಅನುಷಚ್ಠಾನಗೊಳಿಸುತ್ತಿರುವುದು ಶ್ಲಾಘನೀಯವಾಗಿದೆ. ಮುಂದಿನ ದಿನಗಳಲ್ಲಿ ಈ ಸಂಘಟನೆಯಿಂದ ಇನ್ನಷ್ಟು ಸೇವೆಗಳು ಒದಗಿ ಬರಲಿ ಎಂದು ಹೇಳಿದರು.

ಜಿಮ್ಸ್‌ನ ಸಹ ಪ್ರಾಧ್ಯಾಪಕರಾದ ಡಾ.ರಾಜಶೇಖರ ಮ್ಯಾಗೇರಿ ಅವರು ಮಾತನಾಡಿ, ಗದಗ ಜಿಲ್ಲೆಯ ಶಾಲಾ-ಕಾಲೇಜು ಹಾಗೂ ವಸತಿ ನಿಲಯದ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ, ರೋಗಿಗಳಿಗೆ ಬುಕ್ಕಿಂಗ ಆಧಾರದ ಮೇಲೆ ದಿನದ 24 ಘಂಟೆಗಳ ಕಾಲ ರಿಯಾಯತಿ ದರದಲ್ಲಿ ಆಟೋ ಸೌಲಭ್ಯ ಕಲ್ಪಿಸುವದು ಮತ್ತು ಅನುಭವಿ ನುರಿತ ತಜ್ಞ ವೈದ್ಯರಿಂದ ಉಚಿತ ಚಿಕಿತ್ಸೆ ಒದಗಿಸುವದರೊಂದಿಗೆ ರಿಯಾಯಿತಿ ದರದಲ್ಲಿ ಔಷಧಿ ವಿತರಣೆ ಮಾಡುವದು ಉತ್ತಮಸೇವೆಯಾಗಿದೆ ಎಂದು ಹೇಳಿದರು.

ತೋಟಗಾರಿಕೆ ಇಲಾಖೆಯ ನಿವೃತ್ತ ಅಧಿಕಾರಿಯಾದ ಸುರೇಶ ಕುಂಬಾರ ಅವರು ಮಾತನಾಡಿ, ಪರಿಸರ ರಕ್ಷಣೆಗೆ ಮತ್ತು ಆರೋಗ್ಯ ಸುಧಾರಣೆಯತ್ತ ಹೆಚ್ಚು ಗಮನ ನೀಡಬೇಕು. ಮನೆಯ ಮೇಲ್ಚಾವಣಿ ಮೇಲೆ ತರಕಾರಿ ಬೆಳೆಯಲು ಮಹಿಳೆಯರು ಮುಂದೆ ಬರಬೇಕು ಎಂದು ಹೇಳಿದರು.

ಶ್ರೀಶಕ್ತಿ ಫೌಂಡೇಶನ್ ಅಧ್ಯಕ್ಷೆ ರಾಜೇಶ್ವರಿ ನೀಲಗಾರ ಅವರು ಮಾತನಾಡಿ, ನಮ್ಮ ಸಂಘಟನೆಯಿಂದ ವಿದ್ಯಾರ್ಥಿಗಳಿಗೆ, ಕೂಲಿ ಕಾರ್ಮಿಕರಿಗೆ, ಬೀದಿಬದಿ ವ್ಯಾಪಾರಸ್ಥರಿಗೆ ಹಾಗೂ ಸಾರ್ವಜನಿಕರಿಗೆ ರಿಯಾಯತಿ ದರದಲ್ಲಿ ಪ್ರತಿನಿತ್ಯ ಮಧ್ಯಾಹ್ನದ ಊಟದ ವ್ಯವಸ್ಥೆ ಮಾಡುವುದು. ಭಾರತೀಯ ಕ್ರೀಡೆಗಳನ್ನು ಬೆಳೆಸುವುದಲ್ಲದೇ ಎಲ್ಲಾ ಹಂತದ ಮಕ್ಕಳಿಗೆ ಕಲೆ, ಸಂಸ್ಕೃತಿ, ಸಾಹಿತ್ಯ, ಸಂಗೀತ, ನೃತ್ಯ ಮುಂತಾದ ಕಲೆಗಳನ್ನು ನುರಿತ ಹಾಗೂ ಅನುಭವಿ ಶಿಕ್ಷಕ-ಶಿಕ್ಷಕಿಯರಿಂದ ಕಲಿಸಿಕೊಡುವ ವ್ಯವಸ್ಥೆಯನ್ನು ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 9148930118, 7899965552 ಸಂಪರ್ಕಿಸಬಹುದು ಎಂದು ಹೇಳಿದರು.

ಜಿಲ್ಲಾ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ ಅಧ್ಯಕ್ಷತೆ ವಹಿಸಿದ್ದರು. ಡಾ.ನಂದಾ ಹನಬರಡಿ, ಡಾ. ಅರವಿಂದ ಕರಿಗಣ್ಣವರ, ಮಾಜಿ ಸೈನಿಕ ಸುಬೇದಾರ ಗುಳ್ಳಯ್ಯ ಮಾಲಗಿತ್ತಿಮಠ, ಮಲ್ಲಿಕಾರ್ಜುನ ಹೋಟಿ, ಪತ್ರಕರ್ತ ವೆಂಕಟೇಶ ಇಮರಾಪೂರ, ವಿಜಯಕುಮಾರ ಹಿರೇಮಠ, ಮಂಜುನಾಥ ಹಮ್ಮಿಗಿ, ಚಂದ್ರಶೇಖರ ದೊಡ್ಡಮನಿ, ಶ್ರೀಶಕ್ತಿ ಫೌಂಡೇಶನ್ ಉಪಾಧ್ಯಕ್ಷೆ ಸುಮಲತಾ ಕುಬಸದ, ಕಾರ್ಯದರ್ಶಿ ನವೀನಕುಮಾರ ಕಬ್ಬೂರ, ಶಶಾಂಕ ನವಲಗುಂದ, ಅಭಿಷೇಕ ನೀಲಗಾರ, ಗಣೇಶ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು. ಸಂತೋಷ ಜಾಲಿಹಾಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಸೋಮಶೇಖರ ಚಿಕ್ಕಮಠ ಕಾರ್ಯಕ್ರಮ ನಿರೂಪಿಸಿದರು.

# ಕನ್ನಡ ಅಳಿಯುವ ಭಾಷೆಯಲ್ಲ ಉಳಿಯುವ ಉಪನ್ಯಾಸಕ ಡಾ. ಹೊನ್ನಪ್ಪ ಹೊನ್ನಪ್ಪನವರ್



**ದಾವಣಗೆರೆ:** ಕನ್ನಡ ಅಳಿಯುವ ಭಾಷೆಯಲ್ಲ, ಉಳಿಯುವ ಭಾಷೆ. ಕನ್ನಡಿಗರಲ್ಲಿ ಕನ್ನಡ ಸಂಸ್ಕೃತಿ ಮತ್ತು ಕನ್ನಡತನ ಗಟ್ಟಿಗೊಂಡಲ್ಲಿ ಯಾವುದೇ ಆತಂಕ ಪಡುವ ಅವಶ್ಯಕತೆ ಇಲ್ಲ ಎಂದು ಉಪನ್ಯಾಸಕ ಡಾ. ಹೊನ್ನಪ್ಪ ಹೊನ್ನಪ್ಪನವರ್ ಅಭಿಪ್ರಾಯ ಪಟ್ಟರು.

ದಾವಣಗೆರೆ ಶಿವಯೋಗಿ ಮಂದಿರದಲ್ಲಿ ದಿನಾಂಕ 07.12.2025ರ ಶನಿವಾರ ಸಂಜೆ 6 ಗಂಟೆಗೆ ಅಖಂಡ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಆಯೋಜಿಸಲಾಗಿದ್ದ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಮಾತನಾಡಿದ ಅವರು, ಎರಡುವರೆ ಸಾವಿರ ವರ್ಷಗಳ ಇತಿಹಾಸವುಳ್ಳ ಕನ್ನಡ ಭಾಷೆಯನ್ನು ಯಾವುದೇ ಕಾರಣಕ್ಕೂ ಯಾರೂ ಮತ್ತು ಯಾವುದೇ ಭಾಷೆಯು ಪ್ರಭಾವ ಬೀರಿ ನಶಿಸುವಂತೆ ಮಾಡಲು ಸಾಧ್ಯವಿಲ್ಲ. ಹಾಗಾಗಿ ಅಳಿವಿನ ಕುರಿತಾಗಿ ಆತಂಕ ಪಡುವ ಚಿಂತೆ ಇಲ್ಲ. ಆದರೆ ನಮ್ಮಲ್ಲಿ ನೆಲ ಜಲ ನಾಡು ನುಡಿಯ ಅಭಿಮಾನ ಅಂತರಾಳದಲ್ಲಿ ಅದಮ್ಯವಾಗಿ ನೆಲೆಗೊಳ್ಳಬೇಕು ಎಂದರು. ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ವಿರಕ್ತಮಠದ ಬಸವ ಪ್ರಭು ಮಹಾಸ್ವಾಮಿಗಳು ಕನ್ನಡ ಏಕೀಕರಣಕ್ಕೆ ದಾವಣಗೆರೆ ಜಯದೇವ ಗುರುಗಳ ಕೊಡುಗೆ ಇದೆ . ಪ್ರಸ್ತುತ ಕನ್ನಡದ ಅಭಿವೃದ್ಧಿಗಾಗಿ ದಾವಣಗೆರೆಯ ಸಾಹಿತ್ಯ ವಲಯ ಹಾಗೂ ಕನ್ನಡಪರ ಚಳುವಳಿ ಹೋರಾಟಗಾರರು ಅಪಾರ ಕೊಡುಗೆಯನ್ನು ನೀಡಿದ್ದಾರೆ ಎಂದು ಸ್ಮರಿಸಿದರು

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅಖಂಡ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಬಿಜಿ ಅಜಯ್ ಕುಮಾರ್ ಕನ್ನಡಕ್ಕೆ ಮತ್ತು ಕನ್ನಡಿಗರಿಗೆ ಯಾವುದೇ ಅಪಾಯ ಉಂಟಾದಲ್ಲಿ ನಮ್ಮ ಅಖಂಡ ಕರ್ನಾಟಕ ರಕ್ಷಣಾ ವೇದಿಕೆ ಯಾವುದೇ ಹೋರಾಟಕ್ಕೂ ಹಿಂಜರಿಯುವುದಿಲ್ಲ ಎಂದರು.

ಅಖಂಡ ಕರ್ನಾಟಕ ರಕ್ಷಣಾ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಸೋಮಶೇಖರ್, ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ನೌಸಿನ್ ತಾಜ್, ವೇದಿಕೆಯ ಜಿಲ್ಲಾಧ್ಯಕ್ಷ ಮೋಹನ್, ಯುವ ಘಟಕದ ಜಿಲ್ಲಾಧ್ಯಕ್ಷ ಶ್ರೇಯಸ್, ಜಿಲ್ಲಾ ವರದಿಗಾರರ ಕೂಟದ ಅಧ್ಯಕ್ಷ ನಾಗರಾಜ್ ಬಡದಾಳ, ಸಿಪಿಐ ಉಮೇಶ್, ಕನ್ನಡ ಪರ ಹೋರಾಟಗಾರರಾದ ಬಂಕಾಪುರ ಚನ್ನಬಸಪ್ಪ, ನಾಗೇಂದ್ರ ಬಂಡಿಕರ್, ಕೆಜಿ ಶಿವಕುಮಾರ್, ನಾಗರಾಜ್, ಭೋಜರಾಜ್ ಯಾದವ್, ಪಾರ್ವತಮ್ಮ, ಮುಸ್ತಫಾ, ಚನ್ನ ಬಸವ ಗೌಡರ್, ಅರವಿಂದ್, ಸಂಗೀತ ರಾಘವೇಂದ್ರ, ಗಂಗಾಧರ ಬಿ ಎಲ್ ನಿಟ್ಟೂರ್ , ಹೆಚ್ ಎಂ ಪಿ ಕುಮಾರ್, ಶಿವಶಂಕರ್, ವಾಸುದೇವ ರಾಯ್ಕರ್, ಗುರು ಪ್ರಸಾದ್ , ಉಮಾದೇವಿ ಹಿರೇಮಠ, ಕಾವೇರಿ, ರೇವಣಸಿದ್ದಪ್ಪ ಸೇರಿದಂತೆ ಇತರರು ಹಾಜರಿದ್ದರು.

ನಾಡಗೀತೆಯೊಂದಿಗೆ ಆರಂಭವಾದ ಕಾರ್ಯಕ್ರಮದ ಲ್ಲಿ ದಾವಣಗೆರೆ ಫ್ರೆಂಡ್ಸ್ ಮೆಲೋಡಿ ಆರ್ಕೆಸ್ಟ್ರಾ ತಂಡದಿಂದ ಸಂಗೀತ ಸಂಜೆ ಕಾರ್ಯಕ್ರಮದ ನಡೆಯಿತು. ಕನ್ನಡ ನಾಡು ನುಡಿಗಾಗಿ ಶ್ರಮಿಸಿದ ಮಹನೀಯರಿಗೆ ಹಾಗೂ ಸಾಧಕರಿಗೆ ಸನ್ಮಾನಿಸಲಾಯಿತು

## ಉ.ಕರ್ನಾಟಕ ಸಮಸ್ಯೆ ಚರ್ಚೆ ನಿರೀಕ್ಷೆ: ಬೊಮ್ಮಾಯಿ

**ಹಾವೇರಿ:** ಚಳಿಗಾಲದ ಅಧಿವೇಶನದಲ್ಲಿ ಉತ್ತರ ಕರ್ನಾ ಟಕ ಸಮಸ್ಯೆಗಳ ಚರ್ಚೆ ಯಾಗಬೇಕು ಎಂದು ಮಾಜಿ ಸಿಎಂ, ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ,'ಉತ್ತರ ಕರ್ನಾಟಕದಲ್ಲಿ ವಿಶೇಷವಾಗಿ ಕಲ್ಯಾಣ ಕರ್ನಾ ಟಕದಲ್ಲಿ ಆಗುತ್ತಿ ರುವ ಅನ್ಯಾಯ, ಯಾವುದೇ ಮೂಲ ಭೂತ ಸೌಕರ್ಯ ಆಗುತ್ತಿಲ್ಲ, ರಸ್ತೆ ಹದಗೆಟ್ಟು ಹೋಗಿವೆ. ನೀರಾವರಿ ಯೋಜನೆಗಳು ಸ್ಥಗಿತಗೊಂಡಿವೆ. ಚರ್ಚೆ ಮಾಡಿ ಸರ್ಕಾರ ಪರಿಹಾರ ಕೊಡ ಬೇಕು. ಬೆಳೆ ಹಾನಿ ಪರಿಹಾರದಲ್ಲೂ ದೊಡ್ಡ ಅನ್ಯಾಯ ಆಗುತ್ತಿದೆ. ರೈತರು ದೊಡ್ಡ ಮಟ್ಟದ ಆಕ್ರೋಶ ವ್ಯಕ್ತಪ ಡಿಸುತ್ತಿದ್ದಾರೆ. ಈ ಎಲ್ಲ ವಿಷಯಗಳು ಚರ್ಚೆಯಾ ಗಬೇಕು' ಎಂದರು.

## 1 ಕೋಟಿಗಾಗಿ ಕಾರದ ಪುಡಿ ಎರಚಿ ಸ್ನೇಹಿತನ ಕಿಡ್ನಾಪ್

**ಮೈಸೂರು:** 1 ಕೋಟಿಗಾಗಿ ಗೆಳೆಯನ ಕಣ್ಣಿಗೆ ಖಾರದ ಪುಡಿ ಎರಚಿ ಹಿಂಸೆ ಕೊಟ್ಟು ಅಪಹರಿಸಿದ ಘಟನೆ ಮೈಸೂರಿನಲ್ಲಿ ನಡೆದಿದೆ. ಪೊಲೀಸರು ಕ್ಷಿಪ್ರ ಕಾರ್ಯಾಚ "ರಣೆಯಲ್ಲಿ ಆರೋಪಿಗಳನ್ನು ಬಂಧಿಸ ಲಾಗಿದ್ದು, ಅಪಹರಣವಾಗಿದ್ದ ಸಂತ್ರಸ್ತ ಉದ್ಯಮಿಯನ್ನು ರಕ್ಷಿಸಲಾ ಗಿದೆ. ಲೋಕೇಶ್ ಫೈನಾನ್ಸಿಯರ್, ರಿಯಲ್ ಎಸ್ಟೇಟ್ ಉದ್ಯಮಿಯಾಗಿದ್ದಾರೆ. ಇವರ ಹಣಕಾಸು ವ್ಯವಹಾರ ಗಳನ್ನು ಸ್ನೇಹಿತರಾದ ಸಂತೋಷ್ ತಿಳಿದು ಕೊಂಡಿದ್ದರು. ಹೀಗಾಗಿ ಸಂಚುರೂಪಿಸಿ ಮೈಸೂರಿನ ವಿಜಯನಗರ ಕ್ಲಬ್ ಬಳಿ ಶನಿವಾರ ರಾತ್ರಿ ಬೈಕ್‌ನಲ್ಲಿ ಹೋಗುವಾಗ ಕಣ್ಣಿಗೆ ಖಾರದ ಪುಡಿ ಎರಚಿದ್ದಾರೆ.

## ಒಂಟಿ ಮನೆಯಲ್ಲಿ ಮಹಿಳೆ ಕತ್ತು ಕೊಯ್ದು ಹತ್ಯೆ

**ರಾಣೆಬೆನ್ನೂರು:** ಒಂಟಿ ಮನೆಯಲ್ಲಿ ವಾಸವಾಗಿದ್ದ ಮಹಿಳೆಯ ಕತ್ತು ಕೊಯ್ದು ಭೀಕರವಾಗಿ ಹತ್ಯೆಗೈದ ಘಟನೆ ಭಾನುವಾರ ಕೂನಬೇವು ರಸ್ತೆಯ ಖಾಸಗಿ ಬೀಜ ಸಂಸ್ಕರಣಾ ಘಟಕದ ಆವರಣದಲ್ಲಿ ನಡೆದಿದೆ. ಮೂಲತಃ ಹಾವೇರಿ ತಾಲೂಕಿನ ಕನವಳ್ಳಿ ಗ್ರಾಮದ ಲಲಿತಾ ಕರಬಸಪ್ಪ ಬ್ಯಾಡಗಿ (43) ಕೊಲೆಯಾದ ಮಹಿಳೆ. ಈಕೆಯ ಪತಿ ನಿಧನರಾಗಿದ್ದು ತನ್ನ ಇಬ್ಬರು ಪುತ್ರರ ಜತೆ ವಾಸವಾಗಿದ್ದರು. ಮನೆ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿದ್ದರು. ಕೊಲೆಗೆ ನಿಖರವಾದ ಕಾರಣ ತಿಳಿದುಬಂದಿಲ್ಲ. ಪ್ರಕರಣ ದಾಖಲಾಗಿದೆ.

## ದಿನದ ಕೃಷಿಮೇಳಕ್ಕೆ ತೆರೆ: 10 ಲಕ್ಷ ಜನರಿಂದ ವೀಕ್ಷಣೆ

**ಮಂಡ್ಯ:** ಕೃಷಿ ವಿಶ್ವವಿದ್ಯಾಲಯದ ವತಿಯಿಂದ ಮೊಟ್ಟಮೊದಲ ಬಾರಿಗೆ ವಿ.ಸಿ.ಫಾಮ ಆವರಣದಲ್ಲಿ ಮೂರು ದಿನಗಳ ಕಾಲ ಆಯೋಜಿಸಿದ್ದ ಕೃಷಿಮೇಳವನ್ನು 10 ಲಕ್ಷ ಜನರು ವೀಕ್ಷಿಸಿ ದಾಖಲೆ ಸೃಷ್ಟಿಸಿದ್ದಾರೆ. ಮೇಳದ ಅಂತಿಮ ದಿನವಾದ ಭಾನುವಾರವೂ ಕೃಷಿ ಮೇಳದ ವೀಕ್ಷಣೆಗೆ ಜನಸಾಗರವೇ ಹರಿದು ಬಂದಿತ್ತು. ಆರಂಭದ ದಿನ 1.25 ಲಕ್ಷ ಜನರು ಮೇಳವನ್ನು ವೀಕ್ಷಿಸಿದರೆ ಎರಡನೇ ದಿನ 3.75 ಲಕ್ಷ ಜನರು ಆಗಮಿಸಿದ್ದರು. ಕೊನೆ ದಿನವಾದ ಭಾನುವಾರ 4 ಲಕ್ಷದಷ್ಟು ಜನರು ಕೃಷಿಮೇಳ ವೀಕ್ಷಿಸಿದರು ಎಂದು ಕೃಷಿ ವಿವಿ ಮೂಲಗಳು ತಿಳಿಸಿವೆ.

## ವೀಕೆಂಡ್‌ನಲ್ಲಿ ನಂದಿಗಿರಿ, ಈಶಾದತ್ತ ಪ್ರವಾಸಿಗರ ದಂಡು, ಟ್ರಾಫಿಕ್ ಜಾಂ

**ಚಿಕ್ಕಬಳ್ಳಾಪುರ:** ವೀಕೆಂಡ್ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರದ ಪ್ರಸಿದ್ಧ ನಂದಿಗಿರಿಧಾಮ ಮತ್ತು ಧಾರ್ಮಿಕ ಕೇಂದ್ರ 122 ಅಡಿ ಎತ್ತರದ ಆದಿಯೋಗಿಯ ಈಶಾದತ್ತ ಭಾನುವಾರ ಪ್ರವಾಸಿಗರ ದಂಡೇ ಹರಿದು ಬಂತು. ಬಡವರ ಪಾಲಿನ ಊಟಿ ಎಂದೇ ಪ್ರಖ್ಯಾತಿ ಪಡೆದಿರುವ ನಂದಿಗಿರಿಧಾಮಕ್ಕೆ ಪ್ರವಾಸಿಗರ ದಂಡೇ ಹರಿದು ಬಂತು. ಬೆಳ್ಳಂಬೆಳಗ್ಗೆ, ನಂದಿಬೆಟ್ಟಕ್ಕೆ ಹೋಗಬೇಕು, ಸೂರ್ಯೋದಯ ನೋಡಬೇಕು ಎಂದು ಕಾರು ಹಾಗೂ ಬೈಕ್‌ಗಳಲ್ಲಿ ಪ್ರವಾಸಿಗರು ಆಗಮಿಸಿದರು. ಬೆಳಗ್ಗೆ 5 ಗಂಟೆಯಿಂದಲೇ ಪ್ರವಾಸಿಗರು ಲಗ್ಗೆಯಿಟ್ಟಿದ್ದು, ಬೆಳಗ್ಗೆ 6 ಗಂಟೆಗೆ ಪಾರ್ಕಿಂಗ್ ಹೌಸ್ ಫುಲ್ ಆಗಿತ್ತು. ಏಕಕಾಲದಲ್ಲಿ ಆಗಮಿಸಿದ ಹಿನ್ನೆಲೆಯಲ್ಲಿ ಟಿಕೆಟ್ ಕೌಂಟರ್‌ನಿಂದ ನಂದಿ ಸರ್ಕಲ್ ವರೆಗೂ ಕಿಲೋ ಮೀಟರ್‌ಗಟ್ಟಲೆ ಟ್ರಾಫಿಕ್ ಜಾಮ್ ಉಂಟಾಗಿತ್ತು.

# ಮಕ್ಕಳಿಗೆ ಜೀವನ ಮೌಲ್ಯ ಶಿಕ್ಷಣದ ಕೊರತೆ ಎದ್ದು ಕಾಣುತ್ತಿದೆ



**ಚಿಕ್ಕಮಗಳೂರು:** ಶಾಲೆಗಳಲ್ಲಿ ಮಕ್ಕಳಿಗೆ ಇಂದು ಉತ್ತಮ ಶಿಕ್ಷಣ ದೊರೆಯುತ್ತಿದೆ. ಆದರೆ, ಜೀವನ ಮೌಲ್ಯ ಶಿಕ್ಷಣದ ಕೊರತೆ ಎದ್ದು ಕಾಣುತ್ತಿದೆ ಎಂದು ನಿವೃತ್ತ ನ್ಯಾಯಾಧೀಶ ಹಾಗೂ ನಿವೃತ್ತ ಲೋಕಾಯುಕ್ತ ಸಂತೋಷ್ ಹೆಗ್ಡೆ ವಿಷಾಧ ವ್ಯಕ್ತಪಡಿಸಿದರು.

ಇತ್ತೀಚೆಗೆ ನಗರದ ಹೊರವಲಯದದ ಉಂಡೇದಾಸರಹಳ್ಳಿಯಲ್ಲಿನ ವಿಶ್ವಧರ್ಮ ಪೀಠ ತಪೋವನದಲ್ಲಿ ಆಯೋಜಿಸಿದ್ದ ಬಸವತತ್ವ ಸಮಾವೇಶ ಮತ್ತು ಸ್ಮರಣೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದು ನಮ್ಮಲ್ಲಿ ಮಾನವೀಯ ಮೌಲ್ಯಗಳು ಕ್ಷೀಣಿಸುತ್ತಿದೆ. ಜೀವನ ಮೌಲ್ಯಗಳಿಗೆ ಬೆಲೆ ಕೊಡದವರು ಇಂದಿನ ಪರಿಸ್ಥಿತಿಯಲ್ಲಿ ಇದ್ದಾರೆ. ಜೈಲಿಗೆ ಹೋಗಿ ಜಾಮೀನು ಪಡೆದು ಬಂದವರಿಗೆ ಹಾರ ಹಾಕಿ ಬರಮಾಡಿಕೊಳ್ಳುತ್ತಿರುವ ಕೆಟ್ಟ ಸಂಸ್ಕೃತಿ ಬೆಳೆಯುತ್ತಿದೆ

ಎಂದು ಬೇಸರ ವ್ಯಕ್ತಪಡಿಸಿದ ಅವರು, ಪೋಷಕರು ತಮ್ಮ ಮಕ್ಕಳಲ್ಲಿ ಜೀವನ ಮೌಲ್ಯ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಲು ಮುಂದಾಗಬೇಕು. ಆಗ ಮಾತ್ರ ಈ ಸಮಾಜ ಸರಿದಾರಿಯಲ್ಲಿ ನಡೆಯಲು ಸಾಧ್ಯ ಎಂದು ಅಭಿಪ್ರಾಯಿಸಿದರು.

ಶ್ರೀಮಂತನಾಗಬೇಕು, ವೈಭವದ ಜೀವನ ಸಾಗಿಸಬೇಕು ಎಂದು ಆಸೆ ಪಡುವುದು ತಪ್ಪಲ್ಲ. ಆದರೆ, ಸರಿದಾರಿಯಲ್ಲಿ ನಡೆದು ಶ್ರೀಮಂತನಾಗಬೇಕು.

ವೈಭವದ ಜೀವನ ನಡೆಸಬೇಕು ಎಂದು ಕಿವಿಮಾತು ಹೇಳಿದ ಅವರು, ಹಿಂದೆ ತಾನು ನಿರ್ವಹಿಸುವ ಜವಬ್ದಾರಿ ತಿಳಿದು ಕರ್ತವ್ಯ ನಿರ್ವಹಿಸುತ್ತಿದ್ದರು. ಆದರೆ, ಇಂದು ಎಲ್ಲ ಕಡೆಗಳಲ್ಲಿ ಭ್ರಷ್ಟಚಾರ ತಾಂಡವ ಆಡುತ್ತಿದೆ. ಹಣ ನೀಡದಿದ್ದರೇ ಯಾವುದೇ ಕೆಲಸ ಆಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ದುರಾಸೆಗೆ ಮದ್ದಿಲ್ಲ, ಇದರಿಂದ ಸಮಾಜ ಹೊರಬರಲು ಮೌಲ್ಯ ಮತ್ತು ತೃಪ್ತಿಯ ಗುಣವನ್ನು ಬೆಳೆಸಿಕೊಳ್ಳಬೇಕು. ಆಗ ಮಾತ್ರ ಸರಿದಾರಿಗೆ ಬರಲು ಸಾಧ್ಯ ಎಂದು ತಿಳಿಸಿದರು.

ಹಿಂದೆ ಶಾಲೆಗಳಲ್ಲಿ ಮಕ್ಕಳಿಗೆ ನೀತಿ ಪಾಠಗಳನ್ನು ಹೇಳಿಕೊಡಲಾಗುತ್ತಿತ್ತು. ಆದರೆ, ಇಂದು ಶಾಲೆಗಳಲ್ಲಿ ಉತ್ತಮ ಶಿಕ್ಷಣ ದೊರೆಯುತ್ತಿದೆ. ಆದರೆ ಮೌಲ್ಯಗಳ ನಮ್ಮ ಮಕ್ಕಳಿಗೆ ಹೇಳಿ ಕೊಡುತ್ತಿಲ್ಲ. ಪೋಷಕರು ಮತ್ತು ಶಿಕ್ಷಕರು ಮಕ್ಕಳಲ್ಲಿ ಮೌಲ್ಯ ಪಾಠಗಳನ್ನು ಹೇಳಿಕೊಡುವ ಅಗತ್ಯ ಇಂದು ಇದೆ ಎಂದು ಹೇಳಿದರು.

ಇಂದು ಎಲ್ಲಾ ಕ್ಷೇತ್ರಗಳಲ್ಲೂ ಭ್ರಷ್ಟಚಾರ ಹರಡಿಕೊಂಡಿದೆ. ಭ್ರಷ್ಟಚಾರದಿಂದ ದೇಶ ಅಭಿವೃದ್ಧಿ ಹೊಂದಲು ಸಾಧ್ಯವಿಲ್ಲ. ಆಡಳಿತದಲ್ಲಿ ಬಸವತತ್ವವನ್ನು ಅವಳಡಿಸಿಕೊಳ್ಳುವ ಅಗತ್ಯವಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ನ್ಯಾಯಾಧೀಶ ಕೆಂಪೇಗೌಡ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಶ್ವಧರ್ಮ ಪೀಠದ ಡಾ। ಜಯಬಸವಾನಂದ ಸ್ವಾಮೀಜಿ ಅಧ್ಯಕ್ಷತೆವಹಿಸಿದ್ದರು. ಪಾಂಡೋಮಟ್ಟಿ ವಿರಕ್ತ ಮಠದ ಡಾ।ಗುರುಬಸವ ಮಹಾಸ್ವಾಮಿ, ಮಾಡಾಳು ನಿರಂಜನ ಮಠದ ರುದ್ರಮುನಿ ಮಹಾಸ್ವಾಮಿ, ಕೋಳುಗುಂದ ಕೇದಿಗೆ ಮಠದ ಜಯಚಂದ್ರಶೇಖರ ಮಹಾಸ್ವಾಮಿ ಕಾರ್ಯಕ್ರಮದ ಸಾನಿಧ್ಯವಹಿಸಿದ್ದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ನಗರಸಭೆ ಪೌರಾಯುಕ್ತ ಬಿ.ಸಿ.ಬಸವರಾಜ್, ರಘುರಾವ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಇದೇ ವೇಳೆ ವಚನ ಗಾಯನ ಮತ್ತು ಭಜನಾ ಕಾರ್ಯಕ್ರಮ ನಡೆಯಿತು.

# ವಿಕಲಚೇತನರಿಗೆ ಅನುಕಂಪವಲ್ಲ-ಅವಕಾಶ ಬೇಕು



**ಶಿವಮೊಗ್ಗ:** ವಿಕಲಚೇತನರಿಗೆ ಅನುಕಂಪವಲ್ಲ-ಅವಕಾಶ ಬೇಕಾಗಿದ್ದು, ಅದು ದೊರೆತಲ್ಲಿ ಏನು ಬೇಕಾದರೂ ಸಾಧಿಸುತ್ತಾರೆಂದು ತೋರಿಸಿಕೊಟ್ಟಿದ್ದಾರೆ ಎಂದು ಶಾಸಕರಾದ ಎಸ್.ಎನ್. ಚನ್ನಬಸಪ್ಪ ನುಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಶಿವಮೊಗ್ಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲೆಯಲ್ಲಿ ವಿಲಕಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ವಿವಿಧ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಬುಧವಾರ ನಗರದ ಕುವೆಂಪು ರಂಗಮಂದಿರದಲ್ಲಿ "ಸಾಮಾಜಿಕ ಪ್ರಗತಿಯನ್ನು ಸಾಧಿಸಲು ವಿಲಕಚೇತನರನ್ನು ಒಳಗೊಂಡ ಸಮಾಜವನ್ನು ರೂಪಿಸುವುದು" ಎಂಬ ಘೋಷವಾಕ್ಯದಡಿ ಆಯೋಜಿಸಿದ್ದ ವಿಶ್ವ ವಿಲಕಚೇತನರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೇವಲ ವಿಶೇಷಚೇತನರು ಮಾತ್ರವಲ್ಲದೆ ಇಡೀ ಮನುಕುಲವೇ ನೆನಪಿಡುವಂತಹ ದಿನ ಇವತ್ತಾಗಿದೆ. "ಮನಸ್ಸಿದ್ದರೆ ಮಾರ್ಗ" ಎಂಬ ನಾಣ್ಣುಡಿಯಂತೆ ವಿಶೇಷಚೇತನ ಮಹಿಳೆಯರು ಸಾಧನೆ ಮಾಡುತ್ತಿದ್ದಾರೆ. ಕ್ರಿಕೆಟ್‌ನಲ್ಲಿ ಕಾವ್ಯ, ಕುಸ್ತಿಯಲ್ಲಿ ಗೌರಮ್ಮ, ಥ್ರೋಬಾಲ್‌ನಲ್ಲಿ ಜ್ಯೋತಿ ಇಂತಹ ವಿಶೇಷಚೇತನ ಮಹಿಳೆಯರು ಅವಕಾಶ ಸಿಕ್ಕರೆ ಇಡೀ ಜಗತ್ತನ್ನೆ ಗೆಲ್ಲುತ್ತೇವೆ ಎಂದು ತೋರಿಸಿದ್ದಾರೆ. ಜಿಲ್ಲೆಯ ಮಹಿಳೆಯರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿ ಈ ದೇಶಕ್ಕೆ ಕೀರ್ತಿ ಮತ್ತು ಗೌರವ ತಂದಿದ್ದಾರೆ. ದೇಹದ ಎಲ್ಲಾ ಅಂಗಗಳು ಸರಿಯಾಗಿದ್ದೂ ಸಾಧನೆ ಮಾಡಲು ಹಿಂಜರಿಯುವ ಪೀಳಿಗೆಗೆ ವಿಶೇಷಚೇತನರು ಮಾದರಿಯಾಗಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ನಮ್ಮ ಸಮಾಜದಲ್ಲಿ ತಾಯಿಗಿಂತ ದೊಡ್ಡ ಶಕ್ತಿ ಇನ್ನೊಂದಿಲ್ಲ. ಆಕೆಗೆ ಬದಲಿ ವ್ಯವಸ್ಥೆಯೂ ಇಲ್ಲ. ಇಂತಹ ವಿಶೇಷಚೇತನ ಮಕ್ಕಳನ್ನು ಸಾಕಿ, ಸಲುಹಿ ಸಾಧನೆ ಮಾಡಲು ಮಾನಸಿಕವಾಗಿ ಸಿದ್ದಗೊಳಿಸಿದ ತಾಯಂದಿರೆಲ್ಲರಿಗೂ ಅಭಿನಂದನೆಗಳು. ಇಂತಹ ಮಕ್ಕಳು ಇರುವ ಮನೆಗಳು ಬಲಯುತವಾಗಿರುತ್ತದೆ. ವಿಶೇಷಚೇತನರು ಇತರರ ಮೇಲೆ ಅವಲಂಬಿತವಾಗದೆ ತಮ್ಮ ಸಾಧನೆಯ ಹಾದಿಯನ್ನು ರೂಪಿಸಿಕೊಳ್ಳಬೇಕು. ಅದಕ್ಕೆಂದೇ ನಿಮ್ಮ ಕುಟುಂಬಗಳು, ಸರ್ಕಾರಗಳು ಬೆಂಬಲವಾಗಿ ನಿಂತು, ಅನೇಕ ಸವಲತ್ತುಗಳನ್ನು ನೀಡುತ್ತಿವೆ ಎಂದರು.

ವಿಧಾನ ಪರಿಷತ್ ಶಾಸಕರಾದ ಧನಂಜಯ ಸರ್ಜಿ ಮಾತನಾಡಿ, ವಿಕಲಚೇತನರಲ್ಲ ಇವರು ವಿಶೇಷಚೇತನರು. ಇವರಿಗೆ ಅನುಕಂಪ ಬೇಕಾಗಿಲ್ಲ, ಬದುಕುವ ಹಕ್ಕು ನೀಡಬೇಕು.

ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿರುವ ಈ ಮೂರೂ ವಿಶೇಷಚೇತನರನ್ನು ವೇದಿಕೆಗೆ ಆಹ್ವಾನಿಸಿರುವುದು ಈ ಕಾರ್ಯಕ್ರಮದ ಗೌರವವನ್ನು ಹೆಚ್ಚಿಸಿದೆ ಎಂದರು.ವೈಫಲ್ಯತೆ ದೇಹಕ್ಕೆ ಬರಬಹುದು, ಮನಸ್ಸಿಗಲ್ಲ. ದೇಹಕ್ಕೆ ಮಿತಿ ಇರಬಹುದು, ಕನಸಿಗಲ್ಲ. ಅದಕ್ಕೆ ಪ್ರತ್ಯಕ್ಷ ಸಾಕ್ಷಿ ಕಾವ್ಯ, ಗೌರಮ್ಮ, ಜ್ಯೋತಿ. ಮನಸ್ಸು ಮಾಡಿದರೆ ಸಾಧನೆಗೆ ಯಾವುದ್ದೇ ಅಡ್ಡಿ ಇಲ್ಲ ಎಂಬುದಕ್ಕೆ ಈ ಮೂವರು ಉತ್ತಮ ಉದಾಹರಣೆ. ನೀವೆಲ್ಲಾ ಉದಾತ್ತ ಕನಸುಗಳನ್ನು ಕಾಣಬೇಕು. ಅದನ್ನು ಸಾಧಿಸುವಲ್ಲಿ ಪ್ರಯತ್ನಿಸಬೇಕು. ಕಣ್ಣಿದ್ದರೂ ಕಣ್ಣೆತ್ತಿ ನೋಡದವರು ನಿಜವಾದ ಕುರುಡರು. ಸಾಧನೆ ಮಾಡದೇ ಇರುವುದು ನಿಜವಾದ ಅಂಗವಿಕಲ್ಯ ಎಂದರು.

ವಿಧಾನ ಪರಿಷತ್ ಶಾಸಕಿ ಬಲ್ಕೀಶ್ ಬಾನು ಮಾತನಾಡಿ, ವಿಕಲಚೇತನರ ಬಗ್ಗೆ ಅಪಾರ ಪ್ರೀತಿ ಮತ್ತು ಕಾಳಜಿ ಹೊಂದಿದ್ದ ವಿಶ್ವ ಆರೋಗ್ಯ ಸಂಸ್ಥೆ 1992 ರಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಮಾಡಲು ನಿರ್ಧರಿಸಿತು.

ಈ ಸಾಧನೆ ಮಾಡಲು ಮಾನಸಿಕವಾಗಿ ಹಾಗೂ ದೈಹಿಕವಾಗಿ ಶಕ್ತಿ ಕೊಟ್ಟಿರುವ ನಿಮ್ಮ ಪೋಷಕರು, ಶಿಕ್ಷಕರು ಹಾಗೂ ಶ್ರಮಿಸಿದ ನಿಮಗೆ ಯಶಸ್ಸಿನ ಗೌರವ ಸಲ್ಲಬೇಕು ಎಂದ ಅವರು ಇವರನ್ನು ಲಾಲನೆ ಪಾಲನೆ ಮಾಡುವ ತಾಯಂದಿರಿಗೆ ಗೌರವಧವನ್ನು ಹೆಚ್ಚಿಸಬೇಕು. ಈ ಬಗ್ಗೆ ಸರ್ಕಾರಕ್ಕೆ ಮನವಿಯನ್ನು ಮಾಡುತ್ತೇವೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷ ಸಿ.ಎಸ್.ಚಂದ್ರಭೂಪಾಲ್, ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ಅಧ್ಯಕ್ಷ ತಾಜುದ್ದೀನ್‌ಖಾನ್, ಡಿಸಿ ಕಚೇರಿ ತಹಸೀಲ್ದಾರ್ ಪ್ರದೀಪ್, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿಯ ಇಲಾಖೆಯ ಉಪ ನಿರ್ದೇಶಕಿ ಭಾರತಿ ಬಣಕಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸುವರ್ಣ ವಿ. ನಾಯ್ಕ್, ಅಂತರಾಷ್ಟ್ರೀಯ ಮಹಿಳಾ ದೃಷ್ಟಿವಿಕಲಚೇತನ ವಿಶ್ವಕಪ್ ಕ್ರೀಡಾಪಟು ಕಾವ್ಯ, ಅಂತರಾಷ್ಟ್ರೀಯ ಪಂಜುಕುಸ್ತಿ ಕ್ರೀಡಾಪಟು ಗೌರಮ್ಮ, ಅಂತರಾಷ್ಟ್ರೀಯ ಥ್ರೋಬಾಲ್ ಕ್ರೀಡಾಪಟು ಜ್ಯೋತಿ, ವಿವಿಧ ಇಲಾಖೆ ಹಾಗೂ ಸಂಘ ಸಂಸ್ಥೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## ಮರ್ಯಾದೆಗೆ ಅಂಜಿ ವ್ಯಕ್ತಿ ನೇಣು ಬಿಗಿದು ಆತ್ಮಹತ್ಯೆ

**ಹಾವೇರಿ:** ಪೊಲೀಸ್ ಠಾಣೆಯಲ್ಲಿ ತನ್ನ ವಿರುದ್ಧ ದೂರು ದಾಖಲಾದ ಕಾರಣ ಮರ್ಯಾದೆಗೆ ಅಂಜಿದ ವ್ಯಕ್ತಿಯೊಬ್ಬರು ಆತ್ಮಹತ್ಯೆಗೆ ಶರಣಾದ ಘಟನೆ ತಾಲೂಕಿನ ವೆಂಕಟಾಪುರ ಗ್ರಾಮದಲ್ಲಿ ನಡೆದಿದೆ. ವೆಂಕಟಾಪುರ ನಿವಾಸಿ ದಾದಾಪೀರ (38) ಆತ್ಮಹತ್ಯೆಗೆ ಶರಣಾದ ವ್ಯಕ್ತಿ. ಮನೆಯಲ್ಲಿ ಯಾರೂ ಇಲ್ಲದ ವೇಳೆಯಲ್ಲಿ ನೇಣಿಗೆ ಶರಣಾಗಿದ್ದಾರೆ. ಮೃತ ದಾದಾಪೀರ ಅವರ ಸಹೋದರ ಮಹಮ್ಮದ್ ರಫೀಕ್ ಮತ್ತು ಆತನ ಪತ್ನಿ ನೂರುಬೇಬಿ ಮಧ್ಯೆ ಕಲಹ ನಡೆದಿತ್ತು. ಗಂಡ-ಹೆಂಡತಿ ಮಧ್ಯದ ಕಲಹದಲ್ಲಿ ಕುಟುಂಬಸ್ಥರೆಲ್ಲರ ಮೇಲೆ ದೂರು ನೀಡಲಾಗಿತ್ತು. ವರದಕ್ಷಿಣೆ ಕಿರುಕುಳ ನೀಡುತ್ತಿರುವುದಾಗಿ ಒಟ್ಟು 11 ಜನರ ವಿರುದ್ಧ ಶುದ್ಧ ರಫೀಕ್ ಪತ್ನಿ ನೂರುಬೇಬಿ ಮಹಿಳಾ ಠಾಣೆಯಲ್ಲಿ ದೂರು ನೀಡಿದ್ದರು. ಅದರಂತೆ ಪೊಲೀಸರು ಮನೆಗೆ ತೆರಳಿ ಸ್ಥಳ ಮಹಜರು ಕೂಡ ನಡೆಸಿದ್ದರು. ಈ ವೇಳೆಯಲ್ಲಿ ಠಾಣೆಗೆ ವಿಚಾರಣೆ ಬರುವಂತೆ ಮೃತ ದಾದಾಪೀರ ಅವರಿಗೆ ತಿಳಿಸಿದ್ದರು. ಇದರಿಂದ ಭಯಗೊಂಡ ದಾದಾಪೀರ, ಯಾರೂ ಇಲ್ಲದ ವೇಳೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ

## 9 ರಿಂದ ಲಾರಿ ಮಾಲೀಕರ ಅನಿರ್ದಿಷ್ಟ ಮುಷ್ಕರಕ್ಕೆ ಕರೆ

**ದಾವಣಗೆರೆ:** ಕೇಂದ್ರ ಸರ್ಕಾರದಿಂದ ಲಾರಿಗಳ ಎಫ್.ಸಿ ಮತ್ತು ಆರ್.ಆರ್.ಸಿ ಗಳ 1400 ಇದ್ದ ಶುಲ್ಕವನ್ನು 28,000 ವರೆಗೆ ಹೆಚ್ಚಿಸಿರುವುದನ್ನು ಖಂಡಿಸಿ, ದಾವಣಗೆರೆ ಲೋಕಲ್ ಮತ್ತು ಗೂಡ್ಸ್ ಶೆಡ್ ಲಾರಿ ಮುಷ್ಕರ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸರ್ಕಾರ ಲಾರಿಗಳ ಎಫ್.ಸಿ ಮತ್ತು ಆರ್.ಆರ್.ಸಿ ಗಳ ಶುಲ್ಕವನ್ನು ಒಮ್ಮೆಲೇ ಹೆಚ್ಚಿಸಿದ್ದು, ಇದರಿಂದ ತೊಂದರೆ ಉಂಟಾಗಿದೆ. ನಮ್ಮಿಂದ ಅಷ್ಟು ಮೊತ್ತ ಮಾಲೀಕರ ಸಂಘದಿಂದ ಇದೇ ದಿನಾಂಕ 9 ಭರಿಸಲು ಸಾಧ್ಯವಾಗುವುದಿಲ್ಲ. ರಾಷ್ಟಮಟ್ಟದ ಸರಕು ಸಾಗಣೆಗಳಿಗೆ ರಿಂದ ಲಾರಿಗಳ ಸರಕು ಸಾಗಣೆಯನ್ನು ನಿಲ್ಲಿಸಿ, ಪ್ರತಿಭಟನೆ ಮತ್ತು ಅನಿರ್ದಿಷ್ಟಾವಧಿ ಸಂಬಂಧಪಟ್ಟಂತೆ ಇಡೀ ದೇಶಾದ್ಯಂತಇರುವ ಲಾರಿ ಮಾಲೀಕರು ಹಗಲು ರಾತ್ರಿ ಎನ್ನದೇ ಹೆಚ್ಚಿನ ಶ್ರಮ ದುಡಿಯುತ್ತಿದ್ದಾರೆ. ಆದ್ದರಿಂದ ಕೇಂದ್ರ ಸರ್ಕಾರದಿಂದ ಲಾರಿಗಳ ಎಫ್.ಸಿ ಮತ್ತು ಆರ್.ಆರ್.ಸಿ ಗಳ ಶುಲ್ಕ ಹೆಚ್ಚಿಸಿರುವುದನ್ನು ರದ್ದುಗೊಳಿಸಿ ಈ ಹಿಂದೆ ಇದ್ದ ಶುಲ್ಕವನ್ನು ಮುಂದುವರೆಸಬೇಕೆಂದು ಸಂಘದ ಅಧ್ಯಕ್ಷ ಎಂ.ದಾದಾಪೀರ್ ಮನವಿ ಮಾಡಿದ್ದಾರೆ.

## ಇಪಿಎಫ್‌ಓ: ಡಿ.15 ರಂದು ಪಿಂಚಣಿ ಅದಾಲತ್

**ಬಳ್ಳಾರಿ:** ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಡಿಸೆಂಬರ್ 15 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ.

ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ-ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ಡಿಸೆಂಬರ್ 10 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.ಹೆಚ್ಚಿನ ಮಾಹಿತಿಗಾಗಿ ದೂ.08392-268943 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿನಲ್ಲಿ ನ್ಯಾಷನಲ್ ಕೌನ್ಸಿಲ್ ಫಾರ್ ಟೀಚರ್ ಎಜುಕೇಶನಿಂದ ಮಾನ್ಯತೆ ಪಡೆದಿರುವ ದಾವಣಗೆರೆ ಜಿಲ್ಲೆಯ ಸರ್ಕಾರಿ, ಅರೆ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ(ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಮತ್ತು ಪಾರ್ಸಿ) ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳಿಗೆ ರೂ. 25000/-ಗಳ ವಿಶೇಷ ಪ್ರೋತ್ಸಾಹಧನವನ್ನು ಸಂಬಂಧಪಟ್ಟ ವಿದ್ಯಾರ್ಥಿಗಳ ಖಾತೆಗೆ ಡಿಬಿಟಿ ಮುಖಾಂತರ ಜಮಾ ಮಾಡಲಾಗುವುದು. ಆಸಕ್ತರು ಅಲ್ಪಸಂಖ್ಯಾತರ ಸಮುದಾಯದ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಎಲ್ಲಾ ದಾಖಲಾತಿಗಳ ಸಹಿತ ಸೇವಾಸಿಂಧು ಪೋರ್ಟಲ್ (https://sevasindhu.karnataka.gov.in) ಮುಖಾಂತರ ಆನ್ ಲೈನ್ ನಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕೊನೆಯ ದಿನವಾಗಿರುತ್ತದೆ.

# ಆರೋಗ್ಯಕರ ದೇಹಕ್ಕೆ ಫೈಬರ್ ಎಷ್ಟು ಮುಖ್ಯ...?

ಪೌಷ್ಟಿಕಾಂಶದ ಕುರಿತಾ ಯಾರೇ ಮಾತನಾಡಿದರು ಪ್ರೋಟೀನ್ ಮತ್ತು ನ್ಯೂಟ್ರಿಷಿಯನ್ ಕುರಿತು ಹೆಚ್ಚಾಗಿ ಮಾತನಾಡುತ್ತಾರೆ. ಆದರೆ, ಫೈಬರ್ ಎಂಬ ಅಂಶವನ್ನು ಮರೆತೇ ಹೋಗುತ್ತಾರೆ. ಯಾವುದೇ ವ್ಯಕ್ತಿ ನಿಮಗಿಷ್ಟವಾದ ಆಹಾರ ಯಾವುದು ಎಂದರೆ, ಐಸ್ ಕ್ರೀಮ್, ಕೇಕ್, ಚಿಕನ್, ಮಟನ್ ಸೇರಿದಂತೆ ಇನ್ನಿತರ ಹೆಸರುಗಳನ್ನು ಹೇಳುವುದುಂಟು.

ಇನ್ನು ಆರೋಗ್ಯದ ಬಗ್ಗೆ ಕಾಳಜಿ ವಹಿಸುವ ಕೆಲವು ಮಂದಿ ಮಾತ್ರ ಓಟ್ಸ್, ಮೊಸರು, ಹಣ್ಣು, ತರಕಾರಿಗಳಿಂದ ಮಾಡಿದ ಆಹಾರಗಳ ಹೆಸರು ಹೇಳುತ್ತಾರೆ. ಆದರೆ, ನಾವು ಸೇವಿಸುವ ಆಹಾರ ಹೇಗಿರಬೇಕು ಮತ್ತು ನಾವು ಈಗ ಸೇವಿಸುತ್ತಿರುವ ಆಹಾರದಲ್ಲಿ ಯಾವೆಲ್ಲಾ ಅಂಶಗಳು ಸೇರಿವೆ, ಇವುಗಳು ನಮ್ಮ ಆರೋಗ್ಯದ ಮೇಲೆ ಯಾವ ರೀತಿ ಪರಿಣಾವನ್ನು ಬೀರುತ್ತದೆ ಎನ್ನುವುದನ್ನು ತಿಳಿದುಕೊಳ್ಳುವುದು ಮುಖ್ಯವಾಗುತ್ತದೆ.

ಆರೋಗ್ಯಕರ ಜೀವನಶೈಲಿ ನಡೆಸಬೇಕೆಂದರೆ ಪ್ರೋಟೀನ್, ನ್ಯೂಟ್ರಿಷಿಯನ್ ಜೊತೆಗೆ ಫೈಬರ್'ಯುಕ್ತ ಆಹಾರ ಸೇವನೆ ಕೂಡ ಅತೀ ಮುಖ್ಯವಾಗುತ್ತದೆ.




ಆಹಾರದಲ್ಲಿ ನಾರಿನಾಂಶ ಸೇರ್ಪಡೆ ಮಾಡಿದರೆ ಅದು ನಮಮ ಜೀರ್ಣಕ್ರಿಯೆಯನ್ನು ಬೆಂಬಲಿಸುವುದರಿಂದ ಹಿಡಿದು ರಕ್ತದಲ್ಲಿನ ಸಕ್ಕರೆ ಮತ್ತು ಕೊಲೆಸ್ಟ್ರಾಲ್ ಅನ್ನು ನಿಯಂತ್ರಿಸುವವರೆಗೆ ದೀರ್ಘಕಾಲೀನ ಆರೋಗ್ಯವನ್ನು ಕಾಪಾಡಿಕೊಳ್ಳುವಲ್ಲಿ ಅತ್ಯಂತ ಶಕ್ತಿಶಾಲಿ ಪಾತ್ರಗಳನ್ನು ನಿರ್ವಹಿಸುತ್ತದೆ. ಇಷ್ಟಕ್ಕೂ ಏನಿದು ಫೈಬರ್ (ನಾರಿನಾಂಶ), ನಮ್ಮ

## ನಾರಿನಾಂಶ ನಮ್ಮ ದೇಹಕ್ಕೆ ಅತ್ಯಗತ್ಯವೇಕೆ..?

ಕರುಳಿನ ನಿಯಮಿತವಾದ ಚಲನೆಗೆ ನೆರವಾಗುವುದರ ಮೂಲಕ ಅವುಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುತ್ತದೆ.

ಮಲಬದ್ಧತೆ ಮತ್ತು ಮೂಲವ್ಯಾಧಿ ಸಮಸ್ಯೆಯನ್ನು ನಿಯಂತ್ರಿಸುತ್ತದೆ.

ಹೊಟ್ಟೆ ತುಂಬಿದ ಭಾವದಿಂದಾಗಿ ಅತಿಯಾಗಿ ಆಹಾರವನ್ನು ಸೇವಿಸುವುದನ್ನು ತಡೆದು, ತೂಕ ಇಳಿಸಲೂ ನೆರವಾಗುತ್ತದೆ.

ಹೆಚ್ಚುವರಿ ಕೊಲೆಸ್ಟ್ರಾಲ್ ಅಂಶದ ವಿಸರ್ಜನೆಗೆ ದಾರಿ ಮಾಡಿಕೊಡುವುದರ ಮೂಲಕ ಬೊಜ್ಜು, ಅಧಿಕತೂಕವನ್ನು ನಿಯಂತ್ರಿಸಬಲ್ಲದು.

ದೊಡ್ಡ ಕರುಳಿನ ಕ್ಯಾನ್ಸರ್ ಸಂಭವವನ್ನು ಕಡಿಮೆ ಮಾಡುತ್ತದೆ.

ಹಿರಿಯ ನಾಗರಿಕರಲ್ಲಿ ಜೀರ್ಣಕ್ರಿಯೆಯನ್ನು ಸುಗಮಗೊಳಿಸುತ್ತದೆ.

ಪದೇ ಪದೇ ಮಲವಿಸರ್ಜನೆ, ಹೊಟ್ಟೆ ನೋವು ಹಾಗೂ ಹೊಟ್ಟೆ ಉಬ್ಬಿದಂತಹ ಸಮಸ್ಯೆ ( ಇರಿಟಬಲ್ ಬೊವೆಲ್ ಸಿಂಡ್ರೋಮ್) ಯಿಂದ ಬಳಲುವವರಲ್ಲಿ ನಾರಿನಾಂಶ ಬಹಳವೇ ಮುಖ್ಯ.

ಸಕ್ಕರೆ ಅಂಶದ ಹೀರಿಕೆಯನ್ನು ನಿಧಾನಿಸಿ, ರಕ್ತದಲ್ಲಿ ಅದರ ಪ್ರಮಾಣವನ್ನು ಸ್ಥಿರವಾಗಿಡುವಲ್ಲಿ ಸಹಕರಿಸುತ್ತದೆ.

ದೇಹ ತೂಕವನ್ನು ನಿಯಂತ್ರಣದಲ್ಲಿಡುವುದರ ಮೂಲಕ ಮಧುಮೇಹ, ಅಧಿಕ ರಕ್ತದೊತ್ತಡ, ಹೃದ್ರೋಗ, ಪಾರ್ಶ್ವವಾಯುದಂತಹ ಸಮಸ್ಯೆಗಳನ್ನು ನಿಯಂತ್ರಿಸಲೂ ಸಹಕರಿಸುತ್ತದೆ.

ಗುದದ್ವಾರದಲ್ಲಿನ ಬಿರುಕಿನ ( ಎನಲ್ ಫಿಶರ್) ಸಮಸ್ಯೆಯಿರುವವರಲ್ಲಿ ಮಲ ವಿಸರ್ಜನೆ ಸುಲಭವಾಗುವ ಮೂಲಕ ನೋವು ಕಡಿಮೆ ಮಾಡಲು ನೆರವಾಗುತ್ತದೆ.

ನಾರಿನಾಂಶವುಳ್ಳ ಆಹಾರ ಕರುಳಿನ ಸೂಕ್ಷ್ಮಜೀವಿಯನ್ನು ಸಹ ಪೋಷಿಸುತ್ತದೆ. ಇ ದು ರೋಗನಿರೋಧಕ ಶಕ್ತಿ, ಮಾನಸಿಕ ಆರೋಗ್ಯ ಮತ್ತು ಹಾರ್ಮೋನ್ ಸಮತೋಲನದ ಮೇಲೆ ಪ್ರಭಾವ ಬೀರುವ ಉತ್ತಮ ಬ್ಯಾಕ್ಟೀರಿಯಾಗಳನ್ನು ಪೋಷಿಸುತ್ತದೆ.

### ನಾರಿನಾಂಶ ಕಡಿಮೆ ತಿಂದರೆ ಏನಾಗುತ್ತದೆ?

ಕಡಿಮೆ ನಾರಿನಾಂಶವುಳ್ಳ ಆಹಾರ ಸೇವನೆ ಮಾಡಿದರೆ, ಅದು ಅನಿಯಮಿತ ಜೀರ್ಣಕ್ರಿಯೆ ಮತ್ತು ಮಧುಮೇಹ ಸಮಸ್ಯೆಗೆ ಕಾರಣವಾಗುತ್ತದೆ.ಕಾಲಾನಂತರದಲ್ಲಿ ಇದು ಹೆಚ್ಚಿನ ಕೊಲೆಸ್ಟ್ರಾಲ್, ಕೊಬ್ಬಿನ ಪಿತ್ತಜನಕಾಂಗ ಮತ್ತು ಕೊಲೊನ್ ಸಮಸ್ಯೆಗಳ ಅಪಾಯವನ್ನು ಹೆಚ್ಚಿಸಬಹುದು.

### ನಮ್ಮ ಆಹಾರದಲ್ಲಿ ನಾರಿನಾಂಶ ಸೇರಿಸುವುದು ಹೇಗೆ?

ವಯಸ್ಕರಿಗೆ ಪ್ರತಿದಿನ ಸುಮಾರು 25–30 ಗ್ರಾಂ ಫೈಬರ್ ಅಗತ್ಯವಿರುತ್ತದೆ. ಆಹಾರದಲ್ಲಿ ಫೈಬರ್ ಅಂಶವನ್ನು ಸೇರಿಸಲು ಇಚ್ಚಿಸುವವರು ನಿಮ್ಮ ದಿನವನ್ನು ಹಣ್ಣಿನ ಸೇವನೆಯೊಂದಿಗೆ ಪ್ರಾರಂಭಿಸಿ, ಬ್ರೌನ್ ರೈಸ್ ಅಥವಾ ರಾಗಿ ಬಳಸಿ.ಪ್ರತಿ ಊಟದಲ್ಲಿ ತರಕಾರಿಗಳನ್ನು ಸೇರಿಸಿ.

ಸೊಪ್ಪು, ದ್ವಿದಳ ಧಾನ್ಯಗಳು, ಬಾರ್ಲಿ, ತವುಡು (ಓಟ್ಸ್–ಧಾನ್ಯಗಳ ಮೇಲಿನ ಸಿಪ್ಪೆಯಂತಹ ಭಾಗ), ಒಣಕಾಯಿಗಳು (ನಟ್ಸ್), ವಿವಿಧ ಬಗೆಯ ಹಿಟ್ಟುಗಳು ಮಸೂರ, ಬಾದಾಮಿ, ಏಪ್ರಿಕಾರ್ಟ್, ಗೆಣಸು, ಬ್ರೊಕೊಲಿ, ಸೇಬು, ಪೇರಲೆ, ಬೀನ್ಸ್, ಬಟಾಣಿ, ಕ್ಯಾರೆಟ್ ಇನ್ನೂ ಮುಂತಾದ ಆಹಾರ ಪದಾರ್ಥಗಳಲ್ಲಿ ಫೈಬರ್ ಅಂಶ ಹೇರಳವಾಗಿ ಇರುತ್ತದೆ. ಇವುಗಳನ್ನು ನಿಮ್ಮ ಆಹಾರದಲ್ಲಿ ಸೇರ್ಪಡೆಗೊಳಿಸಿ.

# ನಮ್ಮ ದೇಹಕ್ಕೆ ಮೆಗ್ನೀಸಿಯಮ್ ತುಂಬಾ ಮುಖ್ಯವೇಕೆ.. ಕೊರತೆಯಾದರೆ ಏನಾಗುತ್ತದೆ..?




ಬದಲಾಗುತ್ತಿರುವ ಜೀವನಶೈಲಿ ಮತ್ತು ಆಹಾರ ಪದ್ಧತಿಯಿಂದಾಗಿ ಸಾಕಷ್ಟು ಜನರು ವಿವಿಧ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಆರೋಗ್ಯ ಸಮಸ್ಯೆಗಳಿಗೆ ಮೂಲ ಕಾರಣವೇನು? ಈ ಬಗ್ಗೆ ಯಾರೂ ತಲೆಕೆಡಿಸಿಕೊಳ್ಳುವುದಿಲ್ಲ. ಆದರೆ. ಅನಾರೋಗ್ಯಕ್ಕೆ ಸರಿಯಾದ ಕಾರಣವನ್ನು ಸರಿಯಾದ ಸಮಯದಲ್ಲಿ ತಿಳಿದುಕೊಳ್ಳುವುದು ಮುಖ್ಯವಾಗುತ್ತದೆ.

ವಿಶೇಷವಾಗಿ ದೇಹದಲ್ಲಿನ ವಿಟಮಿನ್ ನಂತಹ ಕೊರತೆಯು ವಿವಿಧ ರೋಗಗಳಿಗೆ ಕಾರಣವಾಗುತ್ತದೆ. ಅದೇ ರೀತಿ ನಮ್ಮ ದೇಹವು ಕಾರ್ಯ ನಿರ್ವಹಿಸಲು ಮತ್ತು ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಮೆಗ್ನೀಸಿಯಮ್ ಅತ್ಯಂತ ಅಗತ್ಯವಿರುವ 7 ಮುಖ್ಯ ಖನಿಜಗಳಲ್ಲಿ ಒಂದಾಗಿದೆ.

ಹೆಚ್ಚಿನ ಜನರು ಕೆಲವು ವಿಟಮಿನ್ ಗಳು ಮತ್ತು ಇತರ ಪೂರಕಗಳ ಮೌಲ್ಯವನ್ನು ಅರ್ಥಮಾಡಿಕೊಂಡಿದ್ದರೂ ಮೆಗ್ನೀಸಿಯಮ್ ಅನ್ನು ಕಡೆಗಣಿಸುತ್ತಾರೆ. ಮೆಗ್ನೀಸಿಯಮ್ ಕೊರತೆಯು ಸಾಕಷ್ಟು ಆರೋಗ್ಯ ಸಮಸ್ಯೆಗಳನ್ನು ಉಂಟುಮಾಡುವುದರಿಂದ ಇದನ್ನು ನಿರ್ಲಕ್ಷ್ಯ ಮಾಡುವಂತಿಲ್ಲ.

ಮೆಗ್ನೀಸಿಯಮ್ ಅನೇಕ ಅಗತ್ಯ ದೈಹಿಕ ಕಾರ್ಯಗಳನ್ನು ನಿಯಂತ್ರಿಸಲು ಮತ್ತು ಸುಗಮಗೊಳಿಸಲು ಸಹಾಯ ಮಾಡುತ್ತದೆ. ಮೆಗ್ನೀಸಿಯಮ್ ನಮ್ಮ ದೇಹದಲ್ಲಿನ ಜೀವರಾಸಾಯನಿಕ ಕ್ರಿಯೆಗಳನ್ನು ನಿಯಂತ್ರಿಸಲು ಸಹಾಯ ಮಾಡುವ 300ಕ್ಕೂ ಹೆಚ್ಚು ವಿಭಿನ್ನ ಕಿಣ್ವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದೆ. ನಮ್ಮ ದೇಹವು ಮೆಗ್ನೀಸಿಯಮ್ ಅನ್ನು ಉತ್ಪಾದಿಸುವುದಿಲ್ಲ. ಆದ್ದರಿಂದ ನಾವು ತಿನ್ನುವ ಆಹಾರದಿಂದ ಅಥವಾ ಆಹಾರ ಪೂರಕಗಳಿಂದ ಹೊರಗಿನ ಮೂಲಗಳಿಂದ ಮೆಗ್ನೀಸಿಯಂ ಅನ್ನು ಪಡೆಯಬೇಕು.

### ಶಕ್ತಿಯ ಕೊರತೆ

ಮೆಗ್ನೀಸಿಯಮ್ ಅಂಗಾಂಶಗಳಿಗೆ ಶಕ್ತಿ ನೀಡುತ್ತದೆ. ಇದರ ಕೊರತೆ ಆದಾಗ ದೇಹ ದುರ್ಬಲಗೊಳ್ಳುತ್ತದೆ. ದೇಹದಲ್ಲಿ ಮೆಗ್ನೀಸಿಯಮ್ ಮಟ್ಟವು ತುಂಬಾ ಕಡಿಮೆ ಇದ್ದಾಗ ಸೂಕ್ತ ಪ್ರಮಾಣದಲ್ಲಿ ಎಟಿಪಿ ಬಿಡುಗಡೆ ಮಾಡಲು ಸಾಧ್ಯವಾಗದು. ಇದರ ಪರಿಣಾಮವಾಗಿ ಬಳಲಿಕೆ, ನಿಶ್ಯಕ್ತಿ ಮತ್ತು ಸಹನೆ ಇಲ್ಲದಂತೆ ಆಗುವುದು. ಸೂಕ್ತ ಪ್ರಮಾಣದಲ್ಲಿ ವಿಶ್ರಾಂತಿ ಪಡೆದ ಬಳಿಕವೂ ಬಳಲಿಕೆ ಕಂಡು ಬರುತ್ತಲಿದ್ದರೆ, ಆಗ ಮೆಗ್ನೀಸಿಯಮ್ ಸೇವನೆ ಹೆಚ್ಚಿಸಬೇಕು.

ದೇಹದಲ್ಲಿ ಶಕ್ತಿಯ ಮೂಲವಾಗಿರುವಂತಹ ಅಡೆನೊಸಿನ್ ಟ್ರೈಫಾಸ್ಫೇಟ್ (ಎಟಿಪಿ) ಉತ್ಪತ್ತಿಯಲ್ಲಿ ಮೆಗ್ನೀಸಿಯಮ್ ಪ್ರಮುಖ ಪಾತ್ರ ವಹಿಸುವುದು. ಎಟಿಪಿ ಜೀವಶಾಸ್ತ್ರವಾಗಿ ಕ್ರಿಯಾತ್ಮಕವಾಗಲು ಮೆಗ್ನೀಸಿಯಮ್ ಬೇಕು. ಮೆಗ್ನೀಸಿಯಮ್ ಸರಿಯಾಗಿ ಇಲ್ಲದೆ ಇದ್ದರೆ ಆಗ ಅಂಗಾಂಶಗಳು ಶಕ್ತಿಯನ್ನು ಪರಿಣಾಮಕಾರಿಯಾಗಿ ಸಂಗ್ರಹಿಸಲು ತೊಂದರೆ ಅನುಭವಿಸುತ್ತದೆ.

### ಸ್ನಾಯು ಸೆಳೆತ

ಈ ಸಮಸ್ಯೆ ಸಾಮಾನ್ಯವಾಗಿದ್ದು ಈ ಸಮಸ್ಯೆಯಿಂದ ಬಳಲುತ್ತಿರುವವರು ಮನೆಮದ್ದು ಸಲಹೆಗಳನ್ನು ಆರಿಸಿಕೊಳ್ಳಬಹುದು. ಸೆಳೆತ ಮತ್ತು ನಡುಕ ಮೆಗ್ನೀಸಿಯಮ್ ಕೊರತೆಯ ಲಕ್ಷಣಗಳಾಗಿವೆ. ಆದರೆ ಇದಕ್ಕೆ ಬೇರೆ ಕಾರಣಗಳೂ ಇರಬಹುದು. ತೀವ್ರತರವಾದ ಪ್ರಕರಣಗಳಲ್ಲಿ ಮೆಗ್ನೀಸಿಯಮ್ ಕೊರತೆಯು ರೋಗಗ್ರಸ್ತವಾಗುವಿಕೆಗಳಿಗೆ ಕಾರಣವಾಗಬಹುದು.

### ಅಸಹಜ ಹೃದಯ ಬಡಿತ

ಮೆಗ್ನೀಸಿಯಮ್ ಕೊರತೆ ನಿಮ್ಮ ಹೃದಯ ಬಡಿತದ ಮೇಲೆ ಪರಿಣಾಮ ಬೀರುತ್ತದೆ. ಹೃದಯ ಸ್ನಾಯುವಿನ ಸಂಕೋಚನ ಮತ್ತು ವಿಶ್ರಾಂತಿಯನ್ನು ನಿಯಂತ್ರಿಸುವ ಅನೇಕ ಖನಿಜಗಳಲ್ಲಿ ಮೆಗ್ನೀಸಿಯಮ್ ಒಂದಾಗಿದೆ. ಇದರ ಕೊರತೆಯು ಹೃದಯ ಬಡಿತವನ್ನು ವೇಗಗೊಳಿಸುತ್ತದೆ. ಇದು ಹೃದಯ ಸಮಸ್ಯೆಗಳಿಗೆ ಕಾರಣವಾಗಬಹುದು.

### ಖಿನ್ನತೆ ಮತ್ತು ಆತಂಕ

ಮೆಗ್ನೀಸಿಯಮ್ ಕೊರತೆಯು ಮನಸ್ಥಿತಿಯ ಮೇಲೆ ಪರಿಣಾಮ ಬೀರುತ್ತದೆ. ದೇಹದಲ್ಲಿ ಕಡಿಮೆ ಮಟ್ಟದ ಮೆಗ್ನೀಸಿಯಮ್ ಖಿನ್ನತೆಯ ಅಪಾಯವನ್ನು ಹೆಚ್ಚಿಸುತ್ತದೆ. ಮೆಗ್ನೀಸಿಯಮ್ ನರವೈಜ್ಞಾನಿಕ ಮಾರ್ಗಗಳೊಂದಿಗೆ ಸಹಕರಿಸುತ್ತದೆ. ಇದು ಸರಿಯಾಗಿ ಕೆಲಸ ಮಾಡದಿದ್ದರೆ ಖಿನ್ನತೆ ಮತ್ತು ಆತಂಕದಂತಹ ಮಾನಸಿಕ ಅಸ್ವಸ್ಥತೆಗಳಿಗೆ ಕಾರಣವಾಗಬಹುದು.

### ದುರ್ಬಲ ಮೂಳೆಗಳು

ಕ್ಯಾಲ್ಸಿಯಂ ಮಾತ್ರವಲ್ಲ, ಮೆಗ್ನೀಸಿಯಮ್ ಕೂಡ ಮೂಳೆಗಳ ಆರೋಗ್ಯದೊಂದಿಗೆ ಬಲವಾದ ಸಂಬಂಧವನ್ನು ಹೊಂದಿದೆ. ದೇಹದಲ್ಲಿನ ಮೆಗ್ನೀಸಿಯಮ್'ನ ಶೇಕಡಾ 50 ಕ್ಕಿಂತ ಹೆಚ್ಚು ಮೂಳೆಗಳಲ್ಲಿ ಸಂಗ್ರಹವಾಗುತ್ತದೆ. ಮೆಗ್ನೀಸಿಯಮ್ ಕೊರತೆಯು ಆಸ್ಟಿಯೊಪೊರೋಸಿಸ್ ನಂತಹ ಮೂಳೆ ಸಂಬಂಧಿತ ಸಮಸ್ಯೆಗಳಿಗೆ ಕಾರಣವಾಗಬಹುದು.

### ಮೆಗ್ನೀಸಿಯಮ್ ಕೊರತೆಯಾಗಲು ಕಾರಣವೇನು..?

**ಅಸಮರ್ಪಕ ಆಹಾರ ಸೇವನೆ**

ಮೆಗ್ನೀಸಿಯಂ ಹೊಂದಿರುವ ಆಹಾರಗಳ ಸೇವನೆ ಕಡಿಮೆ ಇದ್ದರೆ, ದೇಹಕ್ಕೆ ಸಾಕಷ್ಟು ಮೆಗ್ನೀಸಿಯಂ ಲಭಿಸುವುದಿಲ್ಲ.

**ಜೀರ್ಣಾಂಗವ್ಯೂಹದ ಸಮಸ್ಯೆಗಳು**

ದೀರ್ಘಕಾಲಿಕ ಕಾಯಿಲೆ, ಸೆಲಿಯಾಕ್ ಕಾಯಿಲೆ ಮತ್ತು ಜೀರ್ಣಾಂಗವ್ಯೂಹದ ಶಸ್ತ್ರಚಿಕಿತ್ಸೆಯಂತಹ ಪರಿಸ್ಥಿತಿಗಳು ದೇಹವು ಮೆಗ್ನೀಸಿಯಂ ಅನ್ನು ಹೀರಿಕೊಳ್ಳುವುದನ್ನು ತಡೆಯುತ್ತದೆ.

**ಕೆಲ ಔಷಧಿಗಳ ಬಳಕೆ**

ಮೂತ್ರವರ್ಧಕಗಳು ಮತ್ತು ಪ್ರೋಟಾನ್ ಪಂಪ್ ಇನ್ಹಿಬಿಟರ್ಗಳು (ಕಕಖ) ಮೆಗ್ನೀಸಿಯಂ ದೇಹದಿಂದ ಹೊರಹಾಕುವಿಕೆಯನ್ನು ಹೆಚ್ಚಿಸಬಹುದು ಅಥವಾ ಹೀರಿಕೊಳ್ಳುವಿಕೆಯನ್ನು ಕಡಿಮೆ ಮಾಡಬಹುದು.

**ಮದ್ಯಪಾನ**

ದೀರ್ಘಕಾಲದ ಆಲ್ಕೋಹಾಲ್ ಸೇವನೆಯು ಮೆಗ್ನೀಸಿಯಂ ಅನ್ನು ದೇಹವು ಹೀರಿಕೊಳ್ಳುವ ಮತ್ತು ಉಳಿಸಿಕೊಳ್ಳುವ ಸಾಮರ್ಥ್ಯವನ್ನು ಕಡಿಮೆ ಮಾಡುತ್ತದೆ.

**ವಯಸ್ಸಾಗುವಿಕೆ**

ವಯಸ್ಸಾದಂತೆ, ದೇಹವು ಮೆಗ್ನೀಸಿಯಂ ಅನ್ನು ಹೀರಿಕೊಳ್ಳುವ ಮತ್ತು ಉಳಿಸಿಕೊಳ್ಳುವ ಸಾಮರ್ಥ್ಯವನ್ನು ಕಳೆದುಕೊಳ್ಳಬಹುದು, ಇದರಿಂದಾಗಿ ಕೊರತೆಯ ಪ್ರಮಾಣ ಹೆಚ್ಚಾಗುತ್ತದೆ.

### ಕೊರತೆ ನೀಗಿಸಲು ಇರುವ ಆಹಾರ ಮೂಲಗಳು



ಮೆಗ್ನೀಸಿಯಮ್ ಕುಂಬಳಕಾಯಿ ಬೀಜಗಳು, ಪಾಲಕ್, ಬೀನ್ಸ್, ಕಂದು ಅಕ್ಕಿ, ಕಡಲೆಕಾಯಿ, ಬಾದಾಮಿ ಮತ್ತು ಗೋಡಂಬಿಗಳಲ್ಲಿ ಕಂಡುಬರುತ್ತದೆ.

ಬೆಣ್ಣೆ ಹಣ್ಣು (ಆವಕಾಡೊ) ದ್ವಿದಳ ಧಾನ್ಯಗಳು, ಪೌಲ್ಟ್ರಿ ಮತ್ತು ಡಾರ್ಕ್ ಚಾಕೊಲೇಟ್ ಹಾಲಿನಲ್ಲಿಯೂ ಮೆಗ್ನೀಸಿಯಮ್ ಇರುವುದರಿಂದ ಅವುಗಳನ್ನು ಹೆಚ್ಚು ಸೇವಿಸುವುದು ಉತ್ತಮ. ಕೊರತೆ ಇದೆ ಎಂದು ಇವುಗಳನ್ನೇ ಹೆಚ್ಚು ಸೇವಿಸದಿರಿ. ಅತಿಯಾದರೆ, ಅಮೃತವೂ ವಿಷವಾಗುವುದು ಎಂಬ ಮಾತಿದೆ. ಹೀಗಾಗಿ ಹೆಚ್ಚುವರಿ ಮೆಗ್ನೀಸಿಯಮ್ ಅತಿಸಾರ ಅಥವಾ ಇತರ ಜೀರ್ಣಕಾರಿ ಅಸ್ವಸ್ಥತೆಯನ್ನು ಉಂಟುಮಾಡಬಹುದು.

## ಭಾರತದಲ್ಲಿ ಹೆಚ್ಚಾಗಿ ಮಹಿಳೆಯರಿಗೆ ಯಾಕೆ ಕ್ಯಾನ್ಸರ್ ಬರುತ್ತದೆ? ಆದ್ರೆ ಸಾಯುವವರಲ್ಲಿ ಪುರುಷರೇ ಅಧಿಕ!

**ನವದೆಹಲಿ:** ಭಾರತದಲ್ಲಿ ಮಹಿಳೆಯರಿಗೆ ಹೆಚ್ಚಾಗಿ ಕ್ಯಾನ್ಸರ್ ಬರುತ್ತಿದೆ. ಆದ್ರೆ ಸಾಯುವವರಲ್ಲಿ ಪುರುಷರೇ ಅಧಿಕ ಸಂಖ್ಯೆಯಲ್ಲಿದ್ದಾರೆ. ದೇಶದ ಇತ್ತೀಚಿನ ಕ್ಯಾನ್ಸರ್ ನೋಂದಣಿ ಅಧ್ಯಯನದಲ್ಲಿ ಇದು ಬಹಿರಂಗಗೊಂಡಿದೆ. ಎಲ್ಲಾ ಹೊಸ ಪ್ರಕರಣಗಳಲ್ಲಿ ಕೇವಲ ಅರ್ಧಕ್ಕಿಂತ ಹೆಚ್ಚು ಮಹಿಳೆಯರು ಕ್ಯಾನ್ಸರ್ ಹೊಂದಿದ್ದಾರೆ. ಆದರೆ ಪುರುಷರೇ ಹೆಚ್ಚಿನ ಸಂಖ್ಯೆಯಲ್ಲಿ ಸಾವನ್ನಪ್ಪಿದ್ದಾರೆ.

2022 ರಲ್ಲಿ ವಿಶ್ವದಾದ್ಯಂತ ಪ್ರತಿ 100,000 ಜನರಿಗೆ, ಸರಾಸರಿ 197 ಜನರಲ್ಲಿ ಕ್ಯಾನ್ಸರ್ ರೋಗನಿರ್ಣಯ ಮಾಡಲಾಗಿತ್ತು. ವರ್ಲ್ಡ್ ಕ್ಯಾನ್ಸರ್ ರಿಸರ್ಚ್ ಫಂಡ್ ಪ್ರಕಾರ, 186 ಮಹಿಳೆಯರಿಗೆ ಹೋಲಿಸಿದರೆ ಪುರುಷರ ಸಂಖ್ಯೆ 212 ಆಗಿತ್ತು. 2022 ರಲ್ಲಿ ಜಾಗತಿಕವಾಗಿ ಸುಮಾರು 20 ಮಿಲಿಯನ್ ಕ್ಯಾನ್ಸರ್ ಪ್ರಕರಣಗಳನ್ನು ಗುರುತಿಸಲಾಗಿದೆ. ಈ ಪೈಕಿ ಸುಮಾರು 10.3 ಮಿಲಿಯನ್ ಪುರುಷರು ಮತ್ತು9.7 ಮಿಲಿಯನ್ ನಷ್ಟು ಮಹಿಳೆಯರಲ್ಲಿ ಕ್ಯಾನ್ಸರ್ ಇತ್ತು.

ಅಮೆರಿಕನ್ ಕ್ಯಾನ್ಸರ್ ಸೊಸೈಟಿಯ ಪ್ರಕಾರ, ಅಮೆರಿಕದಲ್ಲಿ ಕ್ಯಾನ್ಸರ್ ನ ಅಂದಾಜು ಜೀವಿತಾವಧಿ ಅಪಾಯವು ಪುರುಷರು ಮತ್ತು ಮಹಿಳೆಯರಲ್ಲಿ ಸಮಾನವಾಗಿರುತ್ತದೆ. ಭಾರತದ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್, ಗರ್ಭಕಂಠ ಮತ್ತು ಅಂಡಾಶಯ ಕ್ಯಾನ್ಸರ್ ಸಾಮಾನ್ಯವಾಗಿದೆ. ಸ್ತನ ಮತ್ತು ಗರ್ಭಕಂಠದ ಕ್ಯಾನ್ಸರ್‌ಗಳು ಶೇ. 40 ರಷ್ಟು ಸ್ತ್ರೀಯರಲ್ಲಿ ಕಂಡುಬಂದಿದೆ.

ಮಹಿಳೆಯರಲ್ಲಿನ ಕ್ಯಾನ್ಸರ್ ಗಳು:


ಗರ್ಭಕಂಠದ ಕ್ಯಾನ್ಸರ್ ಹೆಚ್ಚಾಗಿ ಹ್ಯೂಮನ್ ಪ್ಯಾಪಿಲೋಮವೈರಸ್ (ಊಕಗಿ) ನಂತಹ ಸೋಂಕುಗಳಿಗೆ ಸಂಬಂಧಿಸಿದೆ. ಸ್ತನ ಮತ್ತು ಅಂಡಾಶಯದ ಕ್ಯಾನ್ಸರ್ ಸಾಮಾನ್ಯವಾಗಿ ಹಾರ್ಮೋನುಗಳ ಅಂಶಗಳಿಂದ ಪ್ರಭಾವಿತವಾಗಿರುತ್ತದೆ. ಈ ಹೆಚ್ಚುತ್ತಿರುವ ಹಾರ್ಮೋನ್–ಸಂಬಂಧಿತ ಕ್ಯಾನ್ಸರ್‌ಗಳು ಪ್ರಕರಣಗಳು ವಿಳಂಬಿತ ಗರ್ಭಧಾರಣೆ, ಕಡಿಮೆ ಸ್ತನ್ಯಪಾನ, ಸ್ಥೂಲಕಾಯತೆ ಮತ್ತು ಕುಳಿತುಕೊಳ್ಳುವ ಅಭ್ಯಾಸ ಮತ್ತಿತರ ಜೀವಶೈಲಿಗಳೊಂದಿಗೆ ಸಂಬಂಧಿಸಿವೆ.

ಪುರುಷರಲ್ಲಿನ ಕ್ಯಾನ್ಸರ್:

ಪುರುಷರಲ್ಲಿ ಶ್ವಾಸಕೋಶ, ಬಾಯಿ ಕ್ಯಾನ್ಸರ್ ಮತ್ತು ಪ್ರಾಸ್ಟೇಟ್ ಕ್ಯಾನ್ಸರ್ ಹೆಚ್ಚಾಗಿ ಕಂಡುಬರುತ್ತದೆ. ತಂಬಾಕಿನಿಂದ ಬರುವ ಕ್ಯಾನ್ಸರ್ ಶೇ. 40 ರಷ್ಟು ತಡೆಗಟ್ಟಬಹುದಾದ ಕ್ಯಾನ್ಸರ್ ಆಗಿದೆ. ಆದರೆ, ಬಾಯಿ, ಶ್ವಾಸ ಕೋಶ ಕ್ಯಾನ್ಸರ್ ತುಂಬಾ ಅಪಾಯಕಾರಿಯಾಗಿದೆ. ಹಾಗಾದರೆ ಭಾರತದಲ್ಲಿ ಏನು ನಡೆಯುತ್ತಿದೆ? ಮಹಿಳೆಯರಲ್ಲಿ ಬೇಗನೆ ರೋಗ ನಿರ್ಣಯವಾಗುತ್ತಿದೆಯೇ? ಪುರುಷರ ಕ್ಯಾನ್ಸರ್‌ಗಳು ಹೆಚ್ಚು ಆಕ್ರಮಣಕಾರಿಯೇ ಅಥವಾ ಧೂಮಪಾನ ಮತ್ತು ತಂಬಾಕು ಜಗಿಯುವಂತಹ ಅಭ್ಯಾಸಗಳಿಂದ ನಿರ್ಲಕ್ಷ್ಯ ವಹಿಸುತ್ತಿದ್ದಾರೆಯೇ ಎನ್ನುವ ಗೊಂದಲ ದೇಶದಲ್ಲಿ ಸಾಮಾನ್ಯವಾಗಿದೆ.

## ಹಲಸಿನ ಹಣ್ಣು ತಿಂದು ಬೀಜ ಬಿಸಾಡದಿರಿ... ಇದರಲ್ಲಿದೆ ಬೆಟ್ಟದಷ್ಟು ಪ್ರಯೋಜನ...

**ಹಸಿ ಹಲಸಿನ ಕಾಯಿಯನ್ನು ತರಕಾರಿಯಾಗಿ ಸೇವನೆ ಮಾಡಲಾಗುತ್ತದೆ. ಹಲಸು ಕಾಯಿಯಿಂದ ಮತ್ತು ಹಣ್ಣಾದಾಗ ಸಿಹಿ, ರಸಭರಿತ ಮತ್ತು ಹಣ್ಣನ್ನು ವಿವಿಧ ರೀತಿಯಲ್ಲಿ ಸೇವನೆ ಮಾಡುತ್ತಾರೆ.**



ಹಲಸಿನ ಹಣ್ಣಿನ ಸಿಹಿ ಹಾಗೂ ಈ ಹಣ್ಣಿನ ಆಹ್ಲಾದಕರ ಪರಿಮಳವನ್ನು ಯಾರು ಇಷ್ಟಪಡುವುದಿಲ್ಲ ಹೇಳಿ. ಅನೇಕರು ಈ ಹಣ್ಣನ್ನು ತಿನ್ನಲು ಇಷ್ಟಪಡುತ್ತಾರೆ. ಚೆನ್ನಾಗಿ ಹಣ್ಣಾದ ಹಲಸಿನ ತೊಳೆಗಳ ರುಚಿಯನ್ನು ಪದಗಳಲ್ಲಿ ವರ್ಣಿಸಲು ಸಾಧ್ಯವಿಲ್ಲ.

ಬೇಸಿಗೆ ಕಾಲದಲ್ಲಿ ಸಿಗುವ ತರಕಾರಿಗಳಲ್ಲಿ ಹಲಸು ಕೂಡ ಒಂದು. ಕೆಲವರು ಇದನ್ನು ಸಸ್ಯಾಹಾರಿಗಳ ಮಾಂಸಾಹಾರ ಆಹಾರ ಎಂದೂ ಕರೆಯುವುದುಂಟು. ಹಲಸು ತರಕಾರಿಯಾಗಿ ಮತ್ತು ಹಣ್ಣಾಗಿ ಬಳಕೆ ಮಾಡಲಾಗುತ್ತದೆ. ಹಲಸಿನ ಹಣ್ಣನ್ನು ವಿವಿಧ ತರಹದ ರೆಸಿಪಿ ಮಾಡಲು ಬಳಕೆ ಮಾಡಲಾಗುತ್ತದೆ.

ಹಸಿ ಹಲಸಿನ ಕಾಯಿಯನ್ನು ತರಕಾರಿಯಾಗಿ ಸೇವನೆ ಮಾಡಲಾಗುತ್ತದೆ. ಹಲಸು ಕಾಯಿಯಿಂದ ಮತ್ತು ಹಣ್ಣಾದಾಗ ಸಿಹಿ, ರಸಭರಿತ ಮತ್ತು ಹಣ್ಣನ್ನು ವಿವಿಧ ರೀತಿಯಲ್ಲಿ ಸೇವನೆ ಮಾಡುತ್ತಾರೆ. ಅದರ ರುಚಿಯ ಹೊರತಾಗಿಯೂ ಹಲಸಿನ ಹಣ್ಣು ಮತ್ತೊಂದು ವೈಶಿಷ್ಟ್ಯವನ್ನು ಹೊಂದಿದೆ.

ಹಲಸಿನ ಬೀಜಗಳಲ್ಲಿ ಅನೇಕ ಪೋಷಕಾಂಶ ತತ್ವಗಳಿವೆ. ಇದರಿಂದಾಗಿ ಇದನ್ನು ಅಗ್ಗದ ಬಾದಾಮಿ ಎಂದೂ ಕರೆಯುತ್ತಾರೆ. ಅನೇಕರು ಹಲಸಿನ ತೊಳೆಗಳನ್ನು ತಿಂದು ಅದರಲ್ಲಿನ ಬೀಜವನ್ನು ಎಸೆಯುವುದುಂಟು. ಆದರೆ, ಹಣ್ಣಿನಲ್ಲಿ ಅಷ್ಟೇ ಅಲ್ಲ. ಈ ಹಣ್ಣಿನ ಬೀಜದಲ್ಲಿಯೂ ಬೆಟ್ಟದಷ್ಟು ಪ್ರಯೋಜನಗಳಿವೆ.

## ಯೂರಿಕ್ ಆಮ್ಲದ ಸಮಸ್ಯೆಗೆ ಮನೆಮದ್ದು



**ಮೂತ್ರಕೋಶಗಳು ತ್ಯಾಜ್ಯವಾದ ಯೂರಿಕ್ ಆಮ್ಲವನ್ನು ಶೋಧಿಸಿ ಮೂತ್ರದ ಮೂಲಕ ದೇಹದಿಂದ ಹೊರಹಾಕುತ್ತವೆ. ಕೆಲವೊಮ್ಮೆ ಯೂರಿಕ್ ಆಮ್ಲ ಹೆಚ್ಚಾಗಿ ಉತ್ಪತ್ತಿಯಾದಾಗ ಅಥವಾ ಮೂತ್ರಕೋಶಗಳು ಯೂರಿಕ್ ಆಮ್ಲವನ್ನು ಸಂಪೂರ್ಣವಾಗಿ ಸರಿಯಾಗಿ ಹೊರಹಾಕದೇ ಇದ್ದಾಗ ದೇಹದಲ್ಲಿ ಯೂರಿಕ್ ಆಮ್ಲದ ಮಟ್ಟ ಹೆಚ್ಚುತ್ತದೆ.**

ನಾವು ಸೇವಿಸುವ ಆಹಾರದಲ್ಲಿರುವ ಪ್ಯೂರಿನ್ ಎಂಬ ರಾಸಾಯನಿಕ ಜೀರ್ಣಕ್ರಿಯೆಯ ಸಮಯದಲ್ಲಿ ವಿಭಜನೆ ಹೊಂದಿದಾಗ ಯೂರಿಕ್ ಆಮ್ಲ ಉತ್ಪತ್ತಿಯಾಗುತ್ತದೆ. ಪ್ಯೂರಿನ್ನುಗಳು ಸಾಮಾನ್ಯವಾಗಿ ಕೆಲವು ಸೊಪ್ಪುಗಳು, ತರಕಾರಿಗಳು, ಸಮುದ್ರ ಆಹಾರ, ಕೆಂಪು ಮಾಂಸ ಮತ್ತು ಆಲ್ಕೋಹಾಲಿನಲ್ಲಿ ಕಂಡುಬರುತ್ತವೆ. ಮೂತ್ರಕೋಶಗಳು ತ್ಯಾಜ್ಯವಾದ ಯೂರಿಕ್ ಆಮ್ಲವನ್ನು ಶೋಧಿಸಿ ಮೂತ್ರದ ಮೂಲಕ ದೇಹದಿಂದ ಹೊರಹಾಕುತ್ತವೆ. ಕೆಲವೊಮ್ಮೆ ಯೂರಿಕ್ ಆಮ್ಲ ಹೆಚ್ಚಾಗಿ ಉತ್ಪತ್ತಿಯಾದಾಗ ಅಥವಾ ಮೂತ್ರಕೋಶಗಳು ಯೂರಿಕ್ ಆಮ್ಲವನ್ನು ಸಂಪೂರ್ಣವಾಗಿ ಸರಿಯಾಗಿ ಹೊರಹಾಕದೇ ಇದ್ದಾಗ ದೇಹದಲ್ಲಿ ಯೂರಿಕ್ ಆಮ್ಲದ ಮಟ್ಟ ಹೆಚ್ಚುತ್ತದೆ. ಇದರಿಂದ ಕೀಲು ನೋವು, ಮೂತ್ರಕೋಶದಲ್ಲಿ ಕಲ್ಲು (ಕಿಡ್ನಿ ಸ್ಟೋನ್), ಮೂತ್ರಕೋಶದ ಹಾನಿ, ಉರಿಯೂತ, ಕೀಲು ಬಿಗಿತ, ಚಯಾಪಚಯ ತೊಂದರೆಗಳಾದ ಮಧುಮೇಹ, ಬೊಜ್ಜು ಮತ್ತಿತರ ಸಮಸ್ಯೆಗಳು ಉಂಟಾಗುತ್ತವೆ. ಕೆಲವು ಮನೆಮದ್ದುಗಳಿಂದ ಈ ಸಮಸ್ಯೆಗೆ ಪರಿಹಾರ ಸಾಧ್ಯವಿದೆ. . ಸೋರೆಕಾಯಿ ತುಳಸಿ ತಂಪು ಪಾನೀಯ , ನುಗ್ಗೆಸೊಪ್ಪಿನ ಪುಡಿ–ನಿಂಬೆ ಪೇಯ

ನೆಲ್ಲಿಕಾಯಿ ಅರಿಷಿಣ ಪಾನೀಯ


ಧನಿಯಾ ಪುದೀನಾ ಡಿಟಾಕ್ಸ್ ಜಲ

## ವಿಟಮಿನ್ ಕೊರತೆ ಮತ್ತು ಬಾಯಿ ಹುಣ್ಣು

ಹೆಚ್ಚಿನ ಜನರಿಗೆ ಒಂದು ಹಂತದಲ್ಲಿ ಬಾಯಿ ಹುಣ್ಣು ಬರುತ್ತಿತ್ತು – ತಿನ್ನುವುದು ಅಥವಾ ಮಾತನಾಡುವುದು ಕಷ್ಟಕರವಾಗಿಸುವ ಸಣ್ಣ, ನೋವಿನ ಹುಣ್ಣು. ಹೆಚ್ಚಿನ ಸಮಯ, ಅದು ಒಂದು ಅಥವಾ ಎರಡು ವಾರಗಳಲ್ಲಿ ತಂತಾನೇ ಗುಣವಾಗುತ್ತದೆ ಮತ್ತು ಶೀಘ್ರದಲ್ಲೇ ಮರೆತುಬಿಡುತ್ತೇವೆ. ಆದರೆ ಸಣ್ಣ ಹುಣ್ಣು ಹೋಗದಿದ್ದರೆ ಏನು? ಅಥವಾ ಅದು ಮತ್ತೆಮತ್ತೆ ಬರುತ್ತಲೇ ಇದ್ದರೆ ಏನು? ಇದಕ್ಕೆ ಬೇರೆ ಕಾರಣಗಳಿದೆಯೇ? ನಿಮ್ಮ ದೇಹವು ನೀಡುತ್ತಿರುವ ಅಪಾಯದ ಸೂಚನೆಯೇ?

ಬಾಯಿ ಹುಣ್ಣುಗಳು ಚಿಕ್ಕ ವಿಷಯವಾಗಿ ಕಾಣಿಸಬಹುದು, ಆದರೆ ಅವು ವಿಟಮಿನ್ ಕೊರತೆಯಿಂದ ಹಿಡಿದು ಬಾಯಿಯ ಕ್ಯಾನ್ಸರ್‌ವರೆಗಿನ ಹೆಚ್ಚು ಗಂಭೀರ ಆರೋಗ್ಯ ಸಮಸ್ಯೆಗಳ ಆರಂಭಿಕ ಸೂಚಕಗಳಾಗಿರಬಹುದು. ನಿಮ್ಮ ಬಾಯಿ ನಿಮಗೆ ಹೇಳುವುದನ್ನು ಕೇಳುವುದು ನೀವು ಅರಿತುಕೊಳ್ಳುವುದಕ್ಕಿಂತ ಹೆಚ್ಚು ಮುಖ್ಯವಾಗಬಹುದು.

ಎಲ್ಲಾ ಹುಣ್ಣುಗಳು ಒಂದೇ ಆಗಿರುವುದಿಲ್ಲ



ಬಾಯಿ ಹುಣ್ಣು ಸಾಮಾನ್ಯವಾಗಿ ದುಂಡಗಿನ ಅಥವಾ ಅಂಡಾಕಾರದ ಆಕಾರದಲ್ಲಿರುತ್ತದೆ, ಬಿಳಿ ಅಥವಾ ಹಳದಿ ಮಧ್ಯಭಾಗ ಮತ್ತು ಕೆಂಪು ಅಂಚನ್ನು ಹೊಂದಿರುತ್ತದೆ. ಅವು ಸಾಮಾನ್ಯವಾಗಿ ಕೆನ್ನೆಯ ಒಳಗೆ, ತುಟಿಗಳ ಮೇಲೆ ಅಥವಾ ನಾಲಿಗೆಯ ಮೇಲೆ ಬೆಳೆಯುತ್ತವೆ. ಇವುಗಳು ಆಗಾಗ್ಗೆ ಸಣ್ಣ ಗಾಯಗಳು (ನಿಮ್ಮ ಕೆನ್ನೆಯನ್ನು ಕಚ್ಚುವುದು), ಒತ್ತಡ ಅಥವಾ ಬಿಸಿ ಊಟಗಳಿಂದ ಉಂಟಾಗುತ್ತವೆ. ಅವು ಸಾಮಾನ್ಯವಾಗಿ 7 ರಿಂದ 14 ದಿನಗಳ ನಡುವೆ ಗುಣವಾಗುತ್ತವೆ.

ಆದಾಗ್ಯೂ, ಹುಣ್ಣುಗಳು ಆಗಾಗ್ಗೆ ಬರುತ್ತಿದ್ದರೆ, ವಿಶೇಷವಾಗಿ ದೊಡ್ಡದಾಗಿದ್ದರೆ ಅಥವಾ ಎರಡು ವಾರಗಳಿಗಿಂತ ಹೆಚ್ಚು ಕಾಲ ಇದ್ದರೆ, ಹೆಚ್ಚಿನ ತಪಾಸಣೆ ನಡೆಸುವುದು ಅತ್ಯಗತ್ಯ. ಇವು ಪೌಷ್ಟಿಕಾಂಶದ ಕೊರತೆ, ದೀರ್ಘಕಾಲದ ಉರಿಯೂತ ಅಥವಾ ಹೆಚ್ಚು ಗಂಭೀರ ಸಂದರ್ಭಗಳಲ್ಲಿ, ಮಾರಕತೆಯ ಆರಂಭಿಕ ಚಿಹ್ನೆಗಳ ಪರಿಣಾಮವಾಗಿರಬಹುದು.

ಇದು ವಿಟಮಿನ್ ಕೊರತೆಯೇ?

ಬಹಳಷ್ಟು ದೀರ್ಘಕಾಲದ ಬಾಯಿ ಹುಣ್ಣುಗಳು ಪೌಷ್ಟಿಕಾಂಶದ ಕೊರತೆಗೆ ಸಂಬಂಧಿಸಿವೆ. ಹೆಚ್ಚು ಪ್ರಚಲಿತ ಕಾರಣಗಳು ಇಲ್ಲಿವೆ:

ವಿಟಮಿನ್ ಬಿ 12 ಜೀವಕೋಶ ಪುನರುತ್ಪಾದನೆ ಮತ್ತು ನರಮಂಡಲದ ಆರೋಗ್ಯವನ್ನು ಉತ್ತೇಜಿಸುತ್ತದೆ. ಹುಣ್ಣುಗಳು, ನಾಲಿಗೆಯ ಮೇಲೆ ಸುಡುವ ಭಾವನೆ ಮತ್ತು ಆಯಾಸ ಎಲ್ಲವೂ ಈ ವಿಟಮಿನ್ ಕೊರತೆಯಿಂದ ಉಂಟಾಗಬಹುದು.

ಫೋಲಿಕ್ ಆಮ್ಲ (ವಿಟಮಿನ್ ಬಿ 9) ಅಂಗಾಂಶ ಬೆಳವಣಿಗೆ ಮತ್ತು ಜೀವಕೋಶದ ಕಾರ್ಯವನ್ನು ಉತ್ತೇಜಿಸುತ್ತದೆ. ಇದರ ಕೊರತೆಯು ತೀವ್ರವಾದ ಬಾಯಿಯ ಹುಣ್ಣುಗಳಿಗೆ ಕಾರಣವಾಗಬಹುದು.

## ರಾಜ್ಯದಲ್ಲಿ ಹೃದಯಾಘಾತದಿಂದ ಸಾವನ್ನಪ್ಪುವವರ ಸಂಖ್ಯೆ ಮೂರು ಪಟ್ಟು ಹೆಚ್ಚಳ!

**ಬೆಂಗಳೂರು:** ಕರ್ನಾಟಕದ ಡಾ. ಪುನೀತ್ ರಾಜ್‌ಕುಮಾರ್ ಹೃದಯ ಜ್ಯೋತಿ ಯೋಜನೆಯಡಿಯಲ್ಲಿ ದಾಖಲಾದ ಹೃದಯಾಘಾತಕ್ಕೆ ಸಂಬಂಧಿಸಿದ ಸಾವುಗಳು ಬಹುತೇಕ ಮೂರು ಪಟ್ಟು ಹೆಚ್ಚಾಗಿದ್ದು, 2023–24ರಲ್ಲಿ 229 ರಿಂದ 2024–25ರಲ್ಲಿ 608 ಕ್ಕೆ ಏರಿಕೆಯಾಗಿದೆ ಎಂದು ರಾಜ್ಯ ಆರೋಗ್ಯ ಇಲಾಖೆಯ ಅಂಕಿಅಂಶಗಳು ತಿಳಿಸಿವೆ. ಕಳೆದ ಎರಡು ವರ್ಷಗಳಿಂದ ನಿರ್ಣಾಯಕ ಇಸಿಜಿ ಸ್ಕ್ರೀನಿಂಗ್‌ಗಳ ಸಂಖ್ಯೆಯೂ ಸುಮಾರು ಮೂರು ಪಟ್ಟು ಹೆಚ್ಚಾಗಿದೆ.

2,489 ರಿಂದ 6,767 ಕ್ಕೆ ಏರಿಕೆಯಾಗಿದೆ.ಪ್ರಸ್ತುತ ನಡೆಯುತ್ತಿರುವ ಮುಂಗಾರು ಅಧಿವೇಶನದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಈ ಆಘಾತಕಾರಿ ಅಂಕಿಅಂಶಗಳನ್ನು ಪ್ರಶ್ನೆಯೊಂದಕ್ಕೆ ಉತ್ತರವಾಗಿ ನೀಡಿದ್ದಾರೆ.ರಾಜ್ಯದಲ್ಲಿ ವರದಿಯಾಗದ ಒಟ್ಟು ಹೃದಯಾಘಾತಗಳ ಸಂಖ್ಯೆ ಅಥವಾ ಡಾ. ಪುನೀತ್ ರಾಜ್‌ಕುಮಾರ್ ಯೋಜನೆಯ ಹೊರಗೆ ಸಂಬಂಧಿಸಿದ ಸಾವುಗಳ ಬಗ್ಗೆ ಇಲಾಖೆಗೆ

ಯಾವುದೇ ಮಾಹಿತಿ ಇಲ್ಲ. ಏಕೆಂದರೆ ಇಲ್ಲಿಯವರೆಗೆ ಹೃದಯಾಘಾತವನ್ನು "ಅಧಿಸೂಚಿತ" ಕಾಯಿಲೆ ಎಂದು ಪರಿಗಣಿಸಲಾಗಿಲ್ಲ. ಈ ವರ್ಷ ಜುಲೈನಲ್ಲಿ ಮಾತ್ರ ಆರೋಗ್ಯ ಸಚಿವರು ಹೃದಯಾಘಾತ "ಅಧಿಸೂಚಿತ" ಕಾಯಿಲೆ ಎಂದು ಘೋಷಿಸಿದ್ದರು.ರಾಜ್ಯದಲ್ಲಿ ಹೃದಯಾಘಾತ ಪ್ರಕರಣಗಳು ಹೆಚ್ಚಳವಾದ ನಂತರ ಮತ್ತು 45 ವರ್ಷಕ್ಕಿಂತ ಕಡಿಮೆ ವಯಸ್ಸಿನ ವ್ಯಕ್ತಿಗಳಲ್ಲಿ ಹಠಾತ್ ಹೃದಯ ಸಂಬಂಧಿ ಘಟನೆಗಳನ್ನು ಪರಿಶೀಲಿಸಲು ಸಮಿತಿ ರಚಿಸಿದ ನಂತರ ಸಚಿವರು ಈ ಘೋಷಣೆ ಮಾಡಿದ್ದರು. ಆದಾಗ್ಯೂ, ಈ ಕುರಿತು ಸರ್ಕಾರಿ ಆದೇಶ ಇನ್ನೂ ಹೊರಡಿಸಲಾಗಿಲ್ಲ. ವರದಿಯಾದ ಹೃದಯಾಘಾತ ಪ್ರಕರಣಗಳಲ್ಲಿ ಶೇ. 75 ಕ್ಕಿಂತ ಹೆಚ್ಚು ಹೃದಯಾಘಾತದ ಅಪಾಯಕಾರಿ ಅಂಶಗಳನ್ನು ಹೊಂದಿರುವ ವ್ಯಕ್ತಿಗಳಾಗಿದ್ದು, ಹೆಚ್ಚಿನ ಕೊಡುಗೆ ನೀಡುವ ಅಂಶಗಳಲ್ಲಿ ಬೊಜ್ಜು, ಅತಿಯಾದ ಮದ್ಯಪಾನ, ಧೂಮಪಾನ ಮತ್ತು ಅಧಿಕ ರಕ್ತದೊತ್ತಡ ಸೇರಿವೆ ಎಂದು ಆರೋಗ್ಯ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

## ಪ್ರಿವೆಡ್ಡಿಂಗ್ ಫೋಟೋಶೂಟ್ ಮುಗಿಸಿ ಬರುತ್ತಿದ್ದ ಜೋಡಿ ಅಪಘಾತದಲ್ಲಿ ಸಾವು

**ಗಂಗಾವತಿ:** ಕೊಪ್ಪಳದಲ್ಲಿ ಹೃದಯ ವಿದ್ರಾವಕ ಘಟನೆಯೊಂದು ನಡೆದಿದ್ದು, ಇನ್ನೆರಡು ವಾರದಲ್ಲಿ ಹಸೆಮಣೆ ಏರಿ ಹೊಸ ಜೀವನಕ್ಕೆ ಕಾಲಿಡಬೇಕಿದ್ದ ಜೋಡಿಯೊಂದು ಪ್ರಿವೆಡ್ಡಿಂಗ್ ಫೋಟೋಶೂಟಿಂಗ್‌ಗೆ ಹೋಗಿ ಬರುವಾಗ ರಸ್ತೆ ಅಪಘಾತದಲ್ಲಿ ಮೃತಪಟ್ಟಿದೆ. ಈ ದುರ್ಘಟನೆ ಭಾನುವಾರ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಬೆಣಕಲ್ ಬಳಿ ನಡೆದಿದೆ. ಕವಿತಾ ಹಾಗೂ ಕರಿಯಪ್ಪ ಮೃತ ದುರ್ದೈವಿಗಳು.

ಕರಿಯಪ್ಪ ಮಡಿವಾಳ್ ಹನುಮನಹಟ್ಟಿ (26) ಹಾಗೂ ಕವಿತಾ ಪವಾಡೆಪ್ಪ ಮಡಿವಾಳ (19) ಮೃತ ಜೋಡಿ. 5 ತಿಂಗಳ ಹಿಂದೆ ನಿಶ್ಚಿತಾರ್ಥ ಮಾಡಿಕೊಂಡಿದ್ದರು. ಡಿ.21ರಂದು ಮದುವೆ ನಿಶ್ಚಯವಾಗಿತ್ತು. ಅದರ ಪ್ರಯುಕ್ತ ಪ್ರೀವೆಡ್ಡಿಂಗ್ ಶೂಟಿಂಗ್‌ಗಾಗಿ ಹೊಸಪೇಟೆಯ ಪಂಪಾವನ, ಮುನಿರಾಬಾದಿನ ಜಲಾಶಯದ ಕಡೆ ತೆರಳಿ ಮರಳುತ್ತಿದ್ದರು.

ಕವಿತಾರನ್ನು ತಮ್ಮ ಗಂಗಾವತಿಯ ಮನೆಗೆ ಬಿಟ್ಟು ಹೋಗಲು ಬೈಕ್‌ನಲ್ಲಿ ಬರುತ್ತಿದ್ದರು. ಈ ವೇಳೆ ಕ್ವಾರಿಯ ಲಾರಿಯೊಂದು ಬೈಕ್ ಮೇಲೆ ಹರಿದಿದೆ. ಪರಿಣಾಮ ಕವಿತಾ ಸ್ಥಳದಲ್ಲಿಯೇ ಅಸುನೀಗಿದ್ದಾರೆ. ಕರಿಯಪ್ಪ ತೀವ್ರವಾಗಿ ಗಾಯಗೊಂಡು ಗಂಗಾವತಿ ಆಸ್ಪತ್ರೆಯಲ್ಲಿ ಮೃತಪಟ್ಟಿದಾರೆ.

ಜಮಖಂಡಿಯಲ್ಲಿ ಭೀಕರ ರಸ್ತೆ ಅಪಘಾತ; ನಿಂತಿದ್ದ ಟ್ರ್ಯಾಕ್ಟರ್‌ಗೆ ಕಾರು ಡಿಕ್ಕಿ ಹೊಡೆದು ನಾಲ್ವರು ಸಾವು

ಕಾರು ಪಲ್ಟಿಯಾಗಿ ಮೂವರ ಸಾವು

ಮಂಡ್ಯ: ಜಿಲ್ಲೆಯ ನಾಗಮಂಗಲ ತಾಲೂಕಿನ ನಾಗತಿಹಳ್ಳಿಯಲ್ಲಿ ಭೀಕರ ಕಾರು ಅಪಘಾತ ನಡೆದಿದ್ದು, ಮೂವರು ದುರ್ಮರಣ ಹೊಂದಿದ್ದಾರೆ. ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಕಾರು ಡಿಕ್ಕಿ ಹೊಡೆದು ಪಲ್ಟಿಹೊಡೆದಿಂದ ದುರಂತ ಸಂಭವಿಸಿದೆ. ಚಿಕ್ಕಮಗಳೂರು ಮೂಲದ ಚನ್ನೆಗೌಡ (60), ಸರೋಜಮ್ಮ (55), ಜಯಮ್ಮ (70) ಮೃತ ದುರ್ದೈವಿಗಳು.

ಬೆಂಗಳೂರಿನಿಂದ ಚಿಕ್ಕಮಗಳೂರಿಗೆ ಕಾರು ತೆರಳುತ್ತಿದ್ದ ವೇಳೆ ನಿಯಂತ್ರಣ ತಪ್ಪಿ ತಿರುವಿನಲ್ಲಿ ಡಿವೈಡರ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ. ಅಪಘಾತದಲ್ಲಿ ಕಾರಿನಲ್ಲಿದ್ದ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತದೇಹಗಳನ್ನು ಆದಿಚುಂಚನಗಿರಿ ಆಸ್ಪತ್ರೆಗೆ ರವಾನಿಸಲಾಗಿದೆ. ಘಟನೆ ಸಂಬಂಧ ಬೆಳ್ಳೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹಳೆ ವೈಷಮ್ಯ: ಮಾರಕಾಸ್ತ್ರಗಳಿಂದ ಹೊಡೆದು ವ್ಯಕ್ತಿ ಕೊಲೆ



**ಕಲಬುರಗಿ:** ಹಳೆ ವೈಷಮ್ಯದಿಂದ ವ್ಯಕ್ತಿಯೋರ್ವರನ್ನು ಮಾರಕಾಸ್ತ್ರಗಳಿಂದ ಹೊಡೆದು ಕೊಲೆ ಮಾಡಿರುವ ಘಟನೆ ಕಮಲಾಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಶನಿವಾರ ರಾತ್ರಿ ನಡೆದಿದೆ.

ಕಮಲಾಪುರ ಪಟ್ಟಣದ ನಿವಾಸಿ ಮುಹಮ್ಮದ್ ಹನೀಫ್ (65) ಕೊಲೆಯಾದವರು.

ಅದೇ ಗ್ರಾಮದ ರಿಝ್ವಾನ್ (25) ಎಂಬಾತ ಕೊಲೆ ಕೃತ್ಯ ನಡೆಸಿರುವುದಾಗಿ ತಿಳಿದುಬಂದಿದೆ.

ಈ ಹಿಂದೆ ರಿಝ್ವಾನ್ ಹಾಗೂ ಮೃತ ಹನೀಫ್ ನಡುವೆ ಜಗಳವಾಗಿತ್ತು. ಇದೇ ಕಾರಣಕ್ಕೆ ಹಳೆ ವೈಷಮ್ಯ ಇಟ್ಟು–ಕೊಂಡು ಕಮಲಾಪುರದ ಜೇವಣಗಿ ರಸ್ತೆಯ ಕೆಇಬಿ ಕಚೇರಿ ಬಳಿ ಹನೀಫ್ ಅವರನ್ನು ರಿಝ್ವಾನ್ ಕೊಲೆ ಮಾಡಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಸ್ಥಳೀಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಈ ಬಗ್ಗೆ ಕಮಲಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## 7 ಜನ ಕೊಲೆ ಆರೋಪಿತರಿಗೆ ಜೀವಾವಧಿ ಶಿಕ್ಷೆ ಹಾಗೂ ತಲಾ 50,000 ರೂ. ದಂಡ



**ವಿಜಯಪುರ:** ಜಿಲ್ಲೆಯ ಸಿಂದಗಿ ತಾಲೂಕಿನ ಕೋರವಾರದಲ್ಲಿ ನಡೆದ ಭೀಮನಗೌಡ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಏಳು ಜನ ಆರೋಪಿತರಿಗೆ ಜೀವಾವದಧಿ ಶಿಕ್ಷೆ ಹಾಗೂ ತಲಾ ಐವತ್ತು ಸಾವಿರ ರೂಪಾಯಿ ದಂಡ ವಿಧಿಸಿ 4ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತೀರ್ಪು ನೀಡಿದೆ.

ಮನೆ ಮುಂದಿನ ಖುಲ್ಲಾ ಜಾಗೆ ಸಲುವಾಗಿ ದಾಯಾದಿಗಳ ಮಧ್ಯೆ ಮೇಲಿಂದ ಮೇಲೆ ಕಲಹ ಉಂಟಾಗುತ್ತಿತ್ತು. 9–10–2013ರಂದು ಈ ಸಂಬಂಧ ಕಲಹ ವಿಕೋಪಕ್ಕೆ ಹೋಗಿ ಭೀಮನಗೌಡ ನಿಂಗನಗೌಡ ಪಾಟೀಲ ಹಾಗೂ ಆತನ ಸಹೋದರರಾದ ಫಿರ್ಯಾದಿ ಶಂಕರಗೌಡ, ನಿಂಗನಗೌಡ ಪಾಟೀಲ, ಶರಣಗೌಡ, ನಿಂಗನಗೌಡ ಪಾಟೀಲ, ಗುರುಪಾದಪ್ಪಗೌಡ ನಿಂಗನಗೌಡ ಪಾಟೀಲ ಇವರೆಲ್ಲರಿಗೂ ಮನೆಯ ಪಕ್ಕದಲ್ಲಿ ವಾಸ ಮಾಡುತ್ತಿದ್ದ 2ನೇ ಅಣ್ಣ ತಮ್ಮಂದಿರರಾದ ಮತ್ತು ಈ ಪ್ರಕರಣದ ಆರೋಪಿತರಾದ ರಾಜಶೇಖರ ಬಾಪುಗೌಡ ಪಾಟೀಲ ಹಾಗೂ ಆತನ ಮಕ್ಕಳಾದ ವೀರನಗೌಡ ರಾಜಶೇಖರಗೌಡ ಪಾಟೀಲ, ಆನಂದಗೌಡ ರಾಜಶೇಖರಗೌಡ ಪಾಟೀಲ ಇವರುಗಳು ಸದರಿ ಖುಲ್ಲಾ ಜಾಗಾ ತಮಗೆ ಸಂಬಂಧಪಟ್ಟಿದ್ದೆಂದು ಆಗಾಗ್ಗೆ ಜಗಳ ತೆಗೆಯುತ್ತಿದ್ದರು.

ಸದರಿ ಖುಲ್ಲಾ ಜಾಗದಲ್ಲಿ ಗುರುಪಾದಪ್ಪಗೌಡ ಮನೆ ಕಟ್ಟುವ ಸಲುವಾಗಿ ಕಲ್ಲು ಮಣ್ಣು ಹಾಕಿದ್ದರು. ದಿನಾಂಕ:09–10–2013 ಆರೋಪಿತರಾದ ರಾಜಶೇಖರಗೌಡ ಪಾಟೀಲ ಹಾಗೂ ಆತನ ಮಕ್ಕಳಾದ ವೀರನಗೌಡ ಹಾಗೂ ಆನಂದಗೌಡ ಇವರೆಲ್ಲರೂ ಕೂಡಿಕೊಂಡು ಫಿರ್ಯಾದಿಯ ಮನೆಯ ಹತ್ತಿರ ಬಂದು ಖುಲ್ಲಾ ಜಾಗೆ ತಮಗೆ ಸೇರಿದ್ದು ಕಲ್ಲು ಮಣ್ಣು ತೆಗೆಯಿರಿ ಇಲ್ಲ ಅಂದರೆ ಪರಿಣಾಮ ನೆಟ್ಟಗಾಗುವುದಿಲ್ಲವೆಂದು ಹೆದರಿಸಿ ಜೀವದ ಧಮಕಿ ಹಾಕಿ ಹೋಗಿದ್ದರು. ಪುನ: ಅದೇ ದಿನ ಸಾಯಂಕಾಲ 7–15 ಗಂಟೆಯ ಸುಮಾರಿಗೆ ಸದರಿ ಆರೋಪಿತರು ತಮ್ಮೊಂದಿಗೆ ಹುಣಸಗಿಯಿಂದ ಚಂದ್ರಶೇಖರ ಬಸಲಿಂಗಪ್ಪ ಕುಂಬಾರ, ಶರಣಬಸು ರುದ್ರಪ್ಪ ಸೇವಟಿ, ಮಲ್ಲಿಕಾರ್ಜುನ ಸಂಗಪ್ಪ ಅಂಗಡಿ ಹಾಗೂ

## ಜಿನ್ನಾಗೆ ಮಣಿದ ನೆಹರು ಭಾರತೀಯರಿಗೆ ಮೋಸ ಮಾಡಿದರು"; ಸಂಸತ್‌ನಲ್ಲಿ ಮೋದಿ ಹೀಗೆ ಹೇಳಿದ್ಯಾಕೆ?

**ನವದೆಹಲಿ:** ವಂದೇ ಮಾತರಂ ಗೀತೆ–ಯ 150ನೇ ವಾರ್ಷಿಕೋತ್ಸವದ ಕುರಿತು ಲೋಕಸಭೆಯಲ್ಲಿ ನಡೆದ ಚರ್ಚೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಭಾರತದ ರಾಷ್ಟ್ರಗೀತೆಯನ್ನು 50 ವರ್ಷಗಳ ಹಿಂದೆ ವಿರೋಧ ಪಕ್ಷದ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಹೇರಿದ ತುರ್ತು ಪರಿಸ್ಥಿತಿಗೆ ಜೋಡಿಸುವ ಮೂಲಕ ಕಾಂಗ್ರೆಸ್‌ಅನ್ನು ತರಾಟೆಗೆ ತೆಗೆದು–ಕೊಂಡರು. ವಂದೇ ಮಾತರಂ ಮುಸ್ಲಿಮರನ್ನು ಕೆರಳಿಸಬಹುದು" ಎಂಬ ಕಾರಣಕ್ಕಾಗಿ, ಜವಾಹರಲಾಲ್ ನೆಹರೂ ಅವರು ಮುಹಮ್ಮದ್ ಅಲಿ ಜಿನ್ನಾ ಅವರನ್ನು ಅನುಸರಿಸಿ 'ವಂದೇ ಮಾತರಂ' ಅನ್ನು ವಿರೋಧಿಸಿದ್ದರು ಮೋದಿ ಆರೋಪಿಸಿದರು. ವಂದೇ ಮಾತರಂ ತನ್ನ 100 ನೇ ವಾರ್ಷಿಕೋತ್ಸವವನ್ನು ಆಚರಿಸಿದಾಗ,



ದೇಶವು ತುರ್ತು ಪರಿಸ್ಥಿತಿಯಲ್ಲಿ ಸಿಲುಕಿ–ಕೊಂಡಿತ್ತು. ಆ ಸಮಯದಲ್ಲಿ ಸಂವಿಧಾನದ ಕತ್ತು ಹಿಸುಕಲಾಗಿತ್ತು. ಈಗ, 150 ವರ್ಷ ತುಂಬಿದ ನಂತರ, 1947 ರಲ್ಲಿ ನಮಗೆ ಸ್ವಾತಂತ್ರ್ಯ ತಂದುಕೊಟ್ಟ 'ವಂದೇ ಮಾತರಂ' ನ ವೈಭವವನ್ನು ಪುನಃಸ್ಥಾಪಿಸಲು ಇದು ಒಂದು ಉತ್ತಮ ಅವಕಾಶ" ಎಂದು ಪ್ರಧಾನಿ ಹೇಳಿದರು, 1875 ರ ನವೆಂಬರ್‌ನಲ್ಲಿ ಬಂಕಿಮ್ ಚಂದ್ರ ಚಟರ್ಜಿ ಬರೆದ ಹಾಡನ್ನು ಶ್ಲಾಘಿಸಿದರು ಮತ್ತು ಅದು ಶೀಘ್ರದಲ್ಲೇ ಸ್ವಾತಂತ್ರ್ಯ ಹೋರಾಟಗಾರರಿಗೆ ಒಂದು ಕೂಗಾಗಿ ಮಾರ್ಪಟ್ಟಿತು.

ನಾವು ಇತ್ತೀಚೆಗೆ ನಮ್ಮ ಸಂವಿಧಾನದ 75 ವರ್ಷಗಳನ್ನು ಆಚರಿಸಿದ್ದೇವೆ. ದೇಶವು ಸರ್ದಾರ್ ವಲ್ಲಭ ಪಟೇಲ್ ಮತ್ತು ಬಿರ್ಸಾ ಮುಂಡಾ ಅವರ 150 ನೇ ಜನ್ಮ ವಾರ್ಷಿಕೋತ್ಸವವನ್ನು ಆಚರಿಸಿದೆ.

ನಾವು ಗುರು ತೇಜ್ ಬಹದ್ದೂರ್ ಜಿ ಅವರ 350 ನೇ ಹುತಾತ್ಮ ದಿನವನ್ನು ಸಹ ಆಚರಿಸುತ್ತಿದ್ದೇವೆ. ಈಗ ನಾವು ವಂದೇ ಮಾತರಂನ 150 ವರ್ಷಗಳನ್ನು ಆಚರಿಸುತ್ತಿದ್ದೇವೆ ಎಂದು ಅವರು ಹೇಳಿದರು. ಬಂಕಿಮ್ ಚಂದ್ರ ಚಟರ್ಜಿಯನ್ನು ನಿರ್ಲಕ್ಷಿಸಿದ ಬಂಗಾಳ ಸರ್ಕಾರ: ವಂದೇ ಮಾತರಂ ಚರ್ಚೆಯ ನಡುವೆ ಮರಿಮೊಮ್ಮಗ ಹೇಳಿದ್ದೇನು?

1937 ರಲ್ಲಿ ವಂದೇ ಮಾತರಂನ ಹಲವಾರು ಚರಣಗಳನ್ನು ಕಾಂಗ್ರೆಸ್ ಕೈಬಿಟ್ಟಿದೆ ಎಂದು ಮೋದಿ ಆರೋಪಿಸಿದರು.

ಪಕ್ಷದ ಪ್ರಕಾರ ಈ ಕ್ರಮ ಕೈಗೊಂಡಿರುವುದು ವಿಭಜನೆಯಿಂದಲ್ಲ, ಎಲ್ಲರೂ ಸೇರಿ ಒಮ್ಮತದಿಂದ ತೀರ್ಮಾನಿಸಲಾಗಿದೆ ಹಾಗೂ ದೇಶದ ಹಿತಕ್ಕಾಗಿ ಮಾಡಲಾಗಿದೆ ಎಂದಿದೆ. ಕಾಂಗ್ರೆಸ್ ಈ ಹಾಡನ್ನು ಮೂಲೆಗುಂಪು ಮಾಡಲು ಹೊರಟಿದೆ ಎಂದು ಬಿಜೆಪಿ ದೂರಿದ್ದು, ಗಂಭೀರ ಸಂಗತಿಗಳು ಮತ್ತು ಬಹಿರಂಗಪಡಿಸುವಿಕೆಗಳನ್ನು ಡಿಬೇಟ್ ಸಮಯದಲ್ಲಿ ಪ್ರಸ್ತುತಪಡಿಸುವುದಾಗಿ ತಿಳಿಸಿದೆ.

## ಡಿ.9 ರಿಂದ ಲಾರಿ ಮಾಲೀಕರ ಅನಿರ್ದಿಷ್ಟ ಮುಷ್ಕರ

**ದಾವಣಗೆರೆ:** ಕೇಂದ್ರ ಸರ್ಕಾರದಿಂದ ಲಾರಿಗಳ ಎಫ್.ಸಿ ಮತ್ತು ಆರ್.ಆರ್.ಸಿ ಗಳ ಶುಲ್ಕ 1400 ಇದ್ದ ಶುಲ್ಕವನ್ನು 28,000 ರವರೆಗೆ ವರೆಗೆ ಹೆಚ್ಚಿಸಿರುವುದನ್ನು ಖಂಡಿಸಿ, ದಾವಣಗೆರೆ ಲೋಕಲ್ ಮತ್ತು ಗೂಡ್ಸ್ ಶೆಡ್ ಲಾರಿ ಮಾಲೀಕರ ಸಂಘದಿಂದ ಡಿ.9 ರಿಂದ ಲಾರಿಗಳ ಸರಕು ಸಾಗಣೆಯನ್ನು ನಿಲ್ಲಿಸಿ, ಪ್ರತಿಭಟನೆ ಮತ್ತು ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ.


ಕೇಂದ್ರ ಸರ್ಕಾರ ಲಾರಿಗಳ ಎಫ್.ಸಿ ಮತ್ತು ಆರ್.ಆರ್.ಸಿ ಗಳ ಶುಲ್ಕವನ್ನು ಒಮ್ಮೆಲೆ ಹೆಚ್ಚಿಸಿದ್ದು, ಇದರಿಂದ ತೊಂದರೆ ಉಂಟಾಗಿದೆ. ನಮ್ಮಿಂದ ಅಷ್ಟು ಮೊತ್ತ ಭರಿಸಲು ಸಾಧ್ಯವಾಗುವುದಿಲ್ಲ. ರಾಷ್ಟ್ರಮಟ್ಟದ ಸರಕು ಸಾಗಣೆಗಳಿಗೆ ಸಂಬಂದಪಟ್ಟಂತೆ ಇಡೀ ದೇಶಾದ್ಯಂತ ಇರುವ ಲಾರಿ ಮಾಲೀಕರು ಹಗಲು ರಾತ್ರಿ ಎನ್ನದೇ ಹೆಚ್ಚಿನ ಶ್ರಮ ವಹಿಸಿ ದುಡಿಯುತ್ತಿದ್ದಾರೆ. ಆದ್ದರಿಂದ ಕೇಂದ್ರ ಸರ್ಕಾರದಿಂದ ಲಾರಿಗಳ ಎಫ್.ಸಿ ಮತ್ತು ಆರ್.ಆರ್.ಸಿ ಗಳ ಶುಲ್ಕ ಹೆಚ್ಚಿಸಿರುವುದನ್ನು ರದ್ದುಗೊಳಿಸಿ ಈ ಹಿಂದೆ ಇದ್ದ ಶುಲ್ಕವನ್ನು ಮುಂದುವರೆಸಬೇಕೆಂದು ಸಂಘದ ಅಧ್ಯಕ್ಷ ಎಂ.ದಾದಾಪೀರ್ ಮನವಿ ಮಾಡಿದ್ದಾರೆ.

## ಕಾಯ ಕಣ್ಮರೆಯಾದರೂ ಮಾಡಿದ ಕಾರ್ಯಗಳು ಶಾಶ್ವತ : ರಂಭಾಪುರಿ ಶ್ರೀ

**ಹರಪನಹಳ್ಳಿ:** ಬಹು ಜನ್ಮಗಳ ಪುಣ್ಯದ ಫಲ ಈ ಮಾನವ ಜನ್ಮ. ಹುಟ್ಟು ಎಷ್ಟು ಸಹಜವೋ ಮೃತ್ಯು ಅಷ್ಟೇ ನಿಶ್ಚಿತ. ಹುಟ್ಟು ಸಾವುಗಳ ಮಧ್ಯದ ಬದುಕನ್ನು ಸಾರ್ಥಕಪಡಿಸಿಕೊಳ್ಳಬೇಕಾದುದು ಅವರವರ ಜವಾಬ್ದಾರಿ. ಕಾಯ ಕಣ್ಮರೆಯಾದರೂ ಮಾಡಿದ ಕಾರ್ಯಗಳು ಯಾವಾಗಲೂ ಶಾಶ್ವತವಾಗಿ ಉಳಿಯುತ್ತವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಇಂದು ತೆಗ್ಗಿನಮಠ ಸಂಸ್ಥಾನದ ಲಿಂ.ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳವರ 11ನೇ ವರ್ಷದ ಪುಣ್ಯಸ್ಮರಣೋತ್ಸವ ಹಾಗೂ ತೆಗ್ಗಿನಮಠ ಸಂಸ್ಥಾನದ ಇಂದಿನ ಪಟ್ಟಾಧ್ಯಕ್ಷರಾದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳವರ ಪಟ್ಟಾಧಿಕಾರದ ದಶಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೇಹವಿದು ದೇವನಿರುವ ದೇಗುಲ. ಸತ್ಯ ಮತ್ತು ಶಾಂತಿಗಳಂಥ ದೈವೀ ಗುಣಗಳ ಹಣ್ಣು ಹಂಪಲಗಳನ್ನು ಬೆಳೆಯಬೇಕು. ಅಸುರಿ ಗುಣಗಳ ಕಸ ಕಡ್ಡಿ ಕಿತ್ತುಹಾಕಿ ಮುಳ್ಳು ಕಲ್ಲುಗಳನ್ನು ಸ್ವಚ್ಛಗೊಳಿಸಿ ಶಿವಜ್ಞಾನದ ಬೀಜ ಬಿತ್ತುವಾತನೇ ನಿಜವಾದ ಗುರು. ಬಾಳಿನ ಉನ್ನತಿ ಅವನತಿಗೆ ಮನುಷ್ಯನ ಮನಸ್ಸು ಮೂಲ.



ಸುಖ ಬಯಸುವುದು ಮನುಷ್ಯನ ಸಹಜ ಗುಣ. ಆದರೆ ಸುಖದ ಪ್ರಾಪ್ತಿಗಾಗಿ ಆಚರಿಸಬೇಕಾದ ಧರ್ಮಾಚರಣೆಯನ್ನು ಮನುಷ್ಯ ಮಾಡುವುದಿಲ್ಲ. ಲಿಂ.ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳವರ ಜೀವನದ ಸಿದ್ಧಿ ಸಾಧನೆಗಳು ಸಾಧಕರ ಬಾಳಿಗೆ ಬೆಳಕು ತೋರಿ ಮುನ್ನಡೆಸುತ್ತವೆ. ಧಾರ್ಮಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಅದ್ಭುತವಾದ ಕಾರ್ಯ ಮಾಡಿದ ಕೀರ್ತಿ ಅವರದು. ಹರಪುರದ ವರಪುರಷರಾಗಿ ಬಾಳಿ ಎಂಬ ಲಿಂ. ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ವಾಣಿಯನ್ನು ಸಾಕಾರಗೊಳಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಅವರ ಅಗಲಿಕೆಯಿಂದ ತೆರವಾದ ಸ್ಥಾನವನ್ನು ಇಂದಿನ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ತುಂಬಿ ಪಾದರಸದಂತೆ ಕ್ರಿಯಾಶೀಲರಾಗಿ ಧಾರ್ಮಿಕ ಮತ್ತು ಶೈಕ್ಷಣಿಕ ಕ್ಷೇತ್ರಗಳಲ್ಲಿ ಶ್ರಮ ವಹಿಸಿ ಕಾರ್ಯ ಮಾಡುತ್ತಿರುವುದು ಸಂತೋಷದ ಸಂಗತಿ. ಶ್ರೀಗಳವರ ಶ್ರಮ ಸಾಧನೆ ಅಪೂರ್ವವಾದುದೆಂದು ಹರುಷ ವ್ಯಕ್ತಪಡಿಸಿ ರೇಶ್ಮೆ ಮಡಿ ಸ್ಮರಣಿಕೆ ಫಲ ಪುಷ್ಪವಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.

ಸಮಾರಂಭ ಉದ್ಘಾಟಿಸಿದ ಹರಪನಹಳ್ಳಿ ಶಾಸಕರಾದ ಶ್ರೀಮತಿ ಎಂ.ಪಿ.ಲತಾ ಮಲ್ಲಿಕಾರ್ಜುನ ಮಾತನಾಡಿ ಶಾಂತಿ ಸುಖಮಯ ಜೀವನಕ್ಕೆ ಧರ್ಮಾಚರಣೆ ಬಹಳ ಮುಖ್ಯ. ಅಂತರಂಗದ ಬೆಳಕಿಗಿಂತ ಬಹಿರಂಗದ ಬೆಳಕು ಹೆಚ್ಚೆಂದು ಮನುಷ್ಯ ತಿಳಿದಿರುತ್ತಾನೆ. ಗುರಿಯಿಲ್ಲದ ಮತ್ತು ಗುರು ಇಲ್ಲದ ಜೀವನ ಬೆಳೆಯಲಾರದು. ಲಿಂ.ಚಂದ್ರಮೌಳೀಶ್ವರ ಶ್ರೀಗಳವರು ಶ್ರಮಪಟ್ಟು ಶಿಕ್ಷಣ ಕೇಂದ್ರ ಹುಟ್ಟು ಹಾಕಿ ಬೆಳೆಸಿದ್ದು ಅವರಲ್ಲಿರುವ ಸಾಮಾಜಿಕ ಕಾಳಜಿಯನ್ನು ಕಾಣಬಹುದಾಗಿದೆ. ಹಿರಿಯರ ಆದರ್ಶ ದಾರಿಯಲ್ಲಿ ವರಸದ್ಯೋಜಾತ ಶ್ರೀಗಳವರು ಸದಾ ಶ್ರಮಿಸುತ್ತಿರುವುದು ಸಂತೋಷವನ್ನುಂಟು ಮಾಡುತ್ತದೆ ಎಂದರು. ನೇತೃತ್ವ ವಹಿಸಿದ ತೆಗ್ಗಿನಮಠ ಸಂಸ್ಥಾನದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಹೊನ್ನು ಹೆಣ್ಣು ಮಣ್ಣಿಗಾಗಿ ಮಡಿದವರು ಕೋಟಿ ಕೋಟಿ ಜನ. ಆದರೆ ಭಗವಂತನಿಗಾಗಿ ಸತ್ತವರನ್ನು ಕಾಣಲಾಗದು. ಮಹಾನುಭಾವರಿಗೆ ಸತ್ಯವೇ ಸಂಪತ್ತು. ಧರ್ಮವೇ ಅವರ ಉಸಿರು. ಭೌತಿಕ ಸಂಪತ್ತಿಗಾಗಿ ಹೋರಾಡಿದವರು ಕಾಲಗರ್ಭದಲ್ಲಿ ಬೆರೆತು ಹೋದರು. ಜಗದ ಜನತೆಗೆ ಬೆಳಕು ತೋರುವ ಜೀವನ ಸಾಗಿಸಿದ ಮಹಾತ್ಮರ, ಋಷಿಮುನಿಗಳ ಮತ್ತು ಸಂತ ಮಹಂತರ ಮಾತುಗಳನ್ನು ಯಾರೂ ಮರೆಯುವಂತಿಲ್ಲ. ಲಿಂ.ಚಂದ್ರಮೌಳೀಶ್ವರ ಶ್ರೀಗಳವರ ಸಾಧನೆ ಬೋಧನೆ ವೀರಶೈವ ಸಮಾಜಕ್ಕೆ ಮತ್ತು ಧರ್ಮ ಪೀಠಗಳಿಗೆ ಅಮೂಲ್ಯ ಕೊಡುಗೆ ಕೊಟ್ಟಿದ್ದನ್ನು ಮರೆಯಲಾಗದೆಂದರು.

## ಕಾಶ್ಮೀರದ ಅರಣ್ಯದಲ್ಲಿ ಉಗ್ರರ ಅಡುಗು ತಾಣ ಪತ್ತೆ; ಮದ್ದುಗುಂಡು ವಶಕ್ಕೆ ಪಡೆದ ಭದ್ರತಾ ಪಡೆ

**ಶ್ರೀನಗರ:** ದೋಡಾದಲ್ಲಿರುವ ಜಮ್ಮು ಮತ್ತು ಕಾಶ್ಮೀರ ಪೊಲೀಸರ ವಿಶೇಷ ಕಾರ್ಯಾಚರಣೆ ಗುಂಪು (ಎಸ್‌ಒಜಿ) ಭಾನುವಾರ ಥಾತ್ರಿ ಪೊಲೀಸ್ ಠಾಣೆ ವ್ಯಾಪ್ತಿಗೆ ಬರುವ ಭಲಾರಾ ಅರಣ್ಯ ಪ್ರದೇಶದಲ್ಲಿ ಭಾರೀ ಕಾರ್ಯಾಚರಣೆ ನಡೆಸಲಾಗಿದ್ದು, ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಕ್ಕೆ ಪಡೆಯಲಾಗಿದೆ. ಎಸ್‌ಎಸ್‌ಪಿ ದೋಡಾ ಸಂದೀಪ್ ಮೆಹ್ತಾ ಅವರ ಮೇಲ್ವಿಚಾರಣೆಯಲ್ಲಿ ಈ ಕಾರ್ಯಾಚರಣೆ ನಡೆಸಲಾಯಿತು. ನಿರ್ದಿಷ್ಟ ಗುಪ್ತಚರ ಮಾಹಿತಿಯ ಮೇರೆಗೆ, ಜಮ್ಮು ಮತ್ತು ಕಾಶ್ಮೀರ ಪೊಲೀಸರ ಎಸ್‌ಒಜಿ ತಂಡವು ಅರಣ್ಯ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿತು, ಇದರಲ್ಲಿ ಒಂದು ಎಸ್‌ಎಲ್‌ಆರ್ ರೈಫಲ್, ಎರಡು ಮ್ಯಾಗಜೀನ್‌ಗಳು ಮತ್ತು 22 ಲೈವ್ ಗುಂಡುಗಳು ಪತ್ತೆಯಾಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳ ವಶಪಡಿಸಿಕೊಂಡಿರುವುದು ಈ ಪ್ರದೇಶದಲ್ಲಿ ಭದ್ರತಾ ಜಾಲವನ್ನು ಬಲಪಡಿಸುವ ಮತ್ತು



ಸಮಾಜ ವಿರೋಧಿ ಅಥವಾ ರಾಷ್ಟ್ರ ವಿರೋಧಿ ಅಂಶಗಳಿಂದ ಅವುಗಳ ಸಂಭಾವ್ಯ ದುರುಪಯೋಗವನ್ನು ತಡೆಯುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಈ ಕಾರ್ಯಾಚರಣೆಯು ದೋಡಾ ಜಿಲ್ಲೆಯಲ್ಲಿ ಶಾಂತಿ, ಸ್ಥಿರತೆ ಮತ್ತು ಸಾರ್ವಜನಿಕ ಸುರಕ್ಷತೆಯನ್ನು ಕಾಪಾಡಿಕೊಳ್ಳಲು ಜಮ್ಮು ಮತ್ತು ಕಾಶ್ಮೀರ ಪೊಲೀಸರ ಅಚಲ ಬದ್ಧತೆಯನ್ನು ಮತ್ತೊಮ್ಮೆ ಎತ್ತಿ ತೋರಿಸುತ್ತದೆ ಎಂದು ಪ್ರಕಟಣೆ ತಿಳಿಸಿದೆ. ಅರಣ್ಯದಲ್ಲಿ ವಶಪಡಿಸಿಕೊಳ್ಳಲಾದ ಆಯುಧದ ಮೂಲವನ್ನು ಖಚಿತಪಡಿಸಿಕೊಳ್ಳಲು ಮತ್ತು ಅದನ್ನು ಅಲ್ಲಿಟ್ಟ ವ್ಯಕ್ತಿಗಳು ಅಥವಾ ಗುಂಪುಗಳನ್ನು ಗುರುತಿಸಲು ಹೆಚ್ಚಿನ ತನಿಖೆ ನಡೆಯುತ್ತಿದೆ.

ಕಾನೂನುಬಾಹಿರ ಚಟುವಟಿಕೆಗಳು (ತಡೆಗಟ್ಟುವಿಕೆ) ಕಾಯ್ದೆ (ಯುಎಪಿಎ) ಅಡಿಯಲ್ಲಿ ನಿಷೇಧಿಸಲಾದ ನಿಷೇಧಿತ ಸಂಘಟನೆಯಾದ ಜಮಾತ್–ಎ–ಇಸ್ಲಾಮಿ (ಜೆಇಐ) ನೊಂದಿಗೆ ಸಂಪರ್ಕ ಹೊಂದಿರುವ ವ್ಯಕ್ತಿಗಳು ಮತ್ತು ಆವರಣಗಳನ್ನು ಗುರಿಯಾಗಿಸಿಕೊಂಡು ಪೊಲೀಸರು ಶೋಪಿಯಾನ್ ಜಿಲ್ಲೆಯಾದ್ಯಂತ ಹಲವಾರು ಸ್ಥಳಗಳಲ್ಲಿ ಸೂಕ್ಷ್ಮವಾಗಿ ಪರಿಶೀಲನೆ ನಡೆಸುತ್ತಿದ್ದಾರೆ.

ಜಮ್ಮು ಕಾಶ್ಮೀರದ ವೈದ್ಯಕೀಯ ಕಾಲೇಜಿನ 50 ಸೀಟ್‌ಗಳ ಪೈಕಿ 42 ಮುಸ್ಲಿಂ ವಿದ್ಯಾರ್ಥಿಗಳು; ಬಿಜೆಪಿಯಿಂದ ವಿರೋಧ

ಜಮಾತ್–ಎ–ಇಸ್ಲಾಮಿ ಜಮ್ಮು ಮತ್ತು ಕಾಶ್ಮೀರ (ಜೆಇಐ–ಜೆ&ಕೆ) ಸಂಘಟನೆಯನ್ನು ಭಾರತ ಸರ್ಕಾರ ಹಲವು ಬಾರಿ ನಿಷೇಧಿಸಿದೆ. "ರಾಷ್ಟ್ರ ವಿರೋಧಿ ಪ್ರತ್ಯೇಕತಾವಾದಿ ಚಟುವಟಿಕೆಗಳು" ಮತ್ತು ಹಿಜ್ಬುಲ್ ಮುಜಾಹಿದ್ದೀನ್‌ನಂತಹ ಉಗ್ರಗಾಮಿ ಗುಂಪುಗಳೊಂದಿಗೆ ಸಂಪರ್ಕ ಹೊಂದಿರುವ ಆರೋಪದ ಮೇಲೆ 2019 ರಲ್ಲಿ ಕಾನೂನುಬಾಹಿರ ಚಟುವಟಿಕೆಗಳು (ತಡೆಗಟ್ಟುವಿಕೆ) ಕಾಯ್ದೆ (ಯುಎಪಿಎ) ಅಡಿಯಲ್ಲಿ ಇತ್ತೀಚೆಗೆ ನಿಷೇಧಿಸಲಾಯಿತು.

## 12 ಮಂದಿ ನಕ್ಸಲೀಯರು ಶರಣು

**ನವದೆಹಲಿ:** ಛತ್ತೀಸ್ ಗಢದ ಖೈರಾಗಢ್ ಚುಯಿಖಾದನ್ ಗಂಡೈ ಜಿಲ್ಲೆಯಲ್ಲಿ ಸಿಸಿಎಂ ರಾಮಧೇರ್ ಮಜ್ಜಿ ಸೇರಿದಂತೆ 12 ನಕ್ಸಲೀಯರು ಪೊಲೀಸರ ಮುಂದೆ ಶರಣಾಗಿದ್ದಾರೆ.

ಬಕರ್ಕಟ್ಟಾ ಪೊಲೀಸ್ ಠಾಣೆಯಲ್ಲಿ ಶರಣಾಗತಿ ಕಾರ್ಯ ನಡೆದಿದ್ದು, ಎಂಎಂಸಿ (ಮಹಾರಾಷ್ಟ್ರ, ಮಧ್ಯಪ್ರದೇಶ, ಛತ್ತೀಸ್ ಗಢ) ವಲಯದಲ್ಲಿ ಮಾವೋವಾದಿ ಚಳವಳಿಗೆ ಗಮನಾರ್ಹವಾಗಿ ತಗ್ಗಿದಂತಾಗಿದೆ.

ರಾಮಧೇರ್ ಮಜ್ಜಿ ಬಂಧನಕ್ಕೆ ಒಂದು ಕೋಟಿ ರೂ. ಬಹುಮಾನ ಘೋಷಿಸಲಾಗಿತ್ತು. ಮಧ್ಯಪ್ರದೇಶ, ಮಹಾರಾಷ್ಟ್ರ ಮತ್ತು ಛತ್ತೀಸ್ ಗಢದಾದ್ಯಂತ ಪೊಲೀಸ್ ಪಡೆಗಳಿಗೆ ರಾಮಧೇರ್ ಬಂಧನ ಅತ್ಯಂತ ದೊಡ್ಡ ಸವಾಲುಗಳಲ್ಲಿ ಒಂದಾಗಿತ್ತು.

ಎಂಎಂಸಿ ವಲಯದಲ್ಲಿ ಸಕ್ರಿಯವಾಗಿರುವ ಸಿಸಿ (ಕೇಂದ್ರ ಸಮಿತಿ) ಸದಸ್ಯ ಮಜ್ಜಿ ತಮ್ಮ ವಿಭಾಗೀಯ ಸಮಿತಿ ಸದಸ್ಯರೊಂದಿಗೆ ಆಗಮಿಸಿದರು ಮತ್ತು ಎಕೆ–47 ರೈಫಲ್ ಸೇರಿದಂತೆ ಶಸ್ತ್ರಾಸ್ತ್ರಗಳನ್ನು ಕೆಳಗಿಳಿಸಿದರು. ಅವರೊಂದಿಗೆ ಎಸಿಎಂ ರಾಮ್ ಸಿಂಗ್ ದಾದಾ ಮತ್ತು ಎಸಿಎಂ ಸುಕೇಶ್ ಪೊಟ್ಟಮ್ ಕೂಡ ಶರಣಾಗಿದ್ದು, ತಮ್ಮ ಶಸ್ತ್ರಾಸ್ತ್ರಗಳನ್ನು ಹಸ್ತಾಂತರಿಸಿದರು.

ಎಕೆ–47, ಇನ್ಸಾಸ್ ರೈಫಲ್, ಎಸ್‌ಎಲ್‌ಆರ್, 303 ರೈಫಲ್ ಗಳು ಮತ್ತು 0.30 ಕಾರ್ಬೈನ್ ಗಳು ಸೇರಿದಂತೆ ಶಸ್ತ್ರಾಸ್ತ್ರಗಳ ಸಂಗ್ರಹವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ದೃಢಪಡಿಸಿದ್ದಾರೆ.


ಶರಣಾದವರಲ್ಲಿ ಆರು ಮಹಿಳಾ ಕಾರ್ಯಕರ್ತರು ಸೇರಿದ್ದಾರೆ. ಇದು ಮಾವೋವಾದಿ ಶ್ರೇಣಿಯಲ್ಲಿ ಮಹಿಳೆಯರ ಆಳವಾದ ಒಳಗೊಳ್ಳುವಿಕೆಯನ್ನು ಬಿಂಬಿಸುತ್ತದೆ.

ಈ ಪಟ್ಟಿಯಲ್ಲಿ ಲಕ್ಷ್ಮಿ, ಶೀಲಾ, ಯೋಗಿತಾ, ಕವಿತಾ ಮತ್ತು ಸಾಗರ್, ಡಿವಿಸಿಎಂ (ವಿಭಾಗೀಯ ಸಮಿತಿ ಸದಸ್ಯೆ) ಲಲಿತಾ ಮತ್ತು ಡಿವಿಸಿಎಂ ಜಾನಕಿ ಇದ್ದಾರೆ.

## ಹೈದರಾಬಾದ್‌ನ ರಸ್ತೆಗೆ ಡೊನಾಲ್ಡ್ ಟ್ರಂಪ್ ಹೆಸರಿಟ್ಟ ತೆಲಂಗಾಣ ಸರ್ಕಾರ

**ಹೈದರಾಬಾದ್:** ತೆಲಂಗಾಣ ಸರ್ಕಾರವು ಅಮೆರಿಕದ 45ನೇ ಮತ್ತು 47ನೇ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೆಸರನ್ನು ರಾಜ್ಯದಲ್ಲಿನ ಯುಎಸ್ ಕಾನ್ಸುಲೇಟ್ ಜನರಲ್ ರಸ್ತೆಗೆ ಮರುನಾಮಕರಣ ಮಾಡಲುನಿರ್ಧರಿಸಿದೆ. ಹೈದರಾಬಾದ್‌ನಲ್ಲಿರುವ ಯುನೈಟೆಡ್ ಸ್ಟೇಟ್ಸ್ ಕಾನ್ಸುಲೇಟ್ ಜನರಲ್‌ನ ಹೈ ಪ್ರೊಫೈಲ್ ರಸ್ತೆಯನ್ನು ಡೊನಾಲ್ಡ್ ಟ್ರಂಪ್ ಅವೆನ್ಯೂ ಎಂದು ಕರೆಯಲು ನಿರ್ಧರಿಸಲಾಗಿದೆ.

ರಾಜ್ಯ ಸರ್ಕಾರವು ಕೇಂದ್ರ ವಿದೇಶಾಂಗ ಸಚಿವಾಲಯ ಮತ್ತು ಅಮೆರಿಕ ರಾಯಭಾರ ಕಚೇರಿಗೆ ಪತ್ರ ಬರೆದು ಯೋಜನೆಗಳ ಬಗ್ಗೆ ತಿಳಿಸಲಿದೆ. ಈ ವರ್ಷದ ಆರಂಭದಲ್ಲಿ, ದೆಹಲಿಯಲ್ಲಿ ನಡೆದ ವಾರ್ಷಿಕ ಅಮೆರಿಕ–ಭಾರತ ಕಾರ್ಯತಂತ್ರದ ಪಾಲುದಾರಿಕೆ ವೇದಿಕೆ (ಯುಎಸ್‌ಐಎಸ್‌ಪಿಎಫ್) ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಹೈದರಾಬಾದ್‌ನ ಪ್ರಮುಖ ರಸ್ತೆಗಳಿಗೆ ಪ್ರಮುಖ ಜಾಗತಿಕ ಕಂಪನಿಗಳ ಹೆಸರಿಡಲು ಪ್ರಸ್ತಾಪಿಸಿದ್ದರು. ಮೋದಿ ಒಬ್ಬ ಮಹಾನ್ ವ್ಯಕ್ತಿ, ಸ್ನೇಹಿತ! ಭಾರತ ಭೇಟಿ ಬಗ್ಗೆ ಸುಳಿವು ಕೊಟ್ರಾ ಡೊನಾಲ್ಡ್ ಟ್ರಂಪ್?



ಈ ಪ್ರಸ್ತಾವನೆ, ಭಾರತವನ್ನು ಪ್ರತಿನಿಧಿಸುವ ರಾಜ್ಯವಾಗಿ ತೆಲಂಗಾಣವನ್ನು ನಿರ್ಮಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಉಪಕ್ರಮದ ಭಾಗವಾಗಿದೆ. ಜೊತೆಗೆ, ಪ್ರತಿಷ್ಠಿತ ವ್ಯಕ್ತಿಗಳು ಮತ್ತು ಸಂಸ್ಥೆಗಳ ಗೌರವ ಮತ್ತು ಗುರುತಿನ ಚಿಹ್ನೆಯಾಗಿ ಇನ್ನೂ ಕೆಲವು ರಸ್ತೆಗಳನ್ನು ಮೀಸಲಿಡುವ ಬಗ್ಗೆಯೂ ಸರ್ಕಾರ ಪರಿಶೀಲಿಸುತ್ತಿದೆ.

ನಗರದ ರವಿರ್ಯಾಲದಲ್ಲಿರುವ ನೆಹರು ಹೊರ ವರ್ತುಲ ರಸ್ತೆ ಮತ್ತು ಹೊಸದಾಗಿ ಪ್ರಸ್ತಾಪಿಸಲಾದ ರೇಡಿಯಲ್ ರಿಂಗ್ ರಸ್ತೆಗೆ ಸಂಪರ್ಕ ಕಲ್ಪಿಸುವ ಮುಂಬರುವ ಗ್ರೀನ್‌ಫೀಲ್ಡ್ ರೇಡಿಯಲ್ ರಸ್ತೆಗೆ ದಿವಂಗತ ಕೈಗಾರಿಕೋದ್ಯಮಿ ಪದ್ಮಶ್ರೀ ರತನ್ ಟಾಟಾ ಅವರ ಹೆಸರಿಡಲಾಗುವುದು. ಸರ್ಕಾರ ಈ ಹಿಂದೆ ರವಿರ್ಯಾಲದಲ್ಲಿರುವ ಇಂಟರ್‌ಚೇಂಜ್‌ನ ಹೆಸರನ್ನು ಟಾಟಾ ಇಂಟರ್‌ಚೇಂಜ್ ಎಂದು ಬದಲಾಯಿಸಿತ್ತು. ಇದರ ಜೊತೆಗೆ, ಗ್ಲೋಬಲ್ ಮಟ್ಟದಲ್ಲಿ ಗೂಗಲ್ ಮ್ಯಾಪ್‌ಗಳು ಮತ್ತು ಕಂಪನಿಯ ಕೊಡುಗೆ ಮತ್ತು ಪ್ರಭಾವವನ್ನು ಗೌರವಿಸುವಂತೆ ಪ್ರಮುಖ ರಸ್ತೆ ವಿಭಾಗವನ್ನು ಗೂಗಲ್ ಸ್ಟ್ರೀಟ್ ಎಂದು ಹೆಸರಿಡುವ ನಿರ್ಧಾರ ಕೈಗೊಳ್ಳಲಾಗಿದೆ. ಹೈದರಾಬಾದ್‌ನಲ್ಲಿ ಅಮೆರಿಕ ಹೊರತುಪಡಿಸಿ ಕಂಪನಿಯ ಅತಿ ದೊಡ್ಡ ಕ್ಯಾಂಪಸ್ ಸ್ಥಾಪನೆಯೂ ನಡೆಯಲಿದೆ.

ಹೈದರಾಬಾದ್ ಮೆಟ್ರೋದಲ್ಲಿ ಭದ್ರತಾ ಸಿಬ್ಬಂದಿಯಾಗಿ 20 ತೃತೀಯ ಲಿಂಗಿಗಳ ನೇಮಕ

ಇತ್ತೀಚೆಗಷ್ಟೇ ಹೈದರಾಬಾದ್ ಮೆಟ್ರೋ ರೈಲು ಲಿಮಿಟೆಡ್, ತನ್ನ ಭದ್ರತಾ ವಿಭಾಗದಲ್ಲಿ 20 ತೃತೀಯ ಲಿಂಗಿ ಸಿಬ್ಬಂದಿಯನ್ನು ನೇಮಕ ಮಾಡುವ ಮೂಲಕ ಸಾಮಾಜಿಕ ಸಬಲೀಕರಣದ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯನ್ನಿರಿಸಿತು. ಈ ಹೊಸ ನೇಮಕಾತಿಯು ಮಹಿಳಾ ಭದ್ರತೆ ಹೆಚ್ಚಿಸುವುದರ ಜತೆಗೆ ಎಲ್ಲರಿಗೂ ಸುರಕ್ಷಿತ ಹಾಗೂ ಗೌರವಯುತ ಪ್ರಯಾಣ ವಾತಾವರಣ ನಿರ್ಮಿಸುವಲ್ಲಿ ನೆರವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿತ್ತು.

## ಇಂಡಿಗೋ ಬಿಕ್ಕಟ್ಟು; ಕಠಿಣ ಕ್ರಮದ ಎಚ್ಚರಿಕೆ ನೀಡಿದ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು

**ನವದೆಹಲಿ:** ದೇಶಾದ್ಯಂತ ವಿಮಾನ ನಿಲ್ದಾಣಗಳಲ್ಲಿ ಸಿಬ್ಬಂದಿ ಕೊರತೆಯಿಂದಾಗಿ ಅವ್ಯವಸ್ಥೆ ಉಂಟಾದ ನಂತರ ಇಂಡಿಗೋ ಪೂರ್ಣ ಪ್ರಮಾಣದ ಕಾರ್ಯಾಚರಣೆಯನ್ನು ಪುನಃಸ್ಥಾಪಿಸಲು ಪ್ರಯತ್ನಿಸುತ್ತಿದೆ. ಈ ಸಂದರ್ಭದಲ್ಲಿ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು ಅವರು, ಇತರೆ ಏರ್‌ಲೈನ್‌ಗಳಿಗೆ ಮಾದರಿ ಆಗುವಂತೆ ವಿಮಾನಯಾನ ಸಂಸ್ಥೆಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದ್ದಾರೆ.

ರಾಜ್ಯಸಭೆಯಲ್ಲಿ ಇಂದು ಮಾತನಾಡಿದ ಸಚಿವರು, ನೂರಾರು ವಿಮಾನಗಳ ರದ್ದತಿ ಮತ್ತು ಸಾವಿರಾರು ಪ್ರಯಾಣಿಕರ ಸಿಲುಕುವಿಕೆಗೆ ಕಾರಣವಾದ ಗೊಂದಲವು ಹೊಸ ಪ್ರಯಾಣಿಕರ ಸುರಕ್ಷತಾ ನಿಯಮಗಳು ಜಾರಿಗೆ ಬಂದ ನಂತರ ಇಂಡಿಗೋ ಎದುರಿಸಿದ ಆಂತರಿಕ ಸಂಕಷ್ಟದ ಪರಿಣಾಮವಾಗಿದೆ ಎಂದು ಹೇಳಿದರು. ಕೇಂದ್ರದ ಆದೇಶದ ನಂತರ ಪ್ರಯಾಣ ದರ ಮಿತಿ ಜಾರಿಗೆ ತಂದ ಏರ್ ಇಂಡಿಯಾ ಗ್ರೂಪ್; ಹೆಚ್ಚಿನ ಬೆಲೆಯ ಟಿಕೆಟ್‌ಗಳಿಗೆ ಮರುಪಾವತಿ

ಪೈಲಟ್‌ಗಳು, ಸಿಬ್ಬಂದಿ ಮತ್ತು ಪ್ರಯಾಣಿಕರ





ಬಗ್ಗೆ ಕಾಳಜಿ ವಹಿಸುತ್ತೇವೆ. ನಾವು ಎಲ್ಲಾ ವಿಮಾನಯಾನ ಸಂಸ್ಥೆಗಳಿಗೆ ಸ್ಪಷ್ಟಪಡಿಸಿದ್ದೇವೆ. ಇಂಡಿಗೋ ಸಿಬ್ಬಂದಿ ಮತ್ತು ಪಟ್ಟಿಯನ್ನು ನಿರ್ವಹಿಸಬೇಕಾಗಿತ್ತು. ಪ್ರಯಾಣಿಕರು ಬಹಳಷ್ಟು ತೊಂದರೆಗಳನ್ನು ಎದುರಿಸಿದರು. ನಾವು ಪರಿಸ್ಥಿತಿಯನ್ನು ಹಗುರವಾಗಿ ಪರಿಗಣಿಸುತ್ತಿಲ್ಲ. ನಾವು ಕಠಿಣ ಕ್ರಮ ಕೈಗೊಳ್ಳುತ್ತೇವೆ. ನಾವು ಪ್ರತಿಯೊಂದು ವಿಮಾನಯಾನ ಸಂಸ್ಥೆಗೂ ಒಂದು ಮಾದರಿಯಾಗುತ್ತೇವೆ. ಯಾವುದೇ ಅನುಸರಣೆಯಲ್ಲಿ ಲೋಪ ಕಂಡುಬಂದರೆ, ನಾವು ಕ್ರಮ ಕೈಗೊಳ್ಳುತ್ತೇವೆ ಎಂದು ಅವರು ಸದನಕ್ಕೆ ತಿಳಿಸಿದರು. ಕೇಂದ್ರ ಸರ್ಕಾರವು ಈ ವಿಷಯದ ಬಗ್ಗೆ ಸಂಪೂರ್ಣ ತನಿಖೆಯನ್ನು ಪ್ರಾರಂಭಿಸಿದೆ ಎಂದು ಅವರು ಹೇಳಿದರು.

ವಿಮಾನಯಾನ ಕ್ಷೇತ್ರದಲ್ಲಿ ಹೆಚ್ಚು ಕಂಪನಿಗಳು ಭಾಗವಹಿಸಬೇಕು ಎಂದು ಸರ್ಕಾರ ಬಯಸುತ್ತದೆ. ದೇಶಕ್ಕೆ ಐದು ಪ್ರಮುಖ ಏರ್‌ಲೈನ್ಸ್‌ಗಳನ್ನು ಹೊಂದುವ ಸಾಮರ್ಥ್ಯವಿದೆ ಎಂದು ಸಚಿವರು ಹೇಳಿದರು. ಆದರೆ, ಸಚಿವರ ಉತ್ತರದಿಂದ ಅಸಮಾಧಾನಗೊಂಡ ವಿರೋಧ ಪಕ್ಷದ ಸದಸ್ಯರು ಸಭಾತ್ಯಾಗ ಮಾಡಿದರು.

ದೇಶಾದ್ಯಂತ ವಿಮಾನ ನಿಲ್ದಾಣಗಳಲ್ಲಿ ಹಲವಾರು ದಿನಗಳಿಂದ ಅವ್ಯವಸ್ಥೆ, ಗೊಂದಲ ಇತ್ಯಾದಿ ಉಂಟಾಗಿ, ನೂರಾರು ಇಂಡಿಗೊ ವಿಮಾನಗಳು ರದ್ದಾಗಿವೆ. ಇದರಿಂದ ಹಲವರ ವಿವಾಹ ಕಾರ್ಯಕ್ರಮ, ರಜಾದಿನಗಳು ಮತ್ತು ವೃತ್ತಿಪರ ಬದ್ಧತೆಗಳು ತಲೆಕೆಳಗಾದ ನಂತರ ಸಚಿವರ ಈ ಹೇಳಿಕೆಗಳು ಬಂದಿವೆ.

ಸರ್ಕಾರವು ಸುಮಾರು ಎರಡು ವರ್ಷಗಳ ಹಿಂದೆ ಘೋಷಿಸಿದ ಹೊಸ ವಿಮಾನ ಸುರಕ್ಷತಾ ನಿಯಮಗಳೇ ಈ ಗೊಂದಲದ ಕೇಂದ್ರಬಿಂದುವಾಗಿದೆ. ವಿಮಾನ ಅಪಘಾತಗಳಿಗೆ ಪ್ರಮುಖ ಕಾರಣವಾಗಿರುವ ಪೈಲಟ್‌ಗಳ ಆಯಾಸವನ್ನು ನಿವಾರಿಸುವತ್ತ ಈ ನಿಯಮಗಳು ಗಮನಹರಿಸಿದವು. ಇದು ವಿಮಾನದ ಡೌನ್‌ಟೈಮ್ ಅನ್ನು ಹೆಚ್ಚಿಸುವ ಮೂಲಕ ಸಮಸ್ಯೆಗೆ ಪರಿಹಾರವನ್ನು ಒದಗಿಸಿತು. ನಿಯಮಗಳ ಅನುಷ್ಠಾನವು ವಿಮಾನಯಾನ ಸಂಸ್ಥೆಗಳು ಹೆಚ್ಚಿನ ಪೈಲಟ್‌ಗಳನ್ನು ನೇಮಿಸಿಕೊಳ್ಳುವಂತೆ ಮಾಡಿತು.

## ಸಿಂಹಾಚಲಂ ದೇವಸ್ಥಾನಕ್ಕೆ ಕೊಹ್ಲಿ ಭೇಟಿ



**ವಿಶಾಖಪಟ್ಟಣಂ:** ಟೀಮ್ ಇಂಡಿಯಾದ ಆಟಗಾರ ವಿರಾಟ್ ಕೊಹ್ಲಿ ದೇವರು–ದೇವಾಲಯಗಳ ಮೇಲೆ ಆಳವಾದ ನಂಬಿಕೆ ಇಟ್ಟಿದ್ದಾರೆ. ಅವರು ತಮ್ಮ ಪತ್ನಿ ಅನುಷ್ಕಾ ಶರ್ಮಾ ಅವರೊಂದಿಗೆ ಧಾರ್ಮಿಕ ಸ್ಥಳಗಳಿಗೆ ಭೇಟಿ ನೀಡುವುದನ್ನು ಹೆಚ್ಚಾಗಿ ಕಾಣಬಹುದು. ದಕ್ಷಿಣ ಆಫ್ರಿಕಾ ವಿರುದ್ಧದ ಏಕದಿನ ಸರಣಿಯಲ್ಲಿ ಅವರ ಅದ್ಭುತ ಬ್ಯಾಟಿಂಗ್ ಪ್ರದರ್ಶನ ಮತ್ತು ಭಾರತವನ್ನು ಗೆಲುವಿನತ್ತ ಕೊಂಡೊಯ್ದ ನಂತರವೂ ಇದೇ ರೀತಿಯ ಭಾವನೆ ವ್ಯಕ್ತವಾಗಿದೆ. ಸರಣಿ ಮುಗಿದ ತಕ್ಷಣ, ಕೊಹ್ಲಿ ವಿಶಾಖಪಟ್ಟಣಂನ ಪ್ರಸಿದ್ಧ ಸಿಂಹಾಚಲಂ ದೇವಸ್ಥಾನಕ್ಕೆ ಭೇಟಿ ನೀಡಿ ವಿಷ್ಣುವಿಗೆ ಪ್ರಾರ್ಥನೆ ಸಲ್ಲಿಸಿದ್ದಾರೆ. ಅವರು ದೇವಾಲಯದ ಸಂಪ್ರದಾಯಗಳ ಪ್ರಕಾರ ಪೂಜೆ ಸಲ್ಲಿಸಿದ್ದಾರೆ. ದೇವಾಲಯದಿಂದ ಅವರ ಹಲವಾರು ವೀಡಿಯೊಗಳು ಸಾಮಾಜಿಕ ಮಾಧ್ಯಮದಲ್ಲಿ ವೇಗವಾಗಿ ವೈರಲ್ ಆಗುತ್ತಿವೆ. ಸಿಂಹಾಚಲಂ ದೇವಾಲಯವು ವಿಷ್ಣುವಿನ ಅವತಾರವಾದ ವರಾಹ–ನರಸಿಂಹನಿಗೆ ಸಮರ್ಪಿತವಾಗಿದೆ. 300 ಮೀಟರ್ ಎತ್ತರದಲ್ಲಿರುವ ಇದು ಸಿಂಹಾಚಲ ಬೆಟ್ಟದಲ್ಲಿದೆ. ಸಿಂಹಾಚಲ ಎಂಬ ಪದದ ಅರ್ಥ ಸಿಂಹ ಪರ್ವತ ಮತ್ತು ಇದು ನರಸಿಂಹ ದೇವರ ವಾಸಸ್ಥಾನ ಎಂದು ನಂಬಲಾಗಿದೆ.

ದೇವಸ್ಥಾನಕ್ಕೆ ಭೇಟಿ ನೀಡಿದಾಗ ಕೊಹ್ಲಿ ಸರಳ ಲುಕ್‌ನಲ್ಲಿ ಕಾಣಿಸಿಕೊಂಡರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**